ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 85 ಸಂಚಿಕೆ- 85 | PAGE-8 ಪುಟ-8 | ಶುಕ್ರವಾರ 09.05.2025 | RS.2/- ಬೆಲೆ 2/-

# ಪಾಕ್ ಏರ್ ಡಿಫೆನ್ಸ್ ಸಿಸ್ಟಮ್ ಧ್ವಂಸ

## 15 ಭಾರತೀಯ ನಗರಗಳ ಮೇಲಿನ ಪಾಕ್ ದಾಳಿ ವಿಫಲಗೊಳಿಸಿದ ಭಾರತೀಯ ಸೇನೆ





ಮಲ್ಲಮ ನುಡಿ ವಾರ್ತೆ ನವದೆಹಲಿ:ಮೇ.8: ಆಪರೇಷನ್ ಸಿಂದೂರ್ ಕಾರ್ಯಾಚರಣೆಗೆ ಪ್ರತಿಯಾಗಿ ಪಾಕಿಸ್ತಾನ ಭಾರತದ ಮೇಲೆ ನಡೆಸಲು ಉದ್ದೇಶಿಸಲಾಗಿದ್ದ ದಾಳಿಯನ್ನು ಭಾರತೀಯ ಸೇನೆ ವಿಫಲಗೊಳಿಸಿದೆ.


ಅಲರ್ಟ್ ಆಗಿರುವ ಭಾರತೀಯ ಸೇನೆ ಲಾಹೋರ್ ನಲ್ಲಿ ಪಾಕಿಸ್ತಾನದ ಏರ್ ಡಿಫೆನ್ಸ್ ಸಿಸ್ಟಮ್ ನ್ನು ಎಸ್-400 ಕ್ಷಿಪಣಿ ವ್ಯವಸ್ಥೆಯನ್ನು ಬಳಸಿ ಧ್ವಂಸಗೊಳಿಸಿದೆ. ಈ ಬಗ್ಗೆ ಭಾರತೀಯ ಸೇನೆ ಅಧಿಕೃತ ಮಾಹಿತಿ ಪ್ರಕಟಿಸಿದ್ದು ದಾಳಿಯನ್ನು ಖಚಿತಪಡಿಸಿದೆ. ಪಾಕಿಸ್ತಾನ ಚೀನಾದಿಂದ ಊಕಿ-9 ಏರ್ ಡಿಫೆನ್ಸ್ ಸಿಸ್ಟಮ್ ನ್ನು ಪಡೆದಿತ್ತು ಈಗ ಈ ವ್ಯವಸ್ಥೆಯನ್ನು ಭಾರತ ಸಂಪೂರ್ಣ ನಾಶ ಮಾಡಿದೆ. ದಾಳಿಯನ್ನು ಪಾಕಿಸ್ತಾನ ಸಹ ಖಚಿತಪಡಿಸಿದ್ದು, ದಾಳಿಯಲ್ಲಿ ನಾಲ್ವರು ಪಾಕಿಸ್ತಾನದ ಯೋಧರು ಗಾಯಗೊಂಡಿದ್ದಾರೆ ಎಂದು ತಿಳಿಸಿದೆ. ನೆನ್ನೆರಾತ್ರಿ ಪಾಕಿಸ್ತಾನ ಭಾರತದ 15 ನಗರಗಳನ್ನು ಟಾರ್ಗೆಟ್ ಮಾಡಿ ದಾಳಿ ನಡೆಸಲು ಯತ್ನಿಸಿತ್ತು ಈ ದಾಳಿಯನ್ನು ಭಾರತ 9 ಏರ್ ಡಿಫೆನ್ಸ್ ಸಿಸ್ಟಮ್ ನ್ನು ನಾಶ ಮಾಡುವ ಮೂಲಕ ತಡೆಗಟ್ಟಿದೆ. ಆಪರೇಷನ್ ಸಿಂದೂರ್ ಗೆ ಪ್ರತೀಕಾರ ತೆಗೆದುಕೊಳ್ಳಲು ಮುಂದಾಗಿದ್ದ ಪಾಕಿಸ್ತಾನ ಭಾರತದ ಅವಂತಿಪುರ, ಶ್ರೀನಗರ, ಜಮ್ಮು, ಪಠಾಣ್‌ಕೋಟ್, ಅಮೃತಸರ, ಕಪುರ್ತಲಾ, ಜಲಂಧರ್, ಲುಧಿಯಾನ, ಆದಂಪುರ ಭಟಿಂಡ, ಚಂಡೀಗಢ, ನಲ್ ಫಲೋಡಿ, ಉತ್ತರಲೈ, ಭುಜ್ ನಗರಗಳನ್ನು ಟಾರ್ಗೆಟ್ ಮಾಡಿ ದಾಳಿ ನಡೆಸಲು ಯತ್ನಿಸಿತ್ತು.

# ಭಾರತೀಯ ಸೇನೆಗೆ ಅಭಿನಂದನೆ



ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್:ಮೇ.8:ಪಹಲ್ಗಾಮ್ ಉಗ್ರರ ದಾಳಿಗೆ ಪ್ರತೀಕಾರವಾಗಿ ಭಾರತೀಯ ಸೇನೆ ಆಪರೇಷನ್ ಸಿಂಧೂರ ಕೈಗೊಂಡು ಪಾಕಿಸ್ತಾನದ ಉಗ್ರರ 9 ನೆಲೆಗಳ ಮೇಲೆ ದಾಳಿ ನಡೆಸಿ ಪಾಕಿಸ್ತಾನಕ್ಕೆ ನಡುಕ ಹುಟ್ಟುವಂತೆ ಮಾಡಿದ್ದಾರೆ. ಭಾರತೀಯ ಸೇನೆಯ ಶೌರ್ಯ ಹಾಗೂ ಕಾರ್ಯತಂತ್ರ ರಾಷ್ಟ್ರದ ಜನರ ವಿಶ್ವಾಸ ಮತ್ತಷ್ಟು ಗಟ್ಟಿ ಮಾಡಿದೆ. ಯಶಸ್ವಿ ಕಾರ್ಯಚರಣೆ ನಡೆಸಿದ ಭಾರತೀಯ ಸೇನೆಗೆ ಅಭಿನಂದನೆಗಳು ಎಂದು ರಾಜಶೇಖರ ಪಾಟೀಲ್, ಮಾಜಿ ಸಚಿವ, ಹುಮನಾಬಾದ್ ತಿಳಿಸಿದ್ದಾರೆ.

# ರಸ್ತೆ ಅಪಘಾತ:ಮೂವರು ಬಾಲಕರ ಸಾವು



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಮೇ.8-ಸಮೀಪದ ಸೀಮಿಕೇರಿ ಬಳಿ ವಿಜಯಪುರ-ಹುಬ್ಬಳ್ಳಿ ರಸ್ತೆಯಲ್ಲಿ ಬೆಳಿಗ್ಗೆ ಸಂಭವಿಸಿದ ಅಪಘಾತದಲ್ಲಿ ಮೂವರು ಬಾಲಕರು ಸ್ಥಳದಲ್ಲಿಯೇ ಸಾವನ್ನಪ್ಪಿರುವ ಘಟನೆ ನಡೆದಿದೆ.

(2ನೇ ಪುಟ ನೋಡಿ)

# ಆಪರೇಷನ್ ಸಿಂಧೂರ ಇನ್ನೂ ಮುಗಿದಿಲ್ಲ : ರಾಜನಾಥ್ ಸಿಂಗ್



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಮೇ.8: ಪಾಕ್ ಉಗ್ರರ ವಿರುದ್ಧ ಭಾರತ ನಡೆಸಿರೋ ಆಪರೇಷನ್ ಸಿಂಧೂರ ಕಾರ್ಯಾಚರಣೆ ಇನ್ನೂ ಮುಗಿದಿಲ್ಲ. ಪಿಕ್ಚರ್ ಅಭಿ ಬಾಕಿ

(2ನೇ ಪುಟ ನೋಡಿ)

# ಬ್ಯಾಡಗಿ ಬಳಿ ಭೀಕರ ಅಪಘಾತ : 6 ಮಂದಿ ಸಾವು



ಮಲ್ಲಮ್ಮ ನುಡಿ ವಾರ್ತೆ ಹಾವೇರಿ: ಮೇ.8:ಜಿಲ್ಲೆಯ ಬ್ಯಾಡಗಿ ಬಳಿ ಸಂಭವಿಸಿದ ಭೀಕರ ಅಪಘಾತದಲ್ಲಿ ಕಾರಿನಲ್ಲಿದ್ದ ಆರು ಮಂದಿ ಸ್ಥಳದಲ್ಲೆ ಮೃತಪಟ್ಟಿರುವ ಘಟನೆ ಇಂದು ಬೆಳಗ್ಗೆ ನಡೆದಿದೆ. ಅಪಘಾತದಲ್ಲಿ ಇಬ್ಬರು ಗಂಭೀರ ಗಾಯಗೊಂಡಿದ್ದು, ಈ ಪೈಕಿ ಒಬ್ಬರ ಸ್ಥಿತಿ ಗಂಭೀರವಾಗಿದ್ದು, ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

ಇಂದು ಬೆಳಗ್ಗೆ 11.30ರ ಸುಮಾರಿನಲ್ಲಿ ರಾಷ್ಟಿ?ಯ ಹೆದ್ದಾರಿ 48ರ ಹಾವೇರಿ ಜಿಲ್ಲೆಯ ಮೋಟೆಬೆನ್ನೂರು ಬಳಿ ಮುಂದೆ ಹೋಗುತ್ತಿದ್ದ ಲಾರಿಗೆ ಹಿಂದಿನಿಂದ ಅತಿವೇಗವಾಗಿ ಬರುತ್ತಿದ್ದ ಕಾರು ಡಿಕ್ಕಿ ಹೊಡೆದ ಪರಿಣಾಮ ಈ ಭೀಕರ ಅಪಘಾತ ಸಂಭವಿಸಿದೆ. ಕಾರಿನಲ್ಲಿ ಇಬ್ಬರು ಪುರುಷರು, ಇಬ್ಬರು ಮಕ್ಕಳು ಹಾಗೂ ನಾಲ್ವರು ಮಹಿಳೆಯರು ಪ್ರಯಾಣಿಸುತ್ತಿದ್ದರು. ಈ ಪೈಕಿ ಅಪಘಾತದಲ್ಲಿ ಆರು ಮಂದಿ ಮೃತಪಟ್ಟಿದ್ದಾರೆ. ಸುದ್ದಿ ತಿಳಿದು ಬ್ಯಾಡಗಿ ಠಾಣೆ ಪೊಲೀಸರು ಸ್ಥಳಕ್ಕೆ ಆಗಮಿಸಿ ಪರಿಶೀಲಿಸಿ ಕಾರಿನೊಳಗೆ ಸಿಕ್ಕಿಕೊಂಡಿದ್ದ ಆರು ಮಂದಿಯ ಮೃತದೇಹಗಳನ್ನು ಹೊರ ತೆಗೆದು ಆಸ್ಪತ್ರೆಗೆ ರವಾನಿಸಿದ್ದಾರೆ. ಮೃತಪಟ್ಟ 6 ಜನ ರಾಣೆಬೆನ್ನೂರು ನಗರದ ಅಶೋಕ್ ನಗರದ ನಿವಾಸಿಗಳು ಎನ್ನಲಾಗಿದೆ. ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ತನಿಖೆಕೈಗೊಂಡಿದ್ದಾರೆ. ಅಪಘಾತದಿಂದಾಗಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಕೆಲಕಾಲ ವಾಹನಗಳ ಸಂಚಾರದಲ್ಲಿ ವ್ಯತ್ಯಯ ಉಂಟಾಗಿದ್ದು ಕಂಡು ಬಂದಿತು.

# ಪಹಲ್ಗಾಮ್ ಉಗ್ರ ದಾಳಿಗೆ ಭಾರತದ ಪ್ರತಿಕ್ರಿಯೆ : ಪ್ರತಿಯೊಂದು ದುಸ್ಸಾಹಕ್ಕೂ ಪಾಕಿಸ್ತಾನವೇ ಹೊಣೆ




ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಮೇ.8: ಭಾರತದಿಂದ ಉದ್ವಿಗ್ನತೆ ಉಲ್ಬಣಗೊಂಡಿಲ್ಲ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಗುರುವಾರು ಪುನರುಚ್ಚರಿಸಿದ್ದು, ಇಲ್ಲಿಯವರೆಗೂ ಪಾಕಿಸ್ತಾನದಿಂದ ಉಂಟಾದ ಗುಂಡಿನ ದಾಳಿ ನಿಲ್ಲಿಸಲು ಭಾರತೀಯ ಸೇನಾ ಪಡೆಗಳು ಪ್ರತಿಕ್ರಿಯಿಸಿವೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಹೇಳಿದೆ.


ವಿಶೇಷ ಮಾಧ್ಯಮ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಆಪರೇಷನ್ ಸಿಂಧೂರ್ ಭಾರತದ ಕಡೆಯಿಂದ ಉಲ್ಬಣಗೊಂಡಿಲ್ಲ, ಆದರೆ ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿದೆ. ಇದನ್ನು ನಿಜವಾದ ಉಲ್ಬಣವೆಂದು ಪರಿಗಣಿಸಬೇಕು ಎಂದು ಒತ್ತಿ ಹೇಳಿದರು.

ಲಾಹೋರ್‌ನಲ್ಲಿ ಪಾಕಿಸ್ತಾನದ ವಾಯು ರಕ್ಷಣಾ ವ್ಯವಸ್ಥೆಯನ್ನು ನಾಶಪಡಿಸಿದ ಭಾರತದ ಇತ್ತೀಚಿನ ವೈಮಾನಿಕ ದಾಳಿಗಳ ಕುರಿತು ಪ್ರತಿಕ್ರಿಯಿಸಿದ ಕರ್ನಲ್ ಸೋಫಿಯಾ ಖುರೇಷಿ ಮತ್ತು ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಅವರು ಉತ್ತರ ಮತ್ತು ಪಶ್ಚಿಮ ಭಾರತದ ಹಲವಾರು ಮಿಲಿಟರಿ ಪ್ರದೇಶಗಳನ್ನು ಗುರಿಯಾಗಿಸಿಕೊಂಡ ನೆರೆಯ ರಾಷ್ಟ್ರದ ಕ್ಷಿಪಣಿ ದಾಳಿಗೆ ಪ್ರತ್ಯುತ್ತರ ನೀಡಲಾಗಿದೆ ಎಂದು ಸಮರ್ಥಿಸಿಕೊಂಡರು

ಪಾಕ್ ಡ್ರೋನ್, ಕ್ಷಿಪಣಿ ದಾಳಿ ವಿಫಲ: ಮೇ 07-08 ರ ರಾತ್ರಿ ಪಾಕಿಸ್ತಾನ ಡ್ರೋನ್ ಮತ್ತು ಕ್ಷಿಪಣಿ ಬಳಸಿಕೊಂಡು ಅವಂತಿಪುರ, ಶ್ರೀನಗರ, ಜಮ್ಮು, ಪಠಾಣ್‌ಕೋಟ್, ಅಮೃತಸರ, ಕಪುರ್ತಲಾ, ಜಲಂಧರ್, ಲುಧಿಯಾನ, ಆದಂಪುರ, ಭಟಿಂಡಾ, ಚಂಡೀಗಢ, ನಾಲ್, ಫಲೋಡಿ, ಉತ್ತರಲೈ, ಮತ್ತು ಭುಜ್, ಉತ್ತರಲೈ, ಮತ್ತು ಭುಜ್, ಉತ್ತರಲೈ, ಮತ್ತು ಭುಜ್ ಸೇರಿದಂತೆ ಉತ್ತರ ಮತ್ತು ಪಶ್ಚಿಮ ಭಾರತದ

(2ನೇ ಪುಟ ನೋಡಿ)

# ಸಂಸತ್ ಅಧಿವೇಶನ ಕರೆಯುವಂತೆ ರಾಹುಲ್ ಗಾಂಧಿ ಒತ್ತಾಯ: ಖರ್ಗೆ



ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಮೇ.8: 'ಆಪರೇಷನ್ ಸಿಂಧೂರ್' ಕುರಿತ ಗುರುವಾರ ನಡೆದ ಸರ್ವಪಕ್ಷ ಸಭೆಯಲ್ಲಿ ವಿರೋಧ ಪಕ್ಷಗಳು ಕೇಂದ್ರ ಸರ್ಕಾರ ಮತ್ತು ಸಶಸ್ತ್ರಪಡೆಗಳಿಗೆ ಸಂಪೂರ್ಣ ಬೆಂಬಲ ಸೂಚಿಸಿವೆ. ಉತ್ತಮ ಸಂದೇಶ ನೀಡಲು ಸಂಸತ್ ಅಧಿವೇಶನ ಕರೆಯುವಂತೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಅವರು ಒತ್ತಾಯಿಸಿದರು ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಗುರುವಾರ ಹೇಳಿದ್ದಾರೆ.

ಸರ್ವಪಕ್ಷ ಸಭೆಯಲ್ಲಿ ಭಾಗವಹಿಸಿದ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಖರ್ಗೆ, ಪ್ರಧಾನಿ ನರೇಂದ್ರ ಮೋದಿ ಭಾಗವಹಿಸದಿರುವುದು ತೀವ್ರ ನಿರಾಶೆ ಮೂಡಿಸಿದೆ ಎಂದರು.

"ಪ್ರಧಾನಿ ಭಾಗವಹಿಸಿ ಭಯೋತ್ಪಾದನೆ ವಿರುದ್ಧದ ಕ್ರಮದ ಬಗ್ಗೆ ಸಂಕ್ಷಿಪ್ತವಾಗಿ ಮಾತನಾಡುತ್ತಾರೆ ಎಂದು ನಾವು ಬಯಸಿದ್ದೆವು. ಆದರೆ ಅವರು ಬರಲಿಲ್ಲ. ಕಳೆದ ಬಾರಿ ನಡೆದ ಸರ್ವಪಕ್ಷ ಸಭೆಗೂ ಪ್ರಧಾನಿ ಹಾಜರಾಗಿರಲಿಲ್ಲ" ಎಂದು ಖರ್ಗೆ ಹೇಳಿದರು.

ಇಂಡಿಯಾ ಬಣದ ಎಲ್ಲಾ ಪಕ್ಷಗಳು ಮತ್ತು ಇತರ ಪಕ್ಷಗಳು ಸಹ ಒಂದೇ ಧ್ವನಿಯಲ್ಲಿ ಮಾತನಾಡಿ, "ನೀವು ಮುಂದುವರಿಯಿರಿ ಮತ್ತು ನೀವು ತೆಗೆದುಕೊಳ್ಳುವ ನಿರ್ಧಾರಗಳಲ್ಲಿ ನಾವು ನಿಮ್ಮೊಂದಿಗಿದ್ದೇವೆ ಮತ್ತು ಸೈನ್ಯದೊಂದಿಗೆ ನಿಲ್ಲುತ್ತೇವೆ" ಎಂದು ರಾಜ್ಯಸಭೆಯ ವಿರೋಧಪಕ್ಷದ ನಾಯಕ ಹೇಳಿದರು. ಪ್ರಧಾನಿಯವರು ಸೇನೆಗೆ, ಉಗ್ರರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳಲು ಸಂಪೂರ್ಣ ಅಧಿಕಾರ ನೀಡಿರುವುದಾಗಿ ಹೇಳಿದ್ದಾರೆ ಎಂದು ಖರ್ಗೆ ತಿಳಿಸಿದರು. "ಇದು ಸೂಕ್ಷ್ಮ ಸಮಯ ಮತ್ತು ದೇಶದ ಹಿತಾಸಕ್ತಿಗಾಗಿ, ರಕ್ಷಣಾ ರಹಸ್ಯಗಳಂತಹ ವಿವರವಾದ ಪ್ರಶ್ನೆಗಳನ್ನು ಕೇಳಬಾರದು ಎಂದು ರಕ್ಷಣಾ ಸಚಿವ(ರಾಜನಾಥ್ ಸಿಂಗ್) ರು ಹೇಳಿದರು" ಎಂದು ಖರ್ಗೆ ತಿಳಿಸಿದರು. ಸಭೆಯಲ್ಲಿ ಹಾಜರಿದ್ದವರು ಗಡಿ ಪ್ರದೇಶಗಳಲ್ಲಿ ವಾಸಿಸುವ ಜನರ ಭದ್ರತೆಯ ವಿಷಯವನ್ನು ಪ್ರಸ್ತಾಪಿಸಿದರು. ಜಮ್ಮು ಮತ್ತು ಕಾಶ್ಮೀರದಲ್ಲಿ ಪಾಕಿಸ್ತಾನ ನಡೆಸಿದ ಶೆಲ್ ದಾಳಿಯಲ್ಲಿ ಪ್ರಾಣ ಕಳೆದುಕೊಂಡವರ ಕುಟುಂಬವನ್ನು ಸರ್ಕಾರ ನೋಡಿಕೊಳ್ಳಬೇಕು ಎಂದು ಖರ್ಗೆ ಹೇಳಿದರು. "ಸರ್ಕಾರವು ಎಲ್ಲಾ ರೀತಿಯ ಕ್ರಮಗಳನ್ನು ತೆಗೆದುಕೊಳ್ಳುತ್ತದೆ ಎಂದು ನಮಗೆ ಭರವಸೆ ನೀಡಿದ್ದಾರೆ" ಎಂದು ಖರ್ಗೆ ತಿಳಿಸಿದರು.

ಒಳ್ಳೆಯ ಸಂದೇಶ ನೀಡಲು ಸಂಸತ್ ಅಧಿವೇಶನ ಕರೆಯಬೇಕೆಂದು ರಾಹುಲ್ ಗಾಂಧಿ ಒತ್ತಾಯಿಸಿದ್ದಾರೆ. ಅಧಿವೇಶನ ಕರೆದರೆ, ಸಂಸದರು ತಮ್ಮ ಅಭಿಪ್ರಾಯಗಳನ್ನು ಮಂಡಿಸಬಹುದು ಮತ್ತು ಜನರ ವಿಶ್ವಾಸವನ್ನು ಹೆಚ್ಚಿಸಬಹುದು. ಆದರೆ ಸರ್ಕಾರ ಈ ಬಗ್ಗೆ ಯಾವುದೇ ಭರವಸೆ ನೀಡಲಿಲ್ಲ" ಎಂದು ಖರ್ಗೆ ಹೇಳಿದರು.

# ಚೆನಾಬ್ ನದಿಯ 2 ಡ್ಯಾಂನಿಂದ ನೀರು ಬಿಟ್ಟು ಪಾಕ್‌ಗೆ ಶಾಕ್ ನೀಡಿದ ಭಾರತ

ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಮೇ.8: ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಹಿಂದೂಗಳ ನರಮೇಧದ ಬಳಿಕ ಕೇಂದ್ರ ಸರ್ಕಾರವು ಪಾಕ್ ಜೊತೆಗಿನ ಸಿಂಧೂ ನದಿ ಒಪ್ಪಂದವನ್ನು ಸ್ಥಗಿತಗೊಳಿಸಲು ನಿರ್ಧರಿಸಿತ್ತು. ಇದೀಗ ಭಾರತ ಚೆನಾಬ್ ನದಿಯ 2 ಡ್ಯಾಂನಿಂದ ಪಾಕ್‌ಗೆ ನೀರು ಹರಿಬಿಟ್ಟು ಮತ್ತೆ ಶಾಕ್ ಕೊಟ್ಟಿದೆ.

ಪಹಲ್ಗಾಮ್‌ನಲ್ಲಿ ನಡೆದ ಪೈಶಾಚಿಕ ಕೃತ್ಯಕ್ಕೆ ಪ್ರತೀಕಾರ ತೀರಿಸಿಕೊಳ್ಳುವತ್ತ ದಿಟ್ಟ ಹೆಜ್ಜೆ ಇಟ್ಟಿರುವ ಭಾರತ ಈಗಾಗಲೇ ಪಾಕ್ ಜೊತೆಗಿನ ರಾಜತಾಂತ್ರಿಕ ಸಂಬಂಧವನ್ನು ಕಡಿದುಕೊಂಡಿದೆ. ಸಿಂಧೂ ನದಿ ಒಪ್ಪಂದ ಸ್ಥಗಿತಗೊಳಿಸಿದ ನಂತರ ನೀರು ಹರಿಸುವುದನ್ನು ನಿಲ್ಲಿಸಿದರೆ ರಕ್ತ ಹರಿಸುತ್ತೇವೆ ಎಂದಿದ್ದ ಪಾಕ್‌ಗೆ, ಭಾರತ ಉರಿ ಜಲಾಶಯದಿಂದ ಝಿಲಂ ನದಿಗೆ ಭಾರೀ ಪ್ರಮಾಣದ ನೀರು ಬಿಡುಗಡೆ ಮಾಡಿ ಶಾಕ್ ಕೊಟ್ಟಿತ್ತು. ಆಗ ಯಾವುದೇ ಪೂರ್ವಸೂಚನೆ ನೀಡದೇ ಭಾರತ ಏಕಾಏಕಿ ನದಿಗೆ ನೀರನ್ನು ಹರಿಸಿದೆ ಎಂದು ಪಾಕ್ ಮಾಧ್ಯಮಗಳು ಭಾರತದ ವಿರುದ್ಧ ಆರೋಪ ಮಾಡಿದ್ದವು.

ಇದೀಗ ಕೇಂದ್ರ ಸರ್ಕಾರ ರಾಂಬನ್‌ನಲ್ಲಿರುವ ಚೆನಾಬ್ ನದಿಯ ಬಾಗ್ಲಿಹಾರ್ ಜಲವಿದ್ಯುತ್ ಯೋಜನೆಯ ಎರಡು ಗೇಟ್ ಹಾಗೂ ರಿಯಾಸಿಯ ಸಲಾಲ್ ಅಣೆಕಟ್ಟಿನ ಮೂರು ಗೇಟ್‌ಗಳನ್ನು ತೆರೆದಿದೆ. ಈ ಪ್ರದೇಶದಲ್ಲಿ ಭಾರೀ ಮಳೆಯಿಂದ ಉಂಟಾಗುವ ನೀರಿನ ಮಟ್ಟ ಹಾಗೂ ಅಣೆಕಟ್ಟಿನ ಒತ್ತಡವನ್ನು ನಿರ್ವಹಿಸುವುದು ಇದರ ಉದ್ದೇಶವಾಗಿದೆ ಎಂದು ಮೂಲಗಳು ತಿಳಿಸಿವೆ.

ಈ ಮೊದಲು ಚೆನಾಬ್‌ನಂತಹ ಪಶ್ಚಿಮ ನದಿಗಳ ಹರಿವಿನಲ್ಲಿ ಯಾವುದೇ ಮಹತ್ವದ ನಿರ್ಧಾರ ಕೈಗೊಳ್ಳಬೇಕಾದರೂ ಭಾರತ, ಪಾಕಿಸ್ತಾನಕ್ಕೆ ತಿಳಿಸಬೇಕಿತ್ತು. ಆದರೆ ಸಿಂಧೂ ನದಿ ಒಪ್ಪಂದ ಸ್ಥಗಿತಗೊಂಡ ನಂತರ ಭಾರತ ಏಕಪಕ್ಷೀಯವಾಗಿ ವರ್ತಿಸುತ್ತಿದ್ದು, ದೇಶದ ಅಗತ್ಯಕ್ಕನುಸಾರವಾಗಿ ನೀರನ್ನು ತಡೆಹಿಡಿಯುವುದು ಹಾಗೂ ಬಿಡುಗಡೆ ಮಾಡುವುದನ್ನು ಮಾಡುತ್ತಿದೆ.

# ನಿಮ್ಮ ನಾಯಕತ್ವ ಇತಿಹಾಸದಲ್ಲಿ

## ಸುವರ್ಣಾಕ್ಷರಗಳಲ್ಲಿರಲಿದೆ:ಮೋದಿಗೆ ದೇವೇಗೌಡರ ಪತ್ರ



ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಮೇ.8: ಪಾಕ್ ವಿರುದ್ಧ ಭಾರತೀಯ ಸೇನೆ ನಡೆಸಿದ್ದ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ಹಾಗೂ ಭಾರತ-ಪಾಕ್ ನಡುವಿನ ಉದ್ವಿಗ್ನತೆಯ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿಗೆ ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ಪತ್ರ ಬರೆದಿದ್ದಾರೆ.

ಪೆಹಲ್ಗಾಮ್ ದಾಳಿಯ ಬಳಿಕ, ಪ್ರಧಾನಿ ಮೋದಿ ವಿದೇಶದ ಪ್ರವಾಸ ರದ್ದುಗೊಳಿಸಿದ್ದು, ಸೌದಿ ಪ್ರವಾಸ ಮೊಟಕುಗೊಳಿಸಿದ್ದು ಸೇರಿದಂತೆ ಭಾರತ ಸರ್ಕಾರ ಕೈಗೊಂಡ ಜವಾಬ್ದಾರಿಯುತ ಕ್ರಮಗಳ ಬಗ್ಗೆ ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡ ಪ್ರಧಾನಿ ಮೋದಿಗೆ ಬರೆದ ಪತ್ರದಲ್ಲಿ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

"ಕಳೆದ ಕೆಲವು ವಾರಗಳಿಂದ

(2ನೇ ಪುಟ ನೋಡಿ)

# ರಾಜ್ಯದೆಲ್ಲೆಡೆ ಕಟ್ಟೆಚ್ಚರಕ್ಕೆ ಸಿಎಂ ಸಿದ್ದರಾಮಯ್ಯ ಸೂಚನೆ



ಮಲ್ಲಮ್ಮ ನುಡಿ ವಾರ್ತೆ ಮಂಡ್ಯ, ಮೇ 8: ಯಾವ ಗಳಿಗೆಯಲ್ಲಿ, ಏನಾದರೂ ಆಗಬಹುದು ಎಂಬ ಕಾರಣಕ್ಕೆ ಎಲ್ಲೆಡೆ ಜಾಗೃತಗೊಳಿಸಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅಣೆಕಟ್ಟು, ವಿದ್ಯುತ್ ಉತ್ಪಾದನಾ ಸ್ಥಾವರ ಸೇರಿದಂತೆ ಎಲ್ಲಾ ಕಡೆ ಕಟ್ಟೆಚ್ಚರ ವಹಿಸಲಾಗಿದೆ ಎಂದು ತಿಳಿಸಿದರು. ಕೇಂದ್ರ ಸರ್ಕಾರದ ಸೂಚನೆಯ

(2ನೇ ಪುಟ ನೋಡಿ)

## ಒಂದನೇ ಪುಟದಿಂದ

## ಬಾಲಕರ ಸಾವು

ಮೃತ ಬಾಲಕರನ್ನು ಮುರನಾಳ ಪುನರವಸತಿ ಕೇಂದ್ರದ ಸಿದ್ದು ಗಣಿ(16), ಸಂತೋಷ ಕೂಡಗಿ(16) ಹಾಗೂ ಕಾಮಣ್ಣ ಕುಪಲಿ(18) ಎಂದು ಗುರುತಿಸಲಾಗಿದೆ. ಪಕ್ಕದ ಗ್ರಾಮದಲ್ಲಿ ನಡೆದಿದ್ದ ಮೆರವಣಿಗೆ ವೀಕ್ಷಿಸಲು ಬೈಕ್ ಮೇಲೆ ತೆರಳುತ್ತಿದ್ದ ಯುವಕರು ಹಿಂದಿನಿಂದ ಬಂದ ಕ್ಯಾಂಟರ್‌ಗೆ ತಾಗಿ ಬಿದ್ದಾಗ ಕ್ಯಾಂಟರ ಅವರ ಮೇಲೆ ಹಾಯ್ದು ಮೂವರು ಸಾವನ್ನಪ್ಪಿದರೆಂದು ಹೇಳಲಾಗಿದೆ.

ಘಟನಾ ಸ್ಥಳಕ್ಕೆ ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕಲಾದಗಿ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಪ್ರತಿಯೊಂದು ದುಸ್ಸಾಹಕ್ಕೂ ಪಾಕಿಸ್ತಾನವೇ ಹೊಣೆ

ಅನೇಕ ಸೇನಾ ಪ್ರದೇಶಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆಸಲು ಪ್ರಯತ್ನಿಸಿದೆ. ಇದನ್ನು ಗಂಖ ಗ್ರೀಡ್ ಇಂಟಿಗ್ರೇಟೆಡ್ ಕೌಂಟರ್ ಮತ್ತು ವಾಯು ರಕ್ಷಣಾ ವ್ಯವಸ್ಥೆಗಳಿಂದ ನಾಶಪಡಿಸಲಾಗಿದೆ. ಪಾಕಿಸ್ತಾನದ ದಾಳಿಯನ್ನು ಸಾಬೀತುಪಡಿಸುವ ಹಲವಾರು ಸ್ಥಳಗಳಿಂದ ಅವಶೇಷಗಳನ್ನು ಈಗ ವಶಪಡಿಸಿಕೊಳ್ಳಲಾಗುತ್ತಿದೆ ಎಂದು ಕರ್ನಲ್ ಸೋಫಿಯಾ ಖು-ರೇಷಿ ಹೇಳಿದ್ದಾರೆ.

ಉದ್ವಿಗ್ನತೆ ಉಲ್ಬಣ ಕುರಿತ ಭಾರತದ ನಿಲುವನ್ನು ಪುನರುಚ್ಚರಿಸಿದ ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್, "ಪಾಕಿಸ್ತಾನದಿಂದ ಮಾರ್ಟರ್ ಮತ್ತು ಫಿರಂಗಿ ಗುಂಡಿನ ದಾಳಿಯನ್ನು ನಿಲ್ಲಿಸಲು ಭಾರತದಿಂದ ಪ್ರತಿಕ್ರಿಯೆ ನೀಡಲಾಗಿದೆ. ಪಾಕ್ ಮಿಲಿಟರಿಂದ ಉದ್ವಿಗ್ನತೆ ಉಲ್ಬಣಗೊಂಡಿದ್ದು, ಭಾರತೀಯ ಸಶಸ್ತ್ರ ಪಡೆಗಳು ತಮ್ಮ ನಿಲುವಿಗೆ ಬದ್ಧವಾಗಿವೆ ಎಂದು ತಿಳಿಸಿದರು.ಸಿಂಧೂ ಜಲ ಒಪ್ಪಂದ ಕುರಿತು ಹಲವು ಬಾರಿ ಸೂಚನೆ:

ಸಿಂಧೂ ಜಲ ಒಪ್ಪಂದವನ್ನು ತೀರ್ಮಾನಿಸಿದ ಸಂದರ್ಭಗಳಲ್ಲಿ ಮೂಲಭೂತ ಬದಲಾವಣೆಯಾಗಿದೆ. ಕಳೆದ ಎರಡೂವರೆ ವರ್ಷಗಳಿಂದ ಭಾರತವು ಪಾಕಿಸ್ತಾನ ಸರ್ಕಾರದೊಂದಿಗೆ ಸಂವಹನ ನಡೆಸುತ್ತಿದೆ. ಒಪ್ಪಂದದ ಮಾರ್ಪಾಡು ಕುರಿತು ಚರ್ಚಿಸಲು ಮಾತುಕತೆಗೆ ವಿನಂತಿಸಿ ಹಲವು ಬಾರಿ ಸೂಚನೆಗಳನ್ನು ಕಳುಹಿಸಿದ್ದೇವೆ. ಪಾಕಿಸ್ತಾನ ನಮ್ಮ ಮೇಲೆ ಅನೇಕ ಬಾರಿ ಯುದ್ಧ ಮಾಡಿದ್ದರೂ ಭಾರತ 6 ದಶಕಗಳಿಗೂ ಹೆಚ್ಚು ಕಾಲ ಒಪ್ಪಂದವನ್ನು ಗೌರವಿಸಿದೆ ಎಂದು ವಿಕ್ರಮ್ ಮಿಸ್ರಿ ತಿಳಿಸಿದರು.

ಪಾಕಿಸ್ತಾನವು ಒಪ್ಪಂದವನ್ನು ಉಲ್ಲಂಘಿಸಿ, ಉದ್ದೇಶಪೂರ್ವಕವಾಗಿ ಭಾರತದಲ್ಲಿ ಕಾನೂನು ತಡೆಗಳನ್ನು ಸೃಷ್ಟಿಸುತ್ತಿದೆ. ಪಶ್ಚಿಮದ ನದಿಗಳ ಮೇಲೆ ಕಾನೂನುಬದ್ಧ ಹಕ್ಕನ್ನು ಚಲಾಯಿಸುತ್ತಿದೆ. ಹೀಗೆ ಹಲವು ಪ್ರಚೋದನೆಗಳ ನಂತರವೂ ನಾವು ಕಳೆದ 65 ವರ್ಷಗಳಿಂದ ಒಪ್ಪಂದಕ್ಕೆ ಬದ್ಧರಾಗಿರುದ್ದೇವು. ಈಗ ಪರಿಸ್ಥಿತಿ ಬದಲಾಗಿದೆ. ಈ ಒಪ್ಪಂದವು 50 ಮತ್ತು 60 ರ ದಶಕದ ಎಂಜಿನಿಯರಿಂಗ್ ತಂತ್ರಗಳನ್ನು ಆಧರಿಸಿದೆ. ತಾಂತ್ರಿಕ ಬದಲಾವಣೆಗಳು ಮತ್ತು ಪ್ರಗತಿಗಳನ್ನು ಗಣನೆಗೆ ತೆಗೆದುಕೊಳ್ಳಲಾಗಿದೆ ಎಂದು ಹೇಳಿದರು.

## ಇನ್ನೂ ಮುಗಿದಿಲ್ಲ : ರಾಜನಾಥ್ ಸಿಂಗ್

ಹೇ ಎನ್ನುವ ಮೂಲಕ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಖಡಕ್ ಎಚ್ಚರಿಕೆ ನೀಡಿದ್ದಾರೆ.ಅವರು ಇಂದು ಸಂಸತ್ ಭವನದಲ್ಲಿ ನಡೆದ ಸರ್ವಪಕ್ಷಗಳ ಸಭೆಯಲ್ಲಿ ಮಾಹಿತಿ ನೀಡಿದ್ದಾರೆ. ಆಪರೇಷನ್ ಸಿಂಧೂರ' ಹೆಸರಿನಡಿ ಭಾರತೀಯ ಸೇನೆಯು ಪಾಕ್ ಮತ್ತು ಪಾಕ್ ಆಕ್ರಮಿತ ಕಾಶ್ಮೀರದ ಉಗ್ರ ನೆಲೆಗಳ ಮೇಲೆ ನಡೆಸಿದ ಪ್ರತೀಕಾರದ ದಾಳಿಯಲ್ಲಿ 100 ಉಗ್ರರ ಹತ್ಯೆಯಾಗಿದೆ ನಾವು ಈ ಪರಿಸ್ಥಿತಿಯನ್ನು ಬೆಳೆಸಲು ಬಯಸುವುದಿಲ್ಲ. ಆದ್ರೆ ಪಾಕಿಸ್ತಾನ ಕಿತಾಪತಿ ಮಾಡಿದ್ರೆ ನಾವು ಸಹ ಹಿಂದೆ ಸರಿಯಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ. ಕಳೆದ ಏಪ್ರಿಲ್ 22ರಂದು ಕಾಶ್ಮೀರದ ಪೆಹಲ್ಗಾಮ್‌ನ ಬೈಸರನ್ ಕಣಿವೆ ಪ್ರದೇಶದಲ್ಲಿ ನಾಲ್ವರು ಉಗ್ರರು ಓರ್ವ ವಿದೇಶಿ ಪ್ರಜೆ ಸೇರಿದಂತೆ 26 ಪ್ರವಾಸಿಗರನ್ನ ಗುಂಡಿಕ್ಕಿ ಕೊಂದಿದ್ದರು. ಇದಕ್ಕೆ ಪ್ರತೀಕಾರ ತೀರಿಸಿಕೊಳ್ಳಲು ಪಣ ತೊಟ್ಟಿದ್ದ ಭಾರತ ಮಂಗಳವಾರ ತಡರಾತ್ರಿ 1:44 ಗಂಟೆ ಸುಮಾರಿಗೆ ಪಾಕ್ ಮತ್ತು ಪಾಕ್ ಆಕ್ರಮಿತ ಕಾಶ್ಮೀರದ ಉಗ್ರರ ನೆಲೆಗಳ ಮೇಲೆ ದಾಳಿ ನಡೆಸಿದೆ. ದಾಳಿಯಲ್ಲಿ ಪಾಕ್ ಸೇನೆಯಾಗಲಿ ಅಥವಾ ನಾಗರಿಕರ ಮೇಲಾಗಲಿ ದಾಳಿ ಮಾಡದೇ ಉಗ್ರರ ನೆಲೆಗಳನ್ನು ಮಾತ್ರವೇ ಗುರಿಯಾಗಿಸಿ ದಾಳಿ ನಡೆಸಿದೆ.ಮೋಸ್ಟ್‌ವಾಂಟೆಡ್‌ಗಳನ್ನ ತಯಾರು ಮಾಡ್ತಿದ್ದ ನೆಲೆಗಳು ಧ್ವಂಸ:

ಭಾರತ ಧ್ವಂಸ ಮಾಡಿರುವ ಈ ಉಗ್ರರ ನೆಲೆಗಳು ಮೋಸ್ಟ್ ಡೇಂಜರಸ್ ತಾಣಗಳು ಎಂದೇ ಗುರುತಿಸಿಕೊಂಡಿದ್ದು, ಇಡೀ ವಿಶ್ವಕ್ಕೆ ಕಂಟಕವಾಗಿದ್ದವು. ಅತ್ಯಾಧುನಿಕ ಶಸ್ತ್ರಾಸ್ತ್ರಗಳನ್ನು ಇಲ್ಲಿ ಅಡಗಿಸಿಡಲಾಗಿತ್ತು. ಜೊತೆಗೆ ವಿಶ್ವಾದ್ಯಂತ ವಿವಿಧೆಡೆಗೆ ಕಳುಹಿಸಲು ಉಗ್ರರಿಗೆ ಇಲ್ಲಿ ತರಬೇತಿ ನೀಡಲಾಗುತ್ತಿತ್ತು ಅನ್ನೋ ಸ್ಫೋಟಕ ಮಾಹಿತಿ ಬೆಳಕಿಗೆ ಬಂದಿದೆ.

## ಸುವರ್ಣಾಕ್ಷರಗಳಲ್ಲಿರಲಿದೆ: ಮೋದಿಗೆ ದೇವೇಗೌಡರ ಪತ್ರ

ಒತ್ತಡ ಹೆಚ್ಚಿದೆ. ಆದರೆ ಆ ಎಲ್ಲಾ ಒತ್ತಡ, ಸಂದರ್ಭಗಳನ್ನು ನಿಭಾಯಿಸಲು ನಿಮ್ಮಲ್ಲಿನ ಆಧ್ಯಾತ್ಮಿಕ ಶಕ್ತಿಯಿಂದ ಸಾಧ್ಯವಾಗಿದೆ, ಉನ್ನತ ಜವಾಬ್ದಾರಿಯನ್ನು ಹೊಂದಿರುವಾಗ ಎಲ್ಲದರಿಂದ ದೂರವಿದ್ದು ಸಮಚಿತ್ತತೆ ಕಾಯ್ದುಕೊಳ್ಳುವುದು ಸುಲಭದ ಮಾತಲ್ಲ ಅದು ಅಧ್ಯಾತ್ಮದಿಂದಷ್ಟೇ ಸಾಧ್ಯ. ಕೆಲವು ದಿನಗಳಲ್ಲಿ ಆ ಶಕ್ತಿ ನಿಮ್ಮಲ್ಲಿ ಇದೆ ಎಂಬುದನ್ನು ನೀವು ತೋರಿಸಿದ್ದೀರಿ" ಎಂದು ದೇವೇಗೌಡ ಮೋದಿ ಅವರ ಗಟ್ಟಿ ನಿಲುವುಗಳನ್ನು ಶ್ಲಾಘಿಸಿದ್ದಾರೆ.

ನಾವು, ನಮ್ಮ ದೇಶ ಭಯೋತ್ಪಾದನೆಯೆಂಬ ಅಧರ್ಮದ ವಿರುದ್ಧ ಧರ್ಮ ಯುದ್ಧ ಸಾರಿರುವ ಸಂದರ್ಭದಲ್ಲಿ ಭಗವಂತ ನಿಮ್ಮೊಂದಿಗೆ ಇರಲಿ ಎಂದು ಪ್ರಾರ್ಥಿಸುತ್ತೇನೆ ಎಂದು ದೇವೇಗೌಡ ಮೋದಿಗೆ ಸಂದೇಶ ರವಾನಿಸಿದ್ದಾರೆ.

ಭಾರತ ಎಂದಿಗೂ ಶಾಂತಿಯ ಪರವಾಗಿರುತ್ತದೆ. ಆದರೆ ಅದನ್ನೇ ನಮ್ಮ ದೌರ್ಬಲ್ಯ ಎಂದು ಭಾವಿಸಿದವರಿಗೆ ನಮ್ಮ ಶಕ್ತಿಯ ಪರಿಚಯವಾಗಿದೆ. ನಾವು ಎದುರಿಸುವ ಸವಾಲುಗಳು ಇಲ್ಲಿಗೇ ಕೊನೆಯಾಗುವುದಿಲ್ಲ. ಆದರೆ ನಾವು ಇಡೀ ದೇಶವಾಗಿ ಒಗ್ಗಟ್ಟಿನಿಂದ ಇದ್ದೇವೆ ಎಂಬುದು ನಮ್ಮ ಶಕ್ತಿಯನ್ನು ಹೆಚ್ಚಿಸುತ್ತದೆ. ನಾವು ಒಟ್ಟಿಗೆ ಸವಾಲು ಎದುರಿಸುತ್ತೇವೆ. ನಾವು ಒಂದು ದೇಶವಾಗಿ ಒಟ್ಟಿಗೆ ನಿಲ್ಲುತ್ತೇವೆ ಎಂದು ದೇವೇಗೌಡ ಪ್ರಧಾನಿಗೆ ಪತ್ರದ ಮೂಲಕ ಸಂದೇಶ ರವಾನಿಸಿದ್ದಾರೆ. ದೇವೇಗೌಡರ ಪತ್ರಕ್ಕೆ ದೇಶಾದ್ಯಂತ ಭಾರಿ ಮೆಚ್ಚುಗೆ ವ್ಯಕ್ತವಾಗತೊಡಗಿದೆ.

## ಸಿಎಂ ಸಿದ್ದರಾಮಯ್ಯ ಸೂಚನೆ

ಮೇಲೆಗೆ ಎಲ್ಲೆಡೆ ಮಾಕ್ ಡ್ರಿಲ್ ನಡೆಸಲಾಗುತ್ತಿದೆ ಎಂದೂ ಸ್ಪಷ್ಟಪಡಿಸಿದರು.ಪಾಕಿಸ್ತಾನದ ಪ್ರಜೆಗಳನ್ನು ಗಡಿಪಾರು ಮಾಡಲಾಗಿದೆ. ಮೈಸೂರಿನಲ್ಲಿ ಇರುವವರು ನ್ಯಾಯಾಲಯದ ಮೊರೆ ಹೋಗಿದ್ದಾರೆ. ಅಂತಹವರು ಇನ್ನೂ ಉಳಿದುಕೊಂಡಿರ ಬಹುದು, ಉಳಿದಂತೆ ಎಲ್ಲರನ್ನೂ ಕಳುಹಿಸಲಾಗಿದೆ. ಬಾಕಿ ಎಷ್ಟು ಜನ ಇರಬಹುದು ಎಂದು ನನಗೆ ಗೊತ್ತಿಲ್ಲ. ಅದರ ಬಗ್ಗೆ ಮಾಹಿತಿ ಇಲ್ಲ ಎಂದರು.ಸಚಿವ ರಾಮಲಿಂಗಾರೆಡ್ಡಿಯವರು ತಮ್ಮ ಜೊತೆ ಮಾತನಾಡಿ ಮುಜರಾಯಿ ದೇವಸ್ಥಾನದಲ್ಲಿ ಯೋಧರ ಶ್ರೇಯಸ್ಸಿಗೆ ವಿಶೇಷ ಪೂಜೆಯ ವ್ಯವಸ್ಥೆ ಮಾಡಿದ್ದಾರೆ ಎಂದು ಮುಖ್ಯಮಂತ್ರಿ ಹೇಳಿದರು.

## ಮಕ್ಕಳ ಹಬ್ಬದ ಸಮಾರೋಪ ಸಮಾರಂಭ ಹಾಗೂ ಚಿಣ್ಣರ ರಂಗೋತ್ಸವ ಕಾರ್ಯಕ್ರಮ

ಕಲಬುರಗಿ,ಮೇ.08:ಕಲಬುರಗಿ ಕರ್ನಾಟಕ ರಂಗಾಯಣ ವತಿಯಿಂದ ಮಕ್ಕಳ ಹಬ್ಬ-2025ರ(ಮಕ್ಕಳ ಬೇಸಿಗೆ ರಂಗ ತರಬೇತಿ ಶಿಬಿರದ) ಸಮಾರೋಪ ಸಮಾರಂಭ ಹಾಗೂ ಚಿಣ್ಣರ ರಂಗೋತ್ಸವ (ಎರಡು ದಿನಗಳ ಸಾಂಸ್ಕೃತಿಕ ನಾಟಕ ಪ್ರದರ್ಶನ ಹಾಗೂ ನಾಟಕ ಪ್ರದರ್ಶನ) ಕಾರ್ಯಕ್ರಮಗಳನ್ನು ಇದೇ ಮೇ 9 ಹಾಗೂ 10 ರಂದು ಸಂಜೆ 5.30 ಗಂಟೆಗೆ ಕಲಬುರಗಿ ರಂಗಾಯಣ ಆವರಣದ ಬಯಲು ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.

ಮೇ 9 ರಂದು ಸಂಜೆ 5.30 ಗಂಟೆಗೆ ಮಕ್ಕಳ ಹಬ್ಬ ಸಮಾರೋಪ ಸಮಾರಂಭ ಹಾಗೂ ರಂಗೋತ್ಸವವನ್ನು ಅಫಜಲಪುರ ಶಾಸಕ ಹಾಗೂ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ಅಧ್ಯಕ್ಷರಾದ ಎಂ.ವೈ. ಪಾಟೀಲ ಅವರು ಉದ್ಘಾಟಿಸುವರು. ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ ಅಧ್ಯಕ್ಷತೆವಹಿಸುವರು. ಕಲಬುರಗಿ ಮಕ್ಕಳ ಸಾಹಿತಿ ಎ.ಕೆ.ರಾಮೇಶ್ವರ ಸಮಾರೋಪ ನುಡಿ ಹೇಳುವರು.

ಕಲಬುರಗಿ ಶರಣಬಸವೇಶ್ವರ ಸಂಸ್ಥಾನದ ಕಾರ್ಯದರ್ಶಿ ಬಸವರಾಜ ದೇಶಮುಖ, ಬೆಂಗಳೂರು ರಂಗ ಸಮಾಜದ ಸದಸ್ಯ ಮಹಾಂತೇಶ ಗಜೇಂದ್ರಗಡ, ಕಲಬುರಗಿ ವಲಯದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಜಂಟಿ ನಿರ್ದೇಶಕ ಬಸವರಾಜ ಹೂಗಾರ, ಕಲಬುರಗಿ ಸೈಬರ್ ಪೋಲೀಸ್ ಠಾಣೆಯ ಡಿ.ವೈ. ಎಸ್.ಪಿ. ಬಸವೇಶ್ವರ ಹೀರಾ, ಕಲಬುರಗಿ ವಿಶ್ವವಿದ್ಯಾಲಯದ ಪೋಲೀಸ್ ಠಾಣೆಯ ಆರಕ್ಷಕ ನಿರೀಕ್ಷಕ ಸುನೀಲಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಕುಮಾರ್ ರಾಠೋಡ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ದತ್ತಪ್ಪ ಸಾಗನೂರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಕಲಬುರಗಿ ರಂಗಾಯಣ ನಿರ್ದೇಶಕಿ ಡಾ. ಸುಜಾತಾ ಜಂಗಮಶೆಟ್ಟಿ ಉಪಸ್ಥಿತರಿರುವರು.

ಅಂದು ಸಂಜೆ 6.30 ಗಂಟೆಗೆ ಪ್ರಕಾಶ ಪೂಜಾರಿ ಮತ್ತು ತಂಡದಿಂದ ನಾಡಗೀತೆ, ಶಿಬಿರದ ಮಕ್ಕಳಿಂದ ಪ್ರಾರ್ಥನಾ ಗೀತೆ, "ಹಚ್ಚೇವು ಕನ್ನಡದ ದೀಪ" ನೃತ್ಯ, "ಭಾರತ ಭಾಗ್ಯ ವಿಧಾತ" ಶಿಬಿರದ ಎಲ್ಲಾ ಮಕ್ಕಳಿಂದ ನೃತ್ಯ, "ರಾಜ ಮತ್ತು ವೃಕ್ಷ ದೇವತೆ" ನಾಟಕ, "ಶರಣು ಹೆಳೆವು ಸ್ವಾಮಿ ನಾವು ನಿಮಗ" ರಂಗಗೀತೆ, "ಕಟ್ಟುತೇವ ನಾವು ಕಟ್ಟುತೇವ" ಹೋರಾಟದ ಹಾಡು ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿದೆ.

ಮೇ 10 ರಂದು ಸಂಜೆ 6.30 ಗಂಟೆಗೆ "ಹಳ್ಳಿಗೆ ಹೋಗುವ ನಾವು ಹಳ್ಳಿಗೆ ಹೋಗುವ" ಜಾನಪದ ಗೀತೆ, ಭೀಮಾ ನದಿ ತಂಡದಿಂದ "ಸ್ಮಶಾನ ಕುರುಕ್ಷೇತ್ರ" ನಾಟಕ ಹಾಗೂ ಕಾಗಿಣಾ ನದಿ ತಂಡದಿಂದ "ಅಲ್ಲಾಹುದ್ದೀನ್ ಅದ್ಭುತ ದ್ವೀಪ" ನಾಟಕ ಪ್ರದರ್ಶನ ಜರುಗಲಿದೆ. ಬೀದರಿನ ತುಕಾರಾಮ ಬೋಲೆ ಅವರಿಂದ ಜಾನಪದ ಜಾದು ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿದೆ.

## ಸಾರ್ವಜನಿಕರು ಕುಡಿಯುವ ನೀರನ್ನು ಕಾಯಿಸಿ ಕುಡಿಯಲು ಮನವಿ

ಕಲಬುರಗಿ,ಮೇ.08:ಕಲಬುರಗಿ ನಗರಕ್ಕೆ ನೀರು ಸರಬರಾಜು ಮಾಡುವ ಜಲಮೂಲ ನದಿಯಾದ ಭೀಮಾ ನದಿಯಿಂದ ನಿಂತ ನೀರು ಕಲುಷಿತವಾಗಿ ಬರುತ್ತಿರುವ ಹಿನ್ನೆಲೆಯಲ್ಲಿ ಈ ನೀರನ್ನು ಶುದ್ಧೀಕರಿಸಿ, ಸೂಪರ್ ಕ್ಲೋರಿನೇಶನ್ ಮಾಡಿ ನೀರು ಸರಬರಾಜು ಮಾಡಲಾಗುತ್ತಿದೆ. ಆದಾಗ್ಯೂ ಸಹ ಮುನ್ನೆಚ್ಚರಿಕೆ ಕ್ರಮವಾಗಿ ಕಲಬುರಗಿ ನಗರದ ಸಾರ್ವಜನಿಕರು ಕುಡಿಯುವ ನೀರನ್ನು ಕಾಯಿಸಿ, ಆರಿಸಿ ಮತ್ತು ಸೋಸಿ ಕುಡಿಯಬೇಕೆಂದು ಕಲಬುರಗಿ ಕೆಯುಡಬ್ಲ್ಯುಎಸ್ಎಂಪಿ-ಕೆಯುಐಡಿಎಫ್‌ಸಿ ಯೋಜನಾ ಅನುಷ್ಠಾನ ಘಟಕದ ಕಾರ್ಯಪಾಲಕ ಅಭಿಯಂತರರು ತಿಳಿಸಿದ್ದಾರೆ.

ನಗರದ ಸಾರ್ವಜನಿಕರು ತಮ್ಮ ಮನೆಗಳಿಗೆ ತೆಗೆದು-ಕೊಂಡ ನಳದ ಜೋಡಣೆಗೆ ತೊಟ್ಟಿಯನ್ನು ಕಡ್ಡಾಯವಾಗಿ ಕೂಡಿಸಿಕೊಳ್ಳಬೇಕು ಮತ್ತು ನಳದ ತಗ್ಗುಗಳನ್ನು ಮುಚ್ಚಬೇಕು. ಏಕೆಂದರೆ ತಗ್ಗುಗಳಲ್ಲಿ ಕಲುಷಿತ ನೀರು ಸಂಗ್ರಹಣೆಯಾಗಿ ಅದೇ ನೀರು ಮತ್ತೇ ನಳದ ತೊಟ್ಟಿಯಲ್ಲಿ ಸೇರುವ ಮೂಲಕ ಮುಂದಿನ ಗ್ರಾಹಕರಿಗೆ ತಲುಪುತ್ತದೆ. ಇದ-ರಿಂದ ಸಂಕ್ರಾಮಿಕ ರೋಗ ಹರಡುವ ಸಾಧ್ಯತೆ ಇರುತ್ತದೆ. ಅದೇ ರೀತಿ ನೀರಿನ ತೆ-ೂಟ್ಟಿ ಅಳವಡಿಸುವುದರಿಂದ ನೀರು ಪೋಲಾಗದಂತೆ ನೋಡಿಕೊಳ್ಳಬಹುದಾಗಿದೆ.

ನಗರದ ನೀರು ಸರಬರಾಜಿನ ಗ್ರಾಹಕರು ತಮ್ಮ ನೀರಿನ ಬಿಲ್ಲಿನಲ್ಲಿ ಹೆಸರು, ವಿಳಾಸ, ಮನೆ ನಂಬರು ಹಾಗೂ ಮೋಬೈಲ್ ಸಂಖ್ಯೆಗಳನ್ನು ನೊಂದಾಯಿಸಲು, ಬದಲಾಯಿಸಲು ಮತ್ತು ಗೃಹ, ಗೃಹೇತರ, ವಾಣಿಜ್ಯ ನಳ ಸಂಪರ್ಕಗಳ ಬದಲಾವಣೆ ಮಾಡಿಕೊಳ್ಳಲು ಯೋಜನಾ ಅನುಷ್ಠಾನ ಘಟಕ, ಕುಸ್ಸೆಂಪ್-ಕೆಯುಐಡಿಎಫ್‌ಸಿ, "ಜಲಭವನ" ನೆಲ ಮಹಡಿ, ಜೈ ಭವಾನಿ ಕನ್ವೇಷನ್ ಹಾಲ್, ಎದುರುಗಡೆ, ರಾಜಪೂರ-ಕುಸನೂರ ರಸ್ತೆ, ಕಲಬುರಿಗೆ ಕಚೇರಿಗೆ ಅಗತ್ಯ ದಾಖಲಾತಿಗಳೊಂದಿಗೆ ಭೇಟಿ ನೀಡಿ ಸರಿಪಡಿಸಿಕೊಳ್ಳಬಹುದಾಗಿದೆ.

ಆದ್ದರಿಂದ ಸಾರ್ವಜನಿಕರು ಕಲಬುರಗಿ ಮಹಾನಗರ ಪಾಲಿಕೆ, ಕೆಯುಐಡಿಎಫ್‌ಸಿ ಹಾಗೂ ಮೆ॥ ಎಲ್ ಆಂಡ್ ಟಿ ಲಿಮಿಟೆಡ್ ಇವರೊಂದಿಗೆ ಸಹಕರಿಸಲು ಹಾಗೂ ನೀರಿನ ಸಮಸ್ಯೆಗಳ ಬಗ್ಗೆ ಹೆಚ್ಚಿನ ಮಾಹಿತಿಗಾಗಿ ಗ್ರಾಹಕರ ಸೇವಾ ದೂರವಾಣಿ ಸಂಖ್ಯೆ: +91 1800 425 8247 (ಛಿಛಿಛಿ) ಹಾಗೂ 084-722-37247 ಗೆ ಸಂಪರ್ಕಿಸಬೇಕೆಂದು ಅವರು ತಿಳಿಸಿದ್ದಾರೆ.

## ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ವಸತಿ ಶಾಲೆಯ ವಿದ್ಯಾರ್ಥಿನಿಯರ ಸಾಧನೆ




ಕಲಬುರಗಿ,ಮೇ.08:ಸಮಾಜ ಕಲ್ಯಾಣ ಇಲಾಖೆಯ ಅಡಿಯಲ್ಲಿ ಬರುವ ಕಲಬುರಗಿ ಜಗತ್‌ನ ಪರಿಶಿಷ್ಟಜಾತಿ/ಪರಿಶಿಷ್ಟಪಂಗಡ ಪ್ರತಿಭಾನ್ವಿತ (ಸಾಮಾನ್ಯ-521) ಬಾಲಕಿಯರ ವಸತಿ ಶಾಲೆಯ ವಿದ್ಯಾರ್ಥಿನಿಯರು ಎಸ್.ಎಸ್.ಎಲ್.ಸಿ. 2024-25 ನೇ ಸಾಲಿನ ಪರೀಕ್ಷೆಯಲ್ಲಿ 24 ವಿದ್ಯಾರ್ಥಿನಿಯರು ಡಿಸ್ಟಿಂಕ್ಷನ್ ಹಾಗೂ 21 ವಿದ್ಯಾರ್ಥಿನಿಯರು ಪ್ರಥಮ ದರ್ಜೆಯಲ್ಲಿ ಪಾಸಾಗಿದ್ದಾರೆ.

ಕು.ವೇದಿಕಾ ತಂದೆ ಅಶೋಕ 615 ಅಂಕ (ಶೇ.98.40) ಪಡೆದು ಡಿಸ್ಟಿಂಕ್ಷನ್‌ನಲ್ಲಿ ಪಾಸಾಗಿ ಶಾಲೆಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಕು.ಶೀಲವಂತಿ ತಂದೆ ಮಾಳಪ್ಪ 613 ಅಂಕ (ಶೇ.98.08) ರಷ್ಟು ಪಡೆದು ಶಾಲೆಗೆ ದ್ವಿತೀಯ ಸ್ಥಾನ ಹಾಗೂ ಕು. ಭೂಮಿಕಾ ತಂದೆ ಶಶಿಕಾಂತ ಮತ್ತು ಕು.ನಿವೇದಿತಾ ತಂದೆ ನಿಂಗಣ್ಣಗೌಡ ಇಬ್ಬರು 612 ಅಂಕ (ಶೇ. 97.92) ಪಡೆದು ಶಾಲೆಗೆ ತೃತಿಯ ಸ್ಥಾನ ಪಡೆದಿದ್ದಾರೆ. ಈ ವಿದ್ಯಾರ್ಥಿನಿಯರ ಸಾಧನೆಗಾಗಿ ಸಮಾಜ ಕಲ್ಯಾಣ ಇಲಾಖೆಯ ಅಪರ ನಿರ್ದೇಶಕ ಎಂ.ಎಸ್. ಅಲ್ಲಾಬಕಾಷ್, ಕ್ರೈಸ್ ಜಿಲ್ಲಾ ಸಮನ್ವಯಾಧಿಕಾರಿ ಶ್ರೀ ಈರಣ್ಣ ಅರಕೇರಿ, ಪ್ರಾಂಶುಪಾಲರಾದ ರಫೀಯಾ ರುಮಾನಾ ಹಾಗೂ ಬೋಧಕ ಮತ್ತು ಬೋಧ-ಕೇತರ ಸಿಬ್ಬಂದಿ ವರ್ಗದವರು ಸಂತಸ ವ್ಯಕ್ತಪಡಿಸಿದ್ದಾರೆ.

## ಆಪ್‌ರೇಶನ್ ಸಿಂಧೂರ: ಟ್ವೀಟ್ ಮುಖಾಂತರ ಆಪ್ತರಿಗೆ ಖಷಿ ಪಡಿಸುತ್ತಿರುವ ಸಚಿವ ಖರ್ಗೆ : ದೇವಿಂದ್ರ ದೇಸಾಯಿ ಕಲ್ಲೂರ ಟೀಕೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ: ಭಾರತೀಯ ಸೇನೆ ಆಪ್‌ರೇಶನ್ ಸಿಂಧೂರ ಮೂಲಕ ಭಯೋತ್ಪಾದಕರಿಗೆ ತಕ್ಕ ಸಂದೇಶ ನೀಡಿದೆ. ಭಾರತದ ದಾಳಿಗೆ ವಿಶ್ವವೇ ಕೊಂಡಾಡಿದೆ. ಆದರೆ ರಾಜ್ಯದ ಸಚಿವಾನಾಗಿರುವ ಪ್ರಿಯಾಂಕ್ ಖರ್ಗೆ ತನ್ನ ಆಪ್ತರಿಗೆ ಖುಷಿ ಪಡಿಸಲು ಶಾಂತಿಯ ಟ್ವೀಟ್ ಮಾಡಿರುವುದು ದೇಶದ ಬಗ್ಗೆ ಇರುವ ಕಾಳಜಿ ತೋರಿಸುತ್ತದೆ ಎಂದು ಬಿಜೆಪಿಯ ಓಬಿಸಿ ಮೋರ್ಚಾ ನಗರಾಧ್ಯಕ್ಷ ದೇವಿಂದ್ರ ದೇಸಾಯಿ ಕಲ್ಲೂರ ಆಕ್ರೋಶ ವ್ಯಕ್ತ ಪಡಿಸಿದ್ದಾರೆ.



ದೇಶ ಮೊದಲು ನಂತರ ಎಲ್ಲಾ ಧರ್ಮಗಳು ಆಚರಣೆಗಳು ಎನ್ನುವುದು ಪ್ರತಿಯೊಬ್ಬ ನಾಗರಿಕರಿಗೆ ಗೊತ್ತಿರುವ ವಿಷಯ. ಅಸ್ಸಾವೂದ್ದಿನ್ ಓವೈಸಿಯೇ ಭಯೋತ್ಪಾದಕರ ಕೃತ್ಯವನ್ನು ಖಂಡಿಸಿದ್ದಾರೆ. ಅಲ್ಲದೇ ಭಾರತೀಯ ಸೇನೆ ಕೈಗೊಂಡ ಆಪರೇಶನ್ ಸಿಂಧೂರಕ್ಕೆ ಸೇನೆಯನ್ನು ಅಭಿನಂದಿಸಿದ್ದಾರೆ. ಅಲ್ಲದೇ ಮುಂದಿನ ದಿನಗಳಲ್ಲಿ ಪಾಕಿಸ್ತಾನವೇ ಇರಬಾರದು ಅಂತಹ ಕಠಿಣ ನಿರ್ಣಯವನ್ನು ಕೇಂದ್ರ ತೆಗೆದುಕೊಂಡರೆ ಅದಕ್ಕೆ ನಮ್ಮ ಸಂಪೂರ್ಣ ಬೆಂಬಲ ಅಂತಲೂ ಓವೈಸಿ ಹೇಳಿದ್ದಾರೆ.

ಆದರೆ ಸಚಿವನಾಗಿ ಕನಿಷ್ಟ ಜ್ಞಾನವಿಲ್ಲದೇ ಹೋದರೇ ಪ್ರಿಯಾಂಕ್ ಖರ್ಗೆ ಎನ್ನುವುದು ಸಾರ್ವಜನಿಕರಿಂದ ತೀವ್ರ ಆಕ್ರೋಶ ಕೂಡ ವ್ಯಕ್ತವಾಗುತ್ತಿದೆ. ಪ್ರಿಯಾಂಕ್ ಖರ್ಗೆ ಸುತ್ತಲೂ ಕೆಲವು ಪಟ್ಟಭದ್ರಶಕ್ತಿಗಳು ಇವೇ. ನಾಡಿನ ಅನ್ನ ತಿಂ-ದು ಪಾಕಿಸ್ತಾನಕ್ಕೆ ಹೊಗಳುವ ಕನ್ನಿಗಳು ಅವರ ಕೈಕೆಳಗೆ ಕೆಲಸ ಮಾಡುತ್ತಿವೆ. ಪ್ರಿಯಾಂಕ್‌ಗೆ ಹಿರೋ ಮಾಡಲು ಅಡಕಸ್ಬಿ ಹೇಳಿಕೆ ನೀಡುವ ಆಪ್ತರೂ ಕೂಡ ಇರುವುದು ಎಲ್ಲರಿಗೂ ಗೊತ್ತಿದೆ.

ಆಪ್‌ರೇಶ ಸಿಂಧೂರ ಕುರಿತು ಗಾಂಧಿಯ ಶಾಂತಿ ಮಂತ್ರ ಹೇಳಿಕೆಯನ್ನು ಕಂಡು ನೆಟ್ಟಿಗರು ತೀವ್ರ ಆಕ್ರೋಶ ವ್ಯಕ್ತ ಪಡಿಸುತ್ತಲೆ ಎಕ್ಸಿಂದ ಟ್ವಿಟ್‌ನ್ನು ಡಿಲಿಟ್ ಮಾಡಿದ್ದಾರೆ. ಇದರ ಅರ್ಥವೇನು? ಪ್ರಿಯಾಂಕ್‌ರವರೇ, ನಿಮಗೇ ದೇಶ ಮೊದಲು ಅಥವಾ ನಿಮ್ಮ ಸುತ್ತಲು ಇರುವ ಪಾಕ್ ಪ್ರೇಮಿಗಳು ನಿಮಗೆ ಮುಖ್ಯವೋ? ಇಂತಹ ಹೇಳಿಕೆಗಳನ್ನು ನೀಡುವ ಪ್ರಿಯಾಂಕ್ ಖರ್ಗೆಯಿಂದ ಇಂದು ಸಮಾಜದಲ್ಲಿ ಅಶಾಂತಿಯನ್ನು ಮೂಡುತ್ತದೆ. ಪ್ರತಿಯೊಬ್ಬ ಭಾರತೀಯ ಭಾರತದ ಸೇನೆಗೆ ನಿಂತಿದೆ. ಅದರೆ ಪ್ರಿಯಾಂಕ್ ಖರ್ಗೆ ತನ್ನ ಆಪ್ತರ ಖುಷಿ ಪಡಿಸಲು ಗಾಂಧಿಜೀಯ ಶಾಂತಿ ಪಟಿಸುವುದ ಹಾಸ್ಯಸ್ಪದವಾಗಿದೆ ಎಂದು ದೇವಿಂದ್ರ ದೇಸಾಯಿ ಹೇಳಿಕೆಯ ಮುಖಾಂಥರ ವ್ಯಂಗ್ಯವಾಡಿದ್ದಾರೆ.

## ಜೆಸ್ಕಾಂ: ಮೇ 10ರಂದು ವಿದ್ಯುತ್ ವ್ಯತ್ಯಯ

ರಾಯಚೂರು ಮೇ 08: ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ-1ರ 11 ಕೆವಿ ಮಾರ್ಗ ದುರಸ್ತಿ ಕಾಮಗಾರಿ ನಿರ್ವಹಿಸುತ್ತಿರುವ ಪ್ರಯುಕ್ತ ಮೇ 10ರ ಬೆಳಿಗ್ಗೆ 08ಗಂಟೆಯಿಂದ ಮಧ್ಯಾಹ್ನ 12 ಗಂಟೆವರೆಗೆ ವಿದ್ಯುತ್ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ.

## ಸಿದ್ದೇಶ್ವರ ದೇವಾಲಯದಲ್ಲಿ ಖಾಂಡ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮೇ.8:ತಾಲೂಕಿನ ಡಿಗ್ಗಿ ಗ್ರಾಮದ ಹೊರ ಹೊಲದಲ್ಲಿ ಇರುವ ಬಾಬುರಾವ ಹರಪ್ವಾಳೆ ಅವರ ಹೊಲದಲ್ಲಿ ಇರುವ ಶ್ರೀ ಸಿದ್ದೇಶ್ವರ ದೇವಾಯದಲ್ಲಿ ಪ್ರತಿ ವರ್ಷದಂತೆ ಈ ಖಾಂಡ ಕಾರ್ಯಕ್ರಮ ಗುರುವಾರ ನಡೆಯಿತು.ಗುರುವಾರ ಬೆಳಗ್ಗೆ ಸಿದ್ದೇಶ್ವರ ದೇವರ ಅಭಿಷೇಕ್ ಪೂಜೆ ನೆರವೇರಿತು, ಡಿಗ್ಗಿ ಗ್ರಾಮ ಸೇರಿದಂತೆ ಸುತ್ತ ಮುತ್ತಲಿನ ಹಳ್ಳಿ ಜನ ಬಂದು ದರ್ಶನ ಪಡೆದರು. ಭಕ್ತರಿಗೆ ವಿಶೇಷ ಪ್ರಸಾದ ವ್ಯವಸ್ಥೆ ಮಾಡಯಿತು.

ಈ ಸಂದರ್ಭದಲ್ಲಿ ನಾಗೇಶ ಹರಪ್ವಾಳೆ, ಅವಿನಾಶ ಹರಪ್ವಾಳೆ, ಪಂಕಜ ರಾಂಪುರೆ, ಶ್ರೀದೀರಾಜ ಬಿರ್ಗೆ, ನಿಖಿಲ ಶ್ರೀಗಿರೆ, ಪತ್ರಕರ್ತ ಪರಮೇಶ ರಾಂಪುರೆ, ಲೋಕೇಶ ಹರಪ್ವಾಳೆ, ರಾಜಕುಮಾರ ಹರಪ್ವಾಳೆ, ಅಕ್ಷಯ ಮಹಾಜನ, ಅಭಿಷೇಕ್, ಸಿದ್ದು ಸೇರಿದಂತೆ ನೂರಾರು ಭಕ್ತರು ಇದ್ದರು.

## ಪಾಕಿಸ್ತಾನಿ ಪ್ರಜೆಗಳನ್ನು ದೇಶದ ಹೊರ ಹಾಕಬೇಕು: ಬಸವರಾಜ ಪಾಟೀಲ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮೇ.8:ಅಮಾಯಕ ಜನರ ಮೇಲೆ ದಾಳಿ ಮಾಡುವ ಉಗ್ರರ ಕೃತಕ್ಕೆ ಕಾರಣವಾದ ಪಾಕಿಸ್ತಾನ ಪ್ರಜೆಗಳನ್ನು ನಮ್ಮ ದೇಶದ ಹೊರ ಹಾಗಬೇಕು, ಇಲ್ಲಾವಾದರೆ ಅಪಾಯ ಕಟ್ಟಿಟ್ಟ ಪುಟ್ಟಿ ಎಂದು ಒತ್ತಾಯಿಸಿ ಮುಖಂಡ ಬಸವರಾಜ ಪಾಟೀಲ್ ಅವರ ನೇತ್ರತ್ವದಲ್ಲಿ ತಹಸೀಲ ಕಚೇರಿಗೆ ತೆರಳಿ ರಾಜ್ಯಪಾಲರಿಗೆ ಬರೆದ ಮನವಿ ಶಿರಸ್ತೆದಾರರಾದ ಅಶ್ವಿನಿ ಕುಮಾರ ಪಾಟೀಲ ಅವರ ಮೂಲಕ ಮನವಿ ಪತ್ರ ಸಲ್ಲಿಸಿದರು.

ಭಾರತ ದೇಶದಲ್ಲಿ ಇರತಕ್ಕಂತ ಪಾಕಿಸ್ತಾನಿ ಪ್ರಜೆಗಳು 48 ಗಂಟೆಗಳೊಳಗೆ ಹಿಂದಿರುಗಲು ಈಗಾಗಲೇ ಕೇಂದ್ರ ಸರಕಾರ ರಾಜ್ಯ ಸರಕಾರಗಳಿಗೆ ಅದೇಶ ನೀಡಿತ್ತು. ಆದರೆ ಕರ್ನಾಟಕ ಸರಕಾರ ರಾಜ್ಯ ಈ ಪ್ರಕ್ರಿಯೆಯನ್ನು ಕಠಿಣವಾಗಿ ತೆಗೆದುಕೊಳ್ಳದೆ ಇನ್ನೂ ಕೂಡ ಪಾಕಿಸ್ತಾನಿ ಪ್ರಜೆಗಳು ನಮ್ಮ ಕರ್ನಾಟಕದಲ್ಲಿ ವಾಸವಾಗಿರುವ ಪಾಕಿಸ್ತಾನಿ ಪ್ರಜೆಗಳನ್ನು ಪಾಕಿಸ್ತಾನಕ್ಕೆ ಹಿಂದಿರುಗಿಸಲು ಸೂಕ್ತ ನಿರ್ದೇಶನವನ್ನು ತಾವು ನೀಡಬೇಕಾಗಿದೆ ಎಂದು ಆಗ್ರಹಿಸಿದರು.ಪೆಹಲ್ಗಾಮ್‌ನಲ್ಲಿ ಪ್ರವಾಸಿಗರ ಮೇಲೆ ನಡೆದ ಮಾರಣಾಂತಿಕ ಹಲ್ಲೆ ಮತ್ತು ಹತ್ಯೆಯನ್ನು ಪಾಕಿಸ್ತಾನ ಪ್ರಾಯೋಜಿತ ಉಗ್ರರ ದಾಳಿಯನ್ನು ಭಾರತೀಯರಾಗಿ ಉಗ್ರವಾಗಿ ಖಂಡಿಸುತ್ತೇವೆ. ಕರ್ನಾಟಕ ರಾಜ್ಯ ಸರ್ಕಾರ ತಕ್ಷಣವೇ ಇಲ್ಲಿ ವಾಸವಾಗಿರುವ ಪಾಕಿಸ್ತಾನಿ ಪ್ರಜೆಗಳನ್ನು ಪಾಕಿಸ್ತಾನಕ್ಕೆ ಹಿಂದಿರುಗಿಸಲು ಒತ್ತಡ ಮತ್ತು ಸೂಕ್ತ ನಿರ್ದೇಶನವನ್ನು ಕರ್ನಾಟಕ ರಾಜ್ಯ ಸರಕಾರಕ್ಕೆ ನೀಡಬೇಕು ಎಂದು ಮನವಿ ಮಾಡಿದರು.ಈ ಸಂದರ್ಭದಲ್ಲಿ ನಿವೃತ್ತ ಪ್ರಾಚಾರ್ಯ ಎಸ್. ಎನ್. ಶಿವಣಕರ, ಗ್ರಾಮ ಪಂಚಾಯತ ಸದಸ್ಯ ಬಾಲಾಜಿ ತೆಲಂಗ, ರಂಗರಾಜ ಜಾಧವ, ಪ್ರಶಾಂತ ಖಾನಾಪೂರೆ, ರಾಜಕುಮಾರ ಗಾಯಕವಾಡ ಬಾಲೂರ, ಮಾಧವರರಾವ ಚಾಗುಣೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.08:ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಬೆಂಗಳೂರಿನಿಂದ ವಿಮಾನದ ಮೂಲಕ ಮೇ 10 ರಂದು ಶನಿವಾರ ಮಧ್ಯಾಹ್ನ 12.05 ಗಂಟೆಗೆ ಕಲಬುರಗಿಗೆ ಆಗಮಿಸುವರು.

ನಂತರ ಅಂದು ಮಧ್ಯಾಹ್ನ 2 ಗಂಟೆಗೆ ಕಲಬುರಗಿ ಕೆ.ಕೆ. ಆರ್.ಡಿ.ಬಿ. ಕಚೇರಿ ಸಭಾಂಗಣದಲ್ಲಿ ಜರುಗುವ ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಸಭೆಯಲ್ಲಿ ಭಾಗವಹಿಸುವರು. ನಂತರ ಸಂಜೆ 5.45 ಗಂ-ಟೆಗೆ ಕಲಬುರಗಿಯಿಂದ ರಸ್ತೆ ಮೂಲಕ ಹೈದ್ರಾಬಾದ್‌ಗೆ ಪ್ರಯಾಣಿಸುವರು.

ಮೇ 12 ರಂದು ಸೋಮವಾರ ಮಧ್ಯಾಹ್ನ 12.05 ಗಂಟೆಗೆ ಬೆಂಗಳೂರಿನಿಂದ ಮರಳಿ ಕಲಬುರಗಿಗೆ ಆಗಮಿಸಿ, ಅಂದು ಮಧ್ಯಾಹ್ನ 12.45 ಗಂಟೆಗೆ ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಕೇಂದ್ರವಲಯದ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸುವರು.

# ಬೀರೇಶ್ವರ ಬ್ಯಾಂಕಿನಿಂದ ಸಹಾಯಧನ ವಿತರಣೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ : – ಮೆ 8 ನಗರದ ಶ್ರೀ ಬೀರೇಶ್ವರ ಕೋ–ಆಪ್ ಕ್ರೆಡಿಟ್ ಸೋಸಾಯಿಟಿ ಲಿ.ಯಕ್ಸಂಬಾ (ಮಲ್ಟಿ–ಸ್ಟೇಟ್) ಸ್ಥಳಿಯ ಶಾಖೆಯ ಅಮೂಲ್ಯ ಸಾಲಗಾರರಾದ ವಿಜಯಲಕ್ಷ್ಮಿ ಮಡೆಪ್ಪ ಅವರಿಗೆ ಸಹಾಯಧನ ವಿತರಿಸಲಾಯಿತು.

ಇಲ್ಲಿಯ ಶಾಖೆಯ ಅಮೂಲ್ಯ ಸಾಲಗಾರರಾದ ವಿಜಯಲಕ್ಷ್ಮಿ ಮಡೆಪ್ಪ ಅವರ ಪತಿ ರಮೇಶ್ ಮಡೆಪ್ಪ ಇತ್ತಿಚಿಗೆ ನಿಧನರಾದ ಹಿನ್ನಲೆ ಬುಧವಾರ ವಾರಸುದಾರರನ್ನು ಶಾಖೆಗೆ ಕರೆಯಿಸಿ ಸಲಹಾ ಸಮಿತಿ ಅಧ್ಯಕ್ಷ ಬಸವರಾಜ ವಿ ವರವಟ್ಟೆ ಅವರು ಸಂಸ್ಥೆಯಿಂದ ಕೊಡಲಾಗುವ 30 ಸಾವೀರ ರೂ. ಸಹಾಯ ಧನ ವಿತರಿಸಿದರು. ಈ ವೇಳೆ ಸಾಲಗಾರರಾದ ವಿಜಯಲಕ್ಷ್ಮಿ ಅವರು ಸಂಸ್ಥೆಯ ಸಂಸ್ಥಾಪಕರಾದ ಅಣ್ಣಾಸಾಹೇಬ್ ಜೊಲ್ಲೆ, ಸಹ ಸಂಸ್ಥಾಪಕರಾದ ಶಶಿಕಲಾ ಜೊಲ್ಲೆ ಸೇರಿದಂತೆ ಮುಖ್ಯ ಕಚೇರಿಯ ಎಲ್ಲಾ ಆಡಳಿತ ವರ್ಗದವರಿಗೂ ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಲಹಾ ಸಮಿತಿ ಸದಸ್ಯ ಡಾ. ಶ್ರೀಕಾಂತ ವಿ ಮಠಪತಿ, ಶಾಖೆಯ ವ್ಯವಸ್ಥಾಪಕ ಚಿದಾನಂದ ಮಾಳಿ, ಸಿಬ್ಬಂದಿಗಳಾದ ಪ್ರಶಾಂತ ವರವಟ್ಟೆ, ಗಣೇಶ ವಸ್ತ್ರದ , ಋಷಿಕೇಶ, ಸದಸ್ಯರಾದ ಧನರಾಜ, ಚನ್ನವೀರ ಮಠಪತಿ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಎಸ್‌ಎಸ್‌ಎಲ್‌ಸಿಯಲಿ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳು

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ: – ಮೆ 8 ಇಲ್ಲಿನ ನಗರದ ಸತ್ಯನಿಕೇತನ ವಿದ್ಯಾವರ್ಧಕ ಸಂಘದ ಅಡಿಯಲ್ಲಿ ನಡೆಯುತ್ತಿರುವ ಅಕ್ಕಮಹಾದೇವಿ ಕನ್ಯಾ ಪ್ರೌಢ ಶಾಲೆಯು ಎಸ್. ಎಸ್. ಎಲ್. ಸಿ. ಪರೀಕ್ಷೆಯಲ್ಲಿ ಶೇ. 63% ರಷ್ಟು ಫಲಿತಾಂಶ ಗಳಿಸಿದೆ. ಪರೀಕ್ಷೆಗೆ ಹಾಜರಾದ 24 ವಿದ್ಯಾರ್ಥಿಗಳ ಪೈಕಿ 02 ಅಗ್ರಶ್ರೇಣಿ, 08 ಪ್ರಥಮ, 04



ದ್ವಿತೀಯ 01 ತೃತೀಯ ದರ್ಜೆಯಲ್ಲಿ ಉತ್ತೀರ್ಣರಾಗಿದ್ದಾರೆ .

ಭವಾನಿ ತಂದೆ ರಾಜಪ್ಪಾ



582(93.12%) ರಷ್ಟು ಅಂಕ ಗಳಿಸಿ ಮೊದಲ ಸ್ಥಾನ ಗಳಿಸಿದ್ದಾರೆ. ಮಹೇಕ ರಿಯಾಜುದ್ದೀನ್ 568(90.88%) ರಷ್ಟು ಅಂಕ ಗಳಿಸಿ ಶಾಲೆಗೆ ದ್ವಿತೀಯ ಸ್ಥಾನ ಗಳಿಸಿದ್ದಾರೆ.ಉತ್ತಮ ಫಲಿತಾಂಶ ತಂದಿರುವ ವಿದ್ಯಾರ್ಥಿಗಳ ಸಾಧನೆಗೆ ಸಂಸ್ಥೆಯ ಅಧ್ಯಕ್ಷರಾದ ಸುನಂದಾ ಚಂದ್ರಕಾಂತ ಜಾಧವ ಕಾರ್ಯದರ್ಶಿಗಳಾದ ಸತೀಶಕುಮಾರ ಚಂದ್ರಕಾಂತ ಜಾಧವ ಹಾಗೂ ಆಡಳಿತ ಮಂಡಳಿಯವರು, ಮುಖ್ಯಗುರುಗಳು ಹಾಗೂ ಸಿಬ್ಬಂದಿ ವರ್ಗದವರು ಹರ್ಷ ವ್ಯಕ್ತಪಡಿಸಿದ್ದಾರೆ.

# ವಿದ್ಯಾರ್ಥಿಗಳಿಗೆ ಗುಣಾತ್ಮಕ ಶಿಕ್ಷಣ ನೀಡಬೇಕು.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಮೆ 8 ಪ್ರಧಾನ ಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್ (ಮ ಉ ಯೋ) ಯೋಜನೆ ತಾಲೂಕಾ ಪಂಚಾಯತ್ ವತಿಯಿಂದ

"ನಮ್ಮ ಶಾಲೆ ನಮ್ಮ ಜವಾಬ್ದಾರಿ ಕಾರ್ಯಕ್ರಮ 2025 ರ ಇಲ್ಲಿನ ಸರ್ಕಾರಿ ಪದವಿ ಪೂರ್ವ ಕಾಲೇಜು ಬಾಲಕರ ಪ್ರೌಢ ಶಾಲಾ ವಿಭಾಗ ಜರುಗಿತು.

ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಸಿದ್ದವೀರಯ್ಯಾ ರುದನೂರ್ ಉದ್ಘಾಟಿಸಿ ಮಾತನಾಡಿ ಸರ್ಕಾರಿ ಶಾಲೆಗಳಲ್ಲಿ ನುರಿತ ಶಿಕ್ಷಕರಿದ್ದು ಶಾಲೆಯಲ್ಲಿ ಹಲವಾರು ಸೌಲಭ್ಯಗಳು ಇವೆ ಹೀಗಾಗಿ ಗುಣಾತ್ಮಕ ಶಿಕ್ಷಣ ನೀಡಬೇಕು.

ದಾಖಲಾತಿ ಹೆಚ್ಚುಸುವ ಜೊತೆಗೆ ಫಲಿತಾಂಶ ಕೂಡಾ ಹೆಚ್ಚಿಸಬೇಕಾಗಿದೆ.ಇದರ ಜವಾಬ್ದಾರಿ ಕೇವಲ ಶಿಕ್ಷಕರದಲ್ಲ ಅದರ ಜೊತೆಗೆ ಶಾಲಾ ಅಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಹಾಗೂ ಪೋಷಕರ ಕೂಡಾ ಕಾಳಜಿ ವಹಿಸಬೇಕಾಗಿದೆ ಎಂದರು.

ಸಹಾಯಕ ನಿರ್ದೇಶಕರು ಅಕ್ಷರ ದಾಸೋಹ ಸಂಜುಕುಮಾರ ಕಾಂಗೆ ಮಾತನಾಡಿ ಪ್ರತಿಯೊಂದು ಸರ್ಕಾರಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯ ಇವೆ. ಅಲ್ಲದೆ ಮಕ್ಕಳಿಗಾಗಿ ಮಧ್ಯಾಹ್ನ ಬಿಸಿಯೂಟ, ಪೌಷ್ಟಿಕಾಂಶವುಳ್ಳ ಮೊಟ್ಟೆ, ಬಾಳೆಹಣ್ಣು ಮತ್ತು ಕೆನಭರಿತ ಹಾಲು ಒದಗುಸುತ್ತಿದೆ ಅದರ ಸದುಪಯೋಗ ಪಡಿಸಿಕೊಂಡು ಉತ್ತಮ ಶಿಕ್ಷಣ ಪಡೆಯಬೇಕು ಎಂದರು. ಕ್ಷೇತ್ರ ಸಮನ್ವಯಾಧಿಕಾರಿಗಳಾದ ಪ್ರಭಾಕರ ಕಳಮಾಸೆ ಪ್ರಾಸ್ತಾವಿಕವಾಗಿ ಮಾತನಾಡಿ ಶಾಲೆಗಳಲ್ಲಿ ಮಗುವಿನ ಸರ್ವಾಂಗೀಣ ಅಭಿವೃದ್ಧಿಗಿ ಹಲವಾರು ಯೋಜನೆಗಳನ್ನು ಸರ್ಕಾರ ನೀಡುತ್ತಿದೆ ಶಾಲಾ ಕಟ್ಟಡ, ಡಿಜೀಟಲ್ ತರಗತಿ ಕೋಣೆ ಶುದ್ಧವಾದ ಕುಡಿಯುವ ನೀರು ಮತ್ತು ಉತ್ತಮವಾದ ತರಗತಿ ಕೋಣೆ ಸೌಲಭ್ಯ ಒದಗಿಸಿದೆ ಮಕ್ಕಳು ಗುಣಾತ್ಮಕ ಶಿಕ್ಷಣ ಪಡೆಯಬೇಕೆಂದರು.

ಅಜೀಂ ಪ್ರೇಮ್ ಜಿ ಫೌಂಡೇಶನ್ ಜಿಲ್ಲಾ ನೋಡಲ್ ಅಧಿಕಾರಿಗಳಾದ ಸಿದ್ರಾಮ ತೋಟೆಯವರು ಮಾತನಾಡಿ ಮೂಲ ಸೌಕರ್ಯಗಳಲ್ಲಿ ಯಾವುದೇ ಕೊರತೆಯಿಲ್ಲ ಆದರೆ ಮಕ್ಕಳು ಆಸಕ್ತಿಯಿಂದ ಅಭ್ಯಾಸ ಮಾಡಬೇಕು ಎಂದರು.

ಉಪ ಪ್ರಾಂಶುಪಾಲರಾದ ಅನೀತಾ ಸಾವಳ್ಕರ ಅಧ್ಯಕ್ಷತೆ ವಹಿಸಿ ಮಾತನಾಡಿ ನಮ್ಮ ಶಾಲೆಯಲ್ಲಿ ಪ್ರತಿಭಾವಂತ ಶಿಕ್ಷಕರಿದ್ದು ಉತ್ತಮ ಶಿಕ್ಷಣ ನೀಡುತ್ತಿದ್ದಾರೆ ಆದರೆ ಮಕ್ಕಳು ಕಲಿತ ವಿಷಯವನ್ನು ಮನೆಯಲ್ಲಿ ಪುನರ್ ಮನನ ಮಾಡಿಕೊಂಡು ತಿಳಿಯದಿದ್ದರೆ ಪುನಃ ಶಿಕ್ಷಕರಿಂದ ಮಾರ್ಗದರ್ಶನ ಪಡೆಯಬೇಕು ಮತ್ತು ಉತ್ತಮ ಫಲಿತಾಂಶ ತರಬೇಕು ಎಂದರು. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಿರ್ದೇಶಕರಾದ ಶಿವಕುಮಾರ ಜಡಗೆ. ಶಂಕರ್ ಮಾಲಿ ಬಿರಾದಾರ. ರಾಜೇಂದ್ರ ಟಿಳೆ. ಎಂ ಡಿ ಶುಕ್ರೋದ್ದಿನ್. ರಮೇಶ ಭಾತಂಬ್ರೆ. ಸಂಜೀವಕುಮಾರ ನಡುಕರ, ವಿರಭದ್ರ,ರಾಮ ಪಾಟೀಲ್, ಮಲ್ಲಿಕಾರ್ಜುನ ಪರತಾಪುರೆ ,ನಾಸಿರ್ ಪಟೇಲ್ ಸಾಮೂಹ ಸಂಪನ್ಮೂಲ ವ್ಯಕ್ತಿ, ಮಸ್ತಾನ್ , ವಿರೇಶ ಹೆಗ್ಗೆ, ಮಹಾದೇವ, ನಾಜಿಯಾ , ವಿಜಯಾ ಜಾಧವ್ , ಮಂಗಲಾ , ರಾಣಿ ಮೇಡಂ ಹಾಗೂ ವಿವಿಧ ಶಾಲೆಗಳ ಮುಖ್ಯೋಪಾಧ್ಯಾಯರು , ಶಿಕ್ಷಕರು , ಅಜಿಂ ಪ್ರೇಮಜಿ ಫೌಂಡೇಷನ್ ತಾಲೂಕಾ ಸಂಯೋಜಕರು, ಎಸ್.ಡಿ.ಎಂ.ಸಿ ಸದಸ್ಯರು ಮತ್ತು ಪಾಲಾಕ ಪೋಷಕರು ಉಪಸ್ಥಿತರಿದ್ದರು. ಗಿರಿಧರ ಸಮೂಹ ಸಂಪನ್ಮೂಲ ವ್ಯಕ್ತಿ ನಿರೂಪಿಸಿದರು .

# ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಅಸ್ಲಾಂಮಿಯ್ಯಾರವರಿಂದ ಸನ್ಮಾನ

(ರಾಜಕುಮಾರ ಆರ್.ಹಡಪದ)

ಮಲ್ಲಮ್ಮ ನುಡಿ ವಾರ್ತೆ



ಕನಿಕಾ ಸಾಧನೆಗೆ ಶಾಲೆಯ ಶಿಕ್ಷಕರು ಸಂತಸ ವ್ಯಕ್ತಪಡಿಸಿದ್ದು, ಅತೀ ಹೆಚ್ಚು ಅಂಕ ಪಡೆದು ಶಾಲೆಗೆ ಪ್ರಥಮ ದರ್ಜೆಯಲ್ಲಿ ಪಾಸಾಗಿ. ಶಾಲೆಯ ಕೀರ್ತಿ ಹೆಚ್ಚಿಸಿದ್ದು ಸಂತಸ ಉಂಟುಮಾಡಿದೆ ಎಂದು ಖುಷಿ ವ್ಯಕ್ತಪಡಿಸಿದ್ದಾರೆ.

ಚಿಟಗುಪ್ಪ: 2024–25ನೇ ಸಾಲಿನ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಯಲ್ಲಿ ಕೂಲಿ ಕಾರ್ಮಿಕ ಚಾಂದಪಾಶಾ ಮತ್ತು ಹುಮನಾಬಾದ ತಾಲೂಕಿನ ಸಿಂಧನಕೇರಾ ಗ್ರಾಮದ ಬಡ ರೈತ ಗುರಯ್ಯಾ ಅವರ ಮಗಳು ಅಗ್ರಶ್ರೇಣಿಯಲ್ಲಿ ಉತ್ತೀರ್ಣಗೊಂಡಿ–ದ್ದಾರೆ. ಪಟ್ಟಣದ ಸರ್ಕಾರಿ ಕನ್ಯಾ ಪ್ರೌಢ ಶಾಲೆಯ ವಿದ್ಯಾರ್ಥಿನಿ ಕನಿಕಾ ತಂದೆ ಗುರಯ್ಯಾ ಸ್ವಾಮಿ 625ಕ್ಕೆ 542. ಶೇಕಡಾ 86.73% ಅಂಕ ಗಳಿಸಿದ ವಿದ್ಯಾರ್ಥಿನಿ ಹುಮನಾಬಾದ ತಾಲೂಕಿನ ಸಿಂಧನಕೇರಾ ಗ್ರಾಮದ ರೈತ ಗುರುಯ್ಯಾ ಸ್ವಾಮಿ ಅವರ ಪುತ್ರಿಯಾಗಿರುವ ಕನಿಕಾ ತಂದೆ ಗುರಯ್ಯಾ ಸ್ವಾಮಿ ಇವರಿಗೆ ಕೃಷಿಯೇ ಕುಟುಂಬದ ಮೂಲ ಆದಾಯ. ತಲೆ ಮೇಲೊಂದು ಸರಿಯಾದ ಮನೆ ಇಲ್ಲ, ಗುಡಿಸಲಲ್ಲೇ ಇವರ ಜೀವನ. ಬಡತನದ ಮಧ್ಯೆ ದಿನ ನಿತ್ಯ ಸುಮಾರು 6 ಕಿಲೋ ಮೀಟರಯಿಂದ ಶಾಲೆ ಬಂದು ಸತತವಾಗಿ ಅಭ್ಯಾಸ ಮಾಡಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ 625ಕ್ಕೆ 542 ಅಂಕ ಗಳಿಸಿ ಸಾಧನೆ ಮಾಡಿದ್ದಾಳೆ. ಇನ್ನೋರ್ವ ವಿದ್ಯಾರ್ಥಿನಿ ತಹೋರಾ ಮಾಹಿನ್ ತಂದೆ ಚಾಂದಪಾಶಾ ಕೂಲಿ ಕಾರ್ಮಿಕನಾದರೂ ಕೂಡ ಬಡತನದಲಿಯೇ ಮಗಳಿಗೆ ಕಷ್ಟ ಪಟ್ಟು ಶಾಹೀನ ಶಿಕ್ಷಣ ಸಂಸ್ಥೆಯಲ್ಲಿ ವಿದ್ಯಾಭ್ಯಾಸ ಕೊಡಿಸಿದ್ದಾರೆ. ಒಳ್ಳೆಯ ಶಿಕ್ಷಣ ಪಡೆದು 625ಕ್ಕೆ 604. ಶೇಕಡಾ 96.64% ಅಂಕಗಳು ಪಡೆದು ಶಾಲೆಗೆ ಮತ್ತು ಗ್ರಾಮಕ್ಕೆ ಕೀರ್ತಿ ತಂದಿದ್ದ ಪ್ರಯುಕ್ತ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಅವರು ಬುಧವಾರ ವಿದ್ಯಾರ್ಥಿಗಳ ಮನೆಗೆ ಭೇಟಿ ನೀಡಿ ತಂದೆ ತಾಯಿಯವರ ಸ'ವ'ು ು ಖ ದ' ಲ್ಲಿ ಸನ್ಮಾನಿಸಿ ಸಿಹಿ ತಿನಿಸಿ ಶುಭ ಹಾರೈಸುತ್ತಾ ಮಾತನಾಡಿದ ಅವರು, ಬಡ ಕುಟುಂಬದಲ್ಲಿ ಜನಿಸಿದರು ಕೂಡ ಕಷ್ಟ ಪಟ್ಟು ಅಭ್ಯಾಸ ಮಾಡಿ ಉತ್ತಮ ಸಾಧನೆ ಮಾಡಿದ್ದಾರೆ. ಸರ್ಕಾರ ಖಾಸಗಿ ಕಾಲೇಜುಗಳು ಬಡ ವಿದ್ಯಾರ್ಥಿಗಳಿಗೆ ಉಚಿತ ಮೇಡಿಕಲ್ ಸೀಟ್ ನೀಡಿ ಎಲ್ಲಾ ರೀತಿಯ ಸಹಕಾರ ನೀಡಿ. ಅವರ ಮುಂದಿನ ವಿದ್ಯಾಭ್ಯಾಸಕ್ಕೆ ಸಹಾಯ ಮಾಡಬೇಕೆಂದು ನುಡಿದರು. "ಮಗಳ ಆಸೆಯಂತೆ ಮುಂದೆ ಶಿಕ್ಷಣ ಕಲಿಸುತ್ತೇವೆ. ಎಷ್ಟೇ ಕಷ್ಟವಾದರೂ ಆಕೆಯ ಆಸೆ ಈಡೇರಿಸುತ್ತೇವೆ" ಎಂದು ಪಾಲಕರು ಹೇಳಿದರು. ಈ ಸಂದರ್ಭದಲ್ಲಿ ವಿದ್ಯಾರ್ಥಿನಿಯ ತಂದೆ ಗುರಯ್ಯಾ ಸ್ವಾಮಿ, ತಾಯಿ ಮಲ್ಲಮ್ಮ ಸ್ವಾಮಿ, ರಮೇಶ ಸ್ವಾಮಿ, ಬಸವರಾಜ ಸ್ವಾಮಿ, ನಾಗರಾಜ ಸ್ವಾಮಿ, ಚಿನಮ್ಮಾ ಸ್ವಾಮಿ, ವರ್ಷಾ ಸ್ವಾಮಿ, ಶ್ವೇತಾ ಸ್ವಾಮಿ, ಶಿಕ್ಷಕ ಸಂಜೀವನ ಭೋಸ್ಲೆ, ಹಸನ್, ರಾಜಕುಮಾರ ಆರ್. ಹಡಪದ, ಚಾಂದಪಾಶಾ ಉಪಸ್ಥಿತರಿದ್ದರು.




ಶಾಲೆಯಲ್ಲಿ ಕಲಿಕೆಗೆ ಪೂರಕ ವಾತಾವರಣವಿತ್ತು. ಶಿಕ್ಷಕರು ಉತ್ತಮವಾಗಿ ಬೋಧಿಸುತ್ತಿದ್ದರು. ಶೈಕ್ಷಣಿಕ ಗೊಂದಲವಿದ್ದರೆ ಬಗೆಹರಿಸಿದರು. ಪುಸ್ತಕ ಒದಗಿಸಿದರು. ಟ್ಯೂಷನಗೆ ಹೋಗಿಲ್ಲಾ ಮನೆಯಲ್ಲೇ ಓದಿದ್ದೆ. ಇಷ್ಟಪಟ್ಟು ಅಭ್ಯಾಸ ಮಾಡಿದ್ದರಿಂದ ಹೆಚ್ಚು ಅಂಕಗಳು ಸಿಕ್ಕಿವೆ. ನನ್ನ ಫಲಿತಾಂಶಕ್ಕೆ ನನ್ನ ತಂದೆ ತಾಯಿ ಮತ್ತು ಕುಟುಂಬದವರು ವಿಶೇಷವಾಗಿ ನನಗೆ ಕಲಿಸಿದ ಗುರುಗಳ ಶ್ರಮ ಬಹಳಷ್ಟು ಇದೆ ಆದರಿಂದ ಈ ಸಾಧನೆ ಮಾಡಲು ಸಾಧ್ಯವಾಗಿದೆ, ಮುಂದೆ ಶಿಕ್ಷಕಿಯಾಗುವ ಕನಸಿದೆ.

**"ವಿದ್ಯಾರ್ಥಿನಿ" ಕನಿಕಾ ಗುರಯ್ಯಾ ಸ್ವಾಮಿ**



ನಮ್ಮ ಸರಕಾರಿ ಶಾಲೆಯ ಕೀರ್ತಿ ಹೆಚ್ಚಿಸಿದ ವಿದ್ಯಾರ್ಥಿನಿ ಕು.ಕನಿಕಾ ಗುರಯ್ಯಾಸ್ವಾಮಿಯವರು ಕಷ್ಟಪಟ್ಟು ಓದಿ 625 ರ ಅಂಕಗಳ ಪೈಕಿ 542 ಅಂಕಗಳು ಶೇ.86.73 ಪಡೆದಿದ್ದಾಳೆ, ಹಾಗೂ ಹಿಂದಿ ವಿಷಯದಲ್ಲಿ 100 ಕ್ಕೆ 100 ಅಂಕ ಪಡೆದಿದ್ದು, ಸಂತಸ ತಂದಿದೆ.

**– ಹಿಂದಿ ಶಿಕ್ಷಕ ಸಂಜೀವನ್ ಭೋಸ್ಲೇ**



**ಶಾಲೆಗೆ ಪ್ರಥಮ** ಬಂದಿರುವುದು ತುಂಬಾ ಖುಷಿ ತಂದಿದೆ. ನನ್ನ ಪೋಷಕರು ಮತ್ತು ಗುರುಗಳಿಗೆ ನನಗಿಂತ ಹೆಚ್ಚು ಸಂತಸವಾಗಿದೆ. ಮುಂದೆ ಪಿಯುಸಿ ವಿಜ್ಞಾನ ವಿಭಾಗಕ್ಕೆ ಸೇರಿಕೊಳ್ಳುತ್ತೇನೆ. ಬಳಿಕ ವೈದ್ಯಕೀಯಾಗಿ ಸಮಾಜದ ಬಡ ಜನರ ಸೇವೆ ಸಲ್ಲಿಸುತ್ತೇನೆ.

**"ವಿದ್ಯಾರ್ಥಿನಿ"**

**ತಹೋರಾ ಮಾಹಿನ್**


# ಸೌಲಭ್ಯ ಸಿಗದ ಗೃಹ ಆಧಾರಿತ ಮಕ್ಕಳಿಗೆ ಕಿಟ ವಿತರಣೆ



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಮೆ 8 ಇಲ್ಲಿನ ಕ್ಷೇತ್ರ ಶಿಕ್ಷಣಾಧಿಕಾರಿಗಳ ಹಾಗೂ ಕ್ಷೇತ್ರ ಸಮನ್ವಧಿಕಾರಿಗಳ ಸಮಿತಿಯಿಂದ ಕ್ಷೇತ್ರ ಸಂಪನ್ಮೂಲ ಕೇಂದ್ರ ಹಾಗೂ ಹುಲಸೂರ ವತಿಯಿಂದ 2024 ಮತ್ತು 25 ಸಾಲಿನ ಲ್ಲಿ ತೀವ್ರತರ ನ್ಯೂನತೆವುಳ ಸೌಲಭ್ಯ ಸಿಗದ ಗೃಹ ಆಧಾರಿತ(8) ಮಕ್ಕಳಿಗೆ ಕಿಟಗಳನ್ನು ವಿತರಿಸಲಾಯಿತು . ಈ ಕಾರ್ಯಕ್ರಮದಲ್ಲಿ ಕ್ಷೇತ್ರ ಸಮನ್ವಯಾಧಿಕಾರಿ ಹಾಗೂ ಪ್ರಭಾರಿ ಕ್ಷೇತ್ರಶಿಕ್ಷಣಾಧಿಕಾರಿಗಳಾದ ಪ್ರಭಾಕರ್ ಕಳಮಾಸೆ. ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷರಾದ ಸಂತೋಷ ಅಕ್ಕಣ್ಣಾ. ಹುಲಸೂರ ತಾಲೂಕಿನ ಪ್ರಾಥಮಿಕ ಶಾಲಾ ಶಿಕ್ಷಕ ಸಂಘದ ಅಧ್ಯಕ್ಷರಾದ ರಾಜಕುಮಾರ್ ನಂದೊಡೆ . ಪ್ರಾಥಮಿಕ ಶಾಲಾ ಶಿಕ್ಷಕ ಸಂಘದ ಸಂಘಟನಾ ಕಾರ್ಯದರ್ಶಿಯಾಗಿ ಶಿವಕುಮಾರ ಓಕಳಿ . ಬಿ. ಆರ್. ಪಿ. ಗಳಾದ ಪುಂಡಲಿಕ್ ಬಸನಾಯಕ. ಬಾಲಕೃಷ್ಣ ಪಾಟೀಲ್. ಬಿ. ಐ. ಇ. ಆರ್. ಟಿ. ಗಳಾದ ಡಾ. ಕೆ. ಜಿ. ಶರಣಪ್ಪಾ ಗದಲೇಗಾಂವ. ಅನಿತಾ. ಕೇಂದ್ರ ಬಿಂದುಗಳಾದ ಗೃಹ ಆಧಾರಿತ ಮಕ್ಕಳು ಪಾಲಕ ಪೋಷಕರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಸರಕಾರಿ ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಆಹ್ವಾನ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ರಾಜ್ಯ ಸರಕಾರಿ ಅಧಿಕಾರಿಗಳು ಮತ್ತು ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರಕ್ಕೆ ಕರ್ನಾಟಕ ರಾಜ್ಯ ಸರಕಾರಿ ನೌಕರರ ಸಂಘ ಬೆಂಗಳೂರು ವತಿಯಿಂದ ಅರ್ಜಿಯನ್ನು ಆಹ್ವಾನಿಸಿದ್ದು, ರಾಜ್ಯ ಸರಕಾರಿ ಅಧಿಕಾರಿಗಳು ಮತ್ತು ನೌಕರರು ತಮ್ಮ ಮಕ್ಕಳು ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಯಲ್ಲಿ ಶೇ. 90 ಕ್ಕಿಂತ ಹೆಚ್ಚು ಅಂಕ ಪಡೆದ ಮಕ್ಕಳು ಮೇ–31ರ ಒಳಗಾಗಿ ಆನ್‌ಲೈನ್ ಮೂಲಕ: online link: https://ksgeanews.blogspot.com ಅರ್ಜಿ ನವೊಂದಯಿಸಬೇಕೆಂದು ಸರಕಾರಿ ನೌಕರರ ಸಂಘ ತಾಲೂಕ ಶಾಖೆ ಚಿಟಗುಪ್ಪ ತಾಲೂಕಾಧ್ಯಕ್ಷ ರಾಜಶೇಖರ ಉಪ್ಪಿನ ರವರು ತಿಳಿಸಿದ್ದಾರೆ. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳ ತಂದೆ–ತಾಯಿ ಕರ್ನಾಟಕ ರಾಜ್ಯ ಸರಕಾರದ ಖಾಯಂ ನೌಕರರಾಗಿರಬೇಕು. ಸಂಘವು ನಿಗದಿ ಪಡಿಸಿರುವ ನಮೂನೆಯಲ್ಲಿ ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ಸಂಬಂಧಿಸಿದ ಜಿಲ್ಲಾ/ತಾಲೂಕಾ ಶಾಖೆಯ ಅಧ್ಯಕ್ಷರ ರುಜು ಮೊಹರಿನೊಂದಿಗೆ ದೃಢೀಕರಿಸಿ ಆನ್‌ಲೈನ್‌ನಲ್ಲಿ ಅಪರೌಡ್ ಮಾಡಬೇಕೆಂದು ಮನವಿ ಮಾಡಿದ್ದಾರೆ.

# ಪತ್ರಕರ್ತರ ಮಾಸಾಶನದ ಕಠಿಣ ಷರತ್ತು ಸರಳೀಕರಣಕ್ಕೆ ಕೆಯುಡಬ್ಲ್ಯೂಜೆ ಒತ್ತಾಯ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ನಿವೃತ್ತ ಪತ್ರಕರ್ತರ ಮಾಸಾಶನದಲ್ಲಿರುವ ಕಠಿಣ ಷರತ್ತುಗಳನ್ನು ಸರಳೀಕರಣ ಮಾಡುವಂತೆ ಕರ್ನಾಟಕ ಕಾರ್ಯ ನಿರತ ಪತ್ರಕರ್ತರ ಸಂಘ (ಕೆಯುಡಬ್ಲ್ಯೂಜೆ) ಆಗ್ರಹಿಸಿದೆ. ಈ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿರುವ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು, ಪತ್ರಕರ್ತರ ಮಾಸಾಶನ ನೀಡಲು ಕಠಿಣ ಷರತ್ತುಗಳನ್ನು ಹಾಕಿರುವುದು ಮಾತ್ರ ಸರಿಯಲ್ಲ. ಅರ್ಜಿ ಹಾಕಿದ ಪತ್ರಕರ್ತರಿಗೆ ಮಾಸಾಶನ ಮಂಜೂರು ಮಾಡಲು ಈ ಕಠಿಣ ಷರತ್ತುಗಳು ಅಡ್ಡಿಯಾಗಿವೆ. ಈ ಯೋಜನೆಯಿಂದ ಬಹುಪಾಲು ಪತ್ರಕರ್ತರು ವಂಚಿತರಾಗುತ್ತಿದ್ದಾರೆ ಎಂದು ಅವರು ತಿಳಿಸಿದ್ದಾರೆ. ಸುಧೀರ್ಘ ಅವಧಿಗೆ ಸೇವೆ ಸಲ್ಲಿಸಿದ ಹಿರಿಯ ಪತ್ರಕರ್ತರಿಗೂ ಅವರ ನಿವೃತ್ತಿ ಸಂದರ್ಭದಲ್ಲಿ ಮಾಸಾಶನ ಯೋಜನೆ ಪ್ರಯೋಜನಕ್ಕೆ ಬರುತ್ತಿಲ್ಲ. ಅನಾರೋಗ್ಯದಿಂದ ಬಳಲುತ್ತಿರುವ ಹಲವು ಪತ್ರಕರ್ತರಿಗೂ ಈ ಯೋಜನೆ ಉಪಯೋಗಕ್ಕೆ ಬಾರದಂತಾಗಿರುವುದು ವಿಷಾದನೀಯ. ಆದುದರಿಂದ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿ ಮಾಸಾಶನ ಮಂಜೂರು ಮಾಡಲು ಅಡ್ಡಿಯಾಗಿರುವ ಕಠಿಣ ಷರತ್ತುಗಳನ್ನು ಕಡ್ಡಾಯವಾಗಿ ತೆರವುಗೊಳಿಸಿ ಸರಳೀಕರಣ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.

**ಸ್ವಾಗತಾರ್ಹ ಕ್ರಮ:** ತಾವು ಮುಖ್ಯಮಂತ್ರಿಯಾದ ಮೇಲೆ ಪತ್ರಕರ್ತರ ಬಗ್ಗೆ ಕಾಳಜಿ ಇಟ್ಟು–ಕೊಂಡು ಹಲವು ಯೋಜನೆಗಳನ್ನು ಜಾರಿಗೊಳಿಸಿರುವುದು ಅಭಿನಂದನೀಯ.

ಈ ನಿಟ್ಟಿನಲ್ಲಿ ಪತ್ರಕರ್ತರ ಮಾಸಾಶನವನ್ನು 15 ಸಾವಿರಕ್ಕೆ ಹೆಚ್ಚಳ ಮಾಡಿರುವುದು ಸ್ವಾಗತಾರ್ಹ ಕ್ರಮವಾಗಿದೆ ಎಂದು ತಗಡೂರು ಪತ್ರದಲ್ಲಿ ತಿಳಿಸಿದ್ದಾರೆ.


## PUBLIC NOTICE

Under the instruction of my client by name;Kalavati W/o Venkat Rao R/o Manik Nagar Tq:Humnabad, issuing the following publication as the property vide open plot G.P. No.346/63 its property No. 150600501900200559 of village Manik Nagar Tq:Humnabad Dist:Bidar (Schedule of Property details to be Mentioned Clearly) that, the parent/chain/link title deed vide sale deed as document No. C5663/08-09 dated; 06-03-2009 in the name of kalavati W/o Venkat Rao R/o Manik Nagar Tq:Humnabad was lost/Miss Places while travelling in bus (facts to be mentioned). If any body found the above said title ded paese be inform me in below mentioned address within 7 days from the date of publication herewith both days inclusive), in case all persons having any claim in respect there of by way of sale, exchange, gift, mortgage or therwise however are requested inform the same in writing to the under singned having their office below that objection on the above schedule property, if I have not received any objection within stipulated days beyond that no claim is entertain or binding on my client.

Place:Humnabad

Dated: 08- 05-2025

**Sd/-**

Sri. S.M. Tumba Advocate

Humnabad Dist:Bidar

Mob.9480239863



ಬೀದರ:ಇಂದು ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ನೌಬಾದನ ಅಶೋಕನಗರ ಹಾಗೂ ಲುಂಬಿಣಿ ನಗರದಲ್ಲಿ ಪರಿಶಿಷ್ಟ ಜಾತಿಯಲ್ಲಿ ಒಳಮೀಸಲಾತಿ ಗಣತಿ ಹಿನ್ನೆಲೆಯಲ್ಲಿ ಗಣತಿದಾರರು ನಡೆಸುತ್ತಿರುವ ಮನೆ-ಮನೆ ಸಮೀಕ್ಷೆ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಈ ಸಂದರ್ಭದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ಸುಭಾಷ ನಾಗೂರೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಉಗ್ರರ ಮೇಲೆ ದಾಳಿ; ಬಿಜೆಪಿ, ಎಬಿವಿಪಿ ವಿಜಯೋತ್ಸವ





ಎಬಿವಿಪಿ ಕಾರ್ಯಕರ್ತರು ಬೀದರ್‌ನ ಹೆಣ್ಣು ಮಗು ವೃತ್ತದಲ್ಲಿ ವಿಜಯೋತ್ಸವ ಆಚರಿಸಿದರು

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 08 : ಪಾಕಿಸ್ತಾನ ಆಕ್ರಮಿತ ಕಾಶ್ಮೀರದ ಭಯೋತ್ಪಾದಕರ ಅಡಗುದಾಣಗಳ ಮೇಲೆ ಭಾರತೀಯ ಸೈನಿಕರು ವಾಯುದಾಳಿ ನಡೆಸಿರುವುದಕ್ಕೆ ಬಿಜೆಪಿ ಹಾಗೂ ಎಬಿವಿಪಿ ಕಾರ್ಯಕರ್ತರು ನಗರದಲ್ಲಿ ಬುಧವಾರ ಪ್ರತ್ಯೇಕವಾಗಿ ವಿಜಯೋತ್ಸವ ಆಚರಿಸಿದರು.

ಜಿಲ್ಲಾ ಬಿಜೆಪಿ: ಜಿಲ್ಲಾ ಬಿಜೆಪಿ ಕಾರ್ಯಕರ್ತರು ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ಪರಸ್ಪರ ಸಿಹಿ ಹಂಚಿಕೊಂಡು ವಿಜಯೋತ್ಸವ ಆಚರಿಸಿದರು. ಪಾಕಿಸ್ತಾನದ ವಿರುದ್ಧ ಘೋಷಣೆಗಳನ್ನು ಹಾಕಿದರು.

ಜಿಲ್ಲಾ ಬಿಜೆಪಿ ಅಧ್ಯಕ್ಷ ಸೋಮನಾಥ ಪಾಟೀಲ ಮಾತನಾಡಿ, ಕಾಶ್ಮೀರದ ಪಹಲ್ಗಾಮ್‌ನಲ್ಲಿ ಧರ್ಮ ಕೇಳಿ ಪ್ರವಾಸಿಗರ ಹತ್ಯೆ ಮಾಡಿದ್ದು ಖಂಡನಾರ್ಹ. ಅದರ ಬಗ್ಗೆ ವಿಶ್ವಸಂಸ್ಥೆ ಕೂಡ ಪಾಕಿಸ್ತಾನಕ್ಕೆ ಛೀಮಾರಿ ಹಾಕಿದೆ. ಈಗ ಭಾರತೀಯ ಸೈನಿಕರು ಉಗ್ರರ ತರಬೇತಿ ಶಿಬಿರಗಳ ಮೇಲೆ ವೈಮಾನಿಕ ದಾಳಿ ನಡೆಸಿ, ಅದಕ್ಕೆ ತಕ್ಕ ಉತ್ತರ ಕೊಟ್ಟಿದ್ದಾರೆ ಎಂದು ಹೇಳಿದರು.

ಭಯೋತ್ಪಾದಕರ ಅಡಗುದಾಣಗಳ ಮೇಲೆ ದಾಳಿ ನಡೆಸಲಾಗಿದೆ ಹೊರತು ನಾಗರಿಕರಾಗಲಿ, ಪಾಕಿಸ್ತಾನದ ಮಿಲಿಟರಿ ಮೇಲೆ ದಾಳಿ ನಡೆಸಿಲ್ಲ. ಭಾರತೀಯರ ಹತ್ಯೆಗೆ ಕಾರಣರಾದವರನ್ನು ಮಾತ್ರ ಗುರಿಯಾಗಿರಿಸಿ ದಾಳಿ ನಡೆಸಲಾಗಿದೆ ಎಂದರು.

ಕಾಶ್ಮೀರದಲ್ಲಿ ದಾಳಿ ನಡೆಯಲಿದೆ ಎಂದು ಪ್ರಧಾನಿ ನರೇಂದ್ರ ಮೋದಿಯವರಿಗೆ ಗೊತ್ತಿದ್ದರೂ ಅವರೇಕೆ ರಕ್ಷಣೆ ಮಾಡಲಿಲ್ಲ ಎಂದು ಕಾಂಗ್ರೆಸ್ ಹೇಳಿದೆ. ಡೋಂಗಿ ಜಾತ್ಯತೀತ ನಾಯಕರೆನಿಸಿಕೊಂಡಿರುವ ಸಿದ್ದರಾಮಯ್ಯನವರು ಯುದ್ಧ ಬೇಡ ಶಾಂತಿ ಬೇಕು ಎಂದು ಹೇಳುತ್ತಿದ್ದರು. ಆದರೆ, ಇಂದು ಕರ್ನಲ್ ಸೋಫಿಯಾ ಅವರ ನೇತೃತ್ವದಲ್ಲಿ ದಾಳಿ ನಡೆದಿದೆ. ಅವರು ಅಲ್ಪಸಂಖ್ಯಾತ ಸಮುದಾಯಕ್ಕೆ ಸೇರಿದವರು. ನಿಜವಾದ ಜಾತ್ಯತೀತರು ಪ್ರಧಾನಿ ಮೋದಿ ಎಂದು ಹೇಳಿದರು. ಕೇಂದ್ರದ ಮಾಜಿ ಸಚಿವ ಭಗವಂತ ಖೂಬಾ, ನಗರಸಭೆ ಸದಸ್ಯ ಶಶಿಧರ ಹೊಸಳ್ಳಿ, ಪಕ್ಷದ ಉಪಾಧ್ಯಕ್ಷ ವಿಜಯಕುಮಾರ ಪಾಟೀಲ ಗಾದಗಿ, ಮುಖಂಡರಾದ ಈಶ್ವರ ಸಿಂಗ್ ಠಾಕೂರ್, ಬಾಬುವಾಲಿ, ಶಕುಂತಲಾ ಬೆಲ್ದಾಳೆ, ಹಣಮಂತ, ಮಾಶೆಟ್ಟಿ, ವೀರು ದಿಗ್ವಾಲ್ ಮತ್ತಿತರರು ಪಾಲ್ಗೊಂಡಿದ್ದರು.

ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ (ಎಬಿವಿಪಿ): ಪರಿಷತ್ತಿನ ಕಾರ್ಯಕರ್ತರು ನಗರದ ಹೆಣ್ಣು ಮಗು ವೃತ್ತದಲ್ಲಿ ಸಿಹಿ ಹಂಚಿ ಸಂಭ್ರಮಿಸಿದರು. ಭಾರತೀಯ ಸೈನಿಕರ ಪರ ಘೋಷಣೆ ಕೂಗಿದರು.

ಎಬಿವಿಪಿ ಜಿಲ್ಲಾ ಸಂಘಟನಾ ಕಾರ್ಯದರ್ಶಿ ಹೇಮಂತ ಮಾತನಾಡಿ, ಭಯೋತ್ಪಾದಕರ ವಿರುದ್ಧ ಕ್ರಮ ಕೈಗೊಳ್ಳಬೇಕೆನ್ನುವುದು ಭಾರತೀಯರ ಒತ್ತಾಯವಾಗಿತ್ತು. ಅದಕ್ಕೆ ತಕ್ಕಂತೆ ನಮ್ಮ ಸೇನಾಪಡೆ ಕ್ರಮ ಕೈಗೊಂಡಿರುವುದು ಭಾರತೀಯರೆಲ್ಲರಿಗೂ ಖುಷಿ ತಂದಿದೆ. ಉಗ್ರರಿಗೆ ಉತ್ತಮ ಪಾಠ ಕಲಿಸಿದ್ದಾರೆ ಎಂದು ಹೇಳಿದರು. ಮಂಗಳವಾರ ಮಧ್ಯರಾತ್ರಿ ಉಗ್ರಗಾಮಿಗಳ ತಾಣದ ಮೇಲೆ ಕಾರ್ಯಾಚರಣೆ ನಡೆಸಿರುವುದು ಪ್ರತಿಯೊಬ್ಬರ ಭಾರತೀಯರ ಪಾಲಿಗೆ ಸಂಭ್ರಮದ ದಿನ. ಎಲ್ಲರೂ ಈ ಸಂದರ್ಭದಲ್ಲಿ ಸೇನೆಯ ಜೊತೆಗೆ ನಿಲ್ಲಬೇಕು ಎಂದು ತಿಳಿಸಿದರು. ಎಬಿವಿಪಿ ನಗರ ಘಟಕದ ಕಾರ್ಯದರ್ಶಿ ಆನಂದ, ಸಹ ಕಾರ್ಯದರ್ಶಿ ನಾಗರಾಜ, ರಾಜ್ಯ ಕಾರ್ಯಕಾರಿಣಿ ಸದಸ್ಯ ಲಿಂಗದೇವ ಗುತ್ತಿ ಹಾಗೂ ಕಾಲೇಜು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಬೇಸಿಗೆ ರಜೆಯಲ್ಲಿ ವಿಶೇಷ ತರಗತಿಯಲ್ಲಿ ಪಾಲಕರು ಭಾಗಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮೇ.8: ಕನ್ನಡ ಭಾಷೆ ಜೊತೆಗೆ ಇಂಗ್ಲಿಷ ಭಾಷೆ ಕಲಿತು ಉನ್ನತ ಹುದ್ದೆಗಳನ್ನು ಅಲಂಕರಿಸಲು ಸಾಧ್ಯ ಎಂದು ಸ್ವಾಮಿ ವಿವೇಕಾನಂದ ಸ್ಪೋಕನ ಇಂಗ್ಲಿಷ್ ಕ್ಲಾಸೆಸ್ ಮುಖ್ಯಸ್ಥ ಲಕ್ಷ್ಮಿ ಚವ್ಹಾಣ ಪಾಲಕರೆ ಕರೆ ನೀಡಿದರು. ಪಟ್ಟಣದ ಮಹಾಜನ ಸಂಕೀರ್ಣದಲ್ಲಿ ಪಾಲಕರ ಸಭೆ ಕಾರ್ಯಕ್ರಮದ ಉದ್ಘಾಟಿಸಿ ಅವರು ಮಾತನಾಡಿ, ಬೇಸಿಗೆ ರಜೆಯಲ್ಲಿ ವಿಶೇಷ ತರಬೇತಿ ಆರಂಭಿಸಲಾಗಿದೆ.

ಆದರಿಂದ ಪಾಲಕರು ತಮ್ಮ ಮಕ್ಕಳಿಗೆ ಮನೆಯಲ್ಲಿ ಸ್ವಲ್ಪ ಹೆಚ್ಚಿನ ಗಮನ ಹರಿಸಿದರೆ ಮಕ್ಕಳು ಮನೆಯಲ್ಲಿ ಕುಳಿತು ವಿದ್ಯಾಭ್ಯಾಸ ಮಾಡಲು ಸಾಧ್ಯ ಎಂದು ಪಾಲಕರು ಹೇಳಿದರು.

ಇಂದಿನ ಆಧುನಿಕ ಯುಗದಲ್ಲಿ ಇಂಗ್ಲಿಷ್ ಭಾಷೆ, ಅವರ ಮಾಹಿತಿ ಎಲ್ಲರಿಗೂ ಅಗತ್ಯವಾಗಿದೆ. ಹೀಗಾಗಿ ಅಂಗ್ಲ ಕಲಿಕೆಯ ಕಡ್ಡಾವವಾಗಿದೆ ಎಂದು ಹೇಳಿದರು. ಇತಿಚಿಗೆ ಟಿ.ವಿ. ಹಾವಳಿ ಹೆಚ್ಚಾಗುವುದರಿಂದ ಮಕ್ಕಳ ಮನಸ್ಸಿನ ಮೇಲೆ ಗಾಡ ಪರಿಣಾಮ ಬೀರುತ್ತಿದೆ. ಆದ-ರಿಂದ ಪಾಲಕರು ತಮ್ಮ ಮಕ್ಕಳ ಮೇಲೆ ಹೆಚ್ಚಿನ ನಿಗಾ ವಹಿಸಿ ಅವರ ಆರೋಗ್ಯ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು ಎಂದರು.

ಈ ಸಂದರ್ಭದಲ್ಲಿ ಜಯಶ್ರೀ ಭೈರೆ, ಸುನಿತಾ ಮಹಾಜನ, ಶೋಭಾ ಭೈರೆ, ಶರ್ಮಿಲಾ ಭೈರೆ, ಶೃತಿ ಪ್ರಕಾಶ ಬೋಂಬಳಗೆ, ರಾಣಿ ಮಹಾಜನ, ಶಿವಕರ್ಣ ಶಿರಗಿರೆ ಸೇರಿದಂತೆ ಮಕ್ಕಳು ಇತರರಿದ್ದರು.

# ಬ್ರಹ್ಮಾಕುಮಾರಿ ಶಿವಶಕ್ತಿ ಭವನದಲ್ಲಿ ಜರುಗಿದ ಮಕ್ಕಳ ವ್ಯಕ್ತಿತ್ವ ವಿಕಸನ ಶಿಬಿರ




ಮಲ್ಲಮ್ಮ ನುಡಿ ವಾರ್ತೆ

ಬೀದರ. ಮೇ. 08 : ಬ್ರಹ್ಮಕುಮಾರಿ ಈಶ್ವರಿಯ ವಿಶ್ವವಿದ್ಯಾಲಯ ರಾಜಯೋಗ ಕೇಂದ್ರ ಶಿವಶಕ್ತಿ ಭವನವು ಪ್ರತಿ ವರ್ಷದಂತೆ ಈ ವರ್ಷ ಸಹ ಮಕ್ಕಳ ಬೇಸಿಗೆ ಶಿಬಿರ ಹಮ್ಮಿಕೊಂಡಿದ್ದರು.. ಮೇ 1 ರಿಂದ 3 ರ ವರೆಗೆ 1 ರಿಂದ 6 ನೇ ತರಗತಿಯ ವಿದ್ಯಾರ್ಥಿಗಳಿಗೆ ಮಕ್ಕಳ ವ್ಯಕ್ತಿತ್ವ ವಿಕಸನ ಶಿಬಿರ ಆಯೋಜಿಸಲಾಗಿತ್ತು.

ಉದ್ಘಾಟನಾ ಕಾರ್ಯಕ್ರಮ:- ಕಾರ್ಯಕ್ರಮದ ಮೊದಲ ದಿನದಂದು, ಬ್ರಹ್ಮಾಕುಮಾರಿ ಶಿವಶಕ್ತಿ ಭವನದ ಸಂಚಾಲಕಿ ರಾಜಯೋಗಿನಿ ಬಿ.ಕೆ.ಸುಮಂಗಲಾ ಅಕ್ಕನವರು ಹಾಗೂ ರಾ-ಜಯೋಗಿನಿ ಬಿ.ಕೆ.ಸುನಂದಾ ಅಕ್ಕನವರು ಸಾನಿಧ್ಯ ವಹಿಸಿದ್ದರು., ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಮಹೇಶ ಬಿರಾದಾರ ಕಾರ್ಯಕ್ರಮ ಉದ್ಘಾಟಿಸಿದರು.

ನಂತರ ಮಾತನಾಡಿರುವ ಅವರು, ಮಕ್ಕಳು ತಮ್ಮ ಆರೋಗ್ಯ ಕಾಪಾಡಿಕೊಳ್ಳಲು ನಿತ್ಯ ಪೌಷ್ಟಿಕ ಆಹಾರ ಮಾತ್ರ ಸೇವಿಸಬೇಕು, ಯಾವುದೇ ಜಂಕ್ ಫುಡ್ ಗಳನ್ನು ಸೇವಿಸಬಾರದು. ಜೊತೆಗೆ ಮಕ್ಕಳಲ್ಲಿ ಸಂಸ್ಕಾರ-ಸಂಸ್ಕೃತಿ ಹಾಗೂ ಅವರ ಚುರುಕುತನ ಹೆಚ್ಚಾಗಲು ನಿತ್ಯಯೋಗ-ಧ್ಯಾನಕ್ಕೆ ಮಾರು ಹೋಗಬೇಕೆಂದು ಕರೆ ನೀಡಿದರು.

ಎನ್.ಕೆ ಜಾಬಶೆಟ್ಟಿ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಪ್ರಾಧ್ಯಾಪಕಿ ಡಾ. ಯೋಗೇಶ್ವರಿ ಮಾತನಾಡಿ, ಆಯುರ್ವೇದ ಹಾಗೂ ಯೋಗ ಮತ್ತು ಧ್ಯಾನಕ್ಕೆ ನಿಕಟ ಸಂಬಂಧವಿದೆ. ಆಯುರ್ವೇದದಿಂದ ಪರಿಪೂರ್ಣ ಆರೋಗ್ಯ ಕಾಪಾಡಿಕೊಳ್ಳಲು ಬಹಳಷ್ಟು ಅವಕಾಶವಿದ್ದು, ಅದು ಅಲೋಪತಿಗಿಂತಲೂ ದೀರ್ಘಕಾಲದ ಆರೋಗ್ಯ ವೃದ್ಧಿಸುತ್ತದೆ ಜೊತೆಗೆ ದೀರ್ಘ ಕಾಲದ ಕಾಯಿಲೆಗಳಿಗೆ ಆಯುರ್ವೇದವೇ ದೊಡ್ಡ ಅಸ್ತ್ರ ಎಂದು ಪ್ರತಿಪಾದಿಸಿದರು.

ಜಿಲ್ಲಾ ಸಹಕಾರಿ ನಿಯಮಿತದ ನಿರ್ದೇಶಕ ಶ್ರೀನಿವಾಸ್ ರೆಡ್ಡಿ, ಬೆಂಗಳೂರಿನ ಪ್ರಗತಿಪರ ರೈತ ಬಸವರಾಜ ಪಾಟೀಲ್ ಮುಂತಾದ ಗಣ್ಯರು ಉದ್ಘಾಟನಾ ಸಮಾರಂಭದಲ್ಲಿದ್ದರು.

ಬಿ.ಕೆ.ಪಾರ್ವತಿ ಕಾರ್ಯಕ್ರಮ ನಿರೂಪಿಸಿದರು. ಕು.ಶ್ರುತಿ ಸ್ವಾಗತ ನೃತ್ಯದೊಂದಿಗೆ ಅತಿಥಿಗಳನ್ನು ಸ್ವಾಗತಿಸಿದರು.

ಪ್ರತಿದಿನ 80 ಕ್ಕೂ ಹೆಚ್ಚು ಮಕ್ಕಳು ಶಿಬಿರದಲ್ಲಿ ಭಾಗವಹಿಸಿದ್ದರು. ಈ ಸಂದರ್ಭದಲ್ಲಿ, ಬಿ ಕೆ ಶಿಕ್ಷಕರು ನೈತಿಕ ಮೌಲ್ಯ ಶಿಕ್ಷಣ, ರಾ-ಜಯೋಗ ಧ್ಯಾನ, ಸ್ವಯಂ ಪರಿಚಯ – ನಾನು ಯಾರು, ದೇವರ ನಿಜವಾದ ಪರಿಚಯ, ಸ್ಫೂರ್ತಿದಾಯಕ ಕಥೆಗಳು ಇತ್ಯಾದಿ ವಿಷಯಗಳ ಕುರಿತು ಮಾರ್ಗದರ್ಶನ ನೀಡಿದರು. ಇದಲ್ಲದೆ, ಮಕ್ಕಳ ಆಂತರಿಕ ಕೌಶಲ್ಯ ಅಭಿವೃದ್ಧಿಗಾಗಿ ವಿವಿಧ ಕಲೆಗಳು ಮತ್ತು ಚಟುವಟಿಕೆಗಳನ್ನು ಸಹ ನಡೆಸಲಾಯಿತು. ಇದರಲ್ಲಿ ಸಂಗೀತ ವ್ಯಾಯಾಮಗಳು, ಚಿತ್ರಕಲಾ ಸ್ಪರ್ಧೆ, ಕಾಗದದ ಕಲೆ ಮತ್ತು ಕರಕುಶಲ ವಸ್ತುಗಳು, ಹಾಡುಗಾರಿಕೆ ಮತ್ತು ನೃತ್ಯ, ಸ್ಮರಣಶಕ್ತಿ ಆಟಗಳು, ದೇವರಿಗೆ ಪತ್ರ... ಇತ್ಯಾದಿ ಸೇರಿವೆ. ಮಕ್ಕಳು ಎಲ್ಲಾ ಚಟುವಟಿಕೆಗಳಲ್ಲಿ ಬಹಳ ಉತ್ಸಾಹದಿಂದ ಭಾಗವಹಿಸಿ ತಮ್ಮ ಪ್ರತಿಭೆಯನ್ನು ಅದ್ಭುತವಾಗಿ ಪ್ರದರ್ಶಿಸಿದರು.

ಬಹುಮಾನ ವಿತರಣೆ: ಮೂರನೇ ಮತ್ತು ಕೊನೆಯ ದಿನದಂದು ಶಿಬಿರದ ಸಮಾರೋಪ ಸಮಾರಂಭ ನಡೆಯಿತು. ಇದರಲ್ಲಿ ಅತಿಥಿಗಳು ಬಹುಮಾನ ವಿತರಿಸಿದರು. ವಿವಿಧ ಆಟಗಳು ಮತ್ತು ಕಾರ್ಯಾಗಾರಗಳಲ್ಲಿ ವಿಜೇತರಾದ ಮಕ್ಕಳಿಗೆ ಪ್ರಥಮ ಮತ್ತು ದ್ವಿತೀಯ ಬಹುಮಾನ ವಿತರಿಸಿದರು.

ಈ ಸಮಯದಲ್ಲಿ, ಮಕ್ಕಳು ತಮ್ಮ ಅನುಭವಗಳನ್ನು ಹಂಚಿಕೊಂಡರು, ಮತ್ತು ಈ ಶಿಬಿರವನ್ನು ಆಯೋಜಿಸಿದ್ದಕ್ಕಾಗಿ ಬ್ರಹ್ಮಕುಮಾರೀಸ್ ಶಿಕ್ಷಕರಿಗೆ ತಮ್ಮ ಕೃತಜ್ಞತೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಬ್ರಹ್ಮಾಕುಮಾರಿ ಕೇಂದ್ರ ಶಿವಶಕ್ತಿ ಭವನದ ರಾಜಯೋಗಿನಿ ಬಿ.ಕೆ. ಸುನಂದಾ ದೀದಿ, ಸರ್ಕಾರಿ ಪ್ರೌಢಶಾಲೆಯ ಪ್ರಾಂಶುಪಾಲರಾದ ಬಿ.ಕೆ. ಮೀನಾ, ನಿವೃತ್ತ ಪೊಲೀಸ್ ಕಾನ್ಸ್‌ಟೇಬಲ್ ಸೂರ್ಯಕಾಂತ ಮುಂತಾದವರು ವೇದಿಕೆಯಲ್ಲಿದ್ದರು.

## ಗೃಹಲಕ್ಷ್ಮಿ ಹಣದಿಂದ ವಿದ್ಯಾರ್ಥಿಗಳಿಗೆ ಗ್ರಂಥಾಲಯ ಕಟ್ಟಿಸಿದ ಮಹಿಳೆ

# ವಿದ್ಯಾಭ್ಯಾಸಕ್ಕೆ ನೆರವಾದ ಗೃಹಲಕ್ಷ್ಮಿ ಯೋಜನೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು, ಮೇ 8: ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳು ರಾಜ್ಯದ ಬಡ ಜನರ ಜೀವನ ಆರ್ಥಿಕವಾಗಿ ಸುಧಾರಿಸಿಕೊಳ್ಳಲು ವಿವಿಧ ರೀತಿಗಳಲ್ಲಿ ನೆರವಾಗುತ್ತಿವೆ. ಅದರಲ್ಲೂ ಮುಖ್ಯವಾಗಿ ಮನೆಯ ಯಜಮಾನಿಗೆ ಪ್ರೋತ್ಸಾಹಿಸಲು ಧನ ಸಹಾಯ ನೀಡುವ ಗೃಹಲಕ್ಷ್ಮಿ ಯೋಜನೆಯು ಪ್ರತಿ ಮಹಿಳೆಯರ ಹಾಗೂ ಮನೆಯವರ ಮನೆಮಾತಾಗಿದೆ.

ಅನೇಕ ಮಹಿಳೆಯರು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ತಮಗೆ ಗೃಹಲಕ್ಷ್ಮಿ ಯೋಜನೆ ಯಾವೆಲ್ಲಾ ರೀತಿಯಲ್ಲಿ ಸಹಾಯಕವಾಗಿದೆ ಎಂದು ತಮ್ಮ ಯಶಸ್ಸಿನ ಯಶೋಗಾಥೆಯನ್ನು ಹಂಚಿಕೊಂಡಿದ್ದಾರೆ. ಗೃಹಲಕ್ಷ್ಮಿ ಹಣದಿಂದ ಮಕ್ಕಳ ಶಾಲೆ ಶುಲ್ಕ, ವೈದ್ಯಕೀಯ ಖರ್ಚು, ದಿನಸಿ ಖರೀದಿ ಹೀಗೆ ನಾನಾ ರೀತಿಯಲ್ಲಿ ಮನೆಯ ಯಜಮಾನಿಗೆ ಪ್ರತಿ ತಿಂಗಳು ನೀಡುವ ಧನಸಹಾಯವು ಸದ್ಬಳಕೆಯಾಗುತ್ತಿದೆ.

ರಾಯಬಾಗ ತಾಲ್ಲೂಕಿನ ಮಂಟೂರು ಗ್ರಾಮದ ಮಕ್ಕಳು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸಲು ಬೆಂಗಳೂರು, ಧಾರವಾಡ, ವಿಜಯಪುರಕ್ಕೆ ಹೋಗುತ್ತಾರೆ. ಅಲ್ಲಿ ತರಬೇತಿ ಪಡೆಯಲು ಅವರಿಗೆ ಆರ್ಥಿಕ ಸಮಸ್ಯೆ ಆಗುತ್ತಿತ್ತು. ಊಟ, ಆರೋಗ್ಯದ ಸಮಸ್ಯೆ ಕೂಡ ಕಾಡುತ್ತಿತ್ತು. ಹೀಗಾಗಿ ಗ್ರಾಮದಲ್ಲಿಯೇ ಒಂದು ಗ್ರಂಥಾಲಯ ಕಟ್ಟಬೇಕು ಅನ್ನೋದು ಶ್ರೀಮತಿ ಮಲ್ಲವ್ವ ಮೇಟಿರವರ ಕನಸಾಗಿತ್ತು.

ಈ ಹಿನ್ನಲೆಯಲ್ಲಿ ಶ್ರೀಮತಿ ಮಲ್ಲವ್ವ ಮೇಟಿರವರು ಗೃಹಲಕ್ಷ್ಮಿ ಯೋಜನೆಯ ಹಣದಿಂದ ಸ್ಪರ್ಧಾತ್ಮಕ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಅನುಕೂಲವಾಗಲಿ ಎಂದು ಸಣ್ಣ ಗ್ರಂಥಾಲಯ ನಿರ್ಮಿಸಿದ್ದಾರೆ. ವಿದ್ಯಾಭ್ಯಾಸಕ್ಕೆ ನೆರವಾದ ಗೃಹಲಕ್ಷ್ಮಿ

ದ್ವಿತೀಯ ಪಿಯುಸಿಯ ಕಲಾ ವಿಭಾಗದಲ್ಲಿ ರಾಜ್ಯಕ್ಕೆ ಪ್ರಥಮ ಸ್ಥಾನ ಪಡೆದ ವೇದಾಂತ್ ಕುಟುಂಬಕ್ಕೆ ನೆರವಾಗಿದ್ದು ಗೃಹಲಕ್ಷ್ಮಿ ಯೋಜನೆಯ ಹಣ. ಗೃಹಲಕ್ಷ್ಮಿ ಯೋಜನೆಯ ಹಣ ಆಸರೆಯಾಗಿ, ಶಿಕ್ಷಣ ಪಡೆಯಲು ನೆರವಾಗಿದ್ದು, ಈ ಯೋಜನೆಯ ಸಾರ್ಥಕತೆಗೆ ಮತ್ತೊಂದು ಸಾಕ್ಷಿಯಾಗಿದೆ.

ತಂದೆಯನ್ನು ಕಳೆದುಕೊಂಡ ಕುಟುಂಬಕ್ಕೆ ತಾಯಿಯೇ ಆಸರೆಯಾಗಿದ್ದರು. ಅವರಿಗೆ ಬರುತ್ತಿದ್ದ ಗೃಹಲಕ್ಷ್ಮಿ ಹಣವು ವೇದಾಂತ್ ಅವರ ಅಧ್ಯಯನ ಮತ್ತು ಹಾಸ್ಟೆಲ್ ವಾಸ್ತವ್ಯ ಹಾಗೂ ಇತರೆ ಖರ್ಚುಗಳಿಗೆ ಸಹಾಯವಾಗಿದೆ ಎಂದು ಸರ್ಕಾರಕ್ಕೆ ಕೃತಜ್ಞತೆ ಸಲ್ಲಿಸಿದ್ದಾರೆ.

ಗೃಹಲಕ್ಷ್ಮಿ ಹಣ ಓದಿಗೆ ಸಹಕಾರಿ: ಮಹಾದೇವಿ ಚಾಮರಾಜನಗರ ಜಿಲ್ಲೆ ಗುಂಡ್ಲುಪೇಟೆ ತಾಲ್ಲೂಕಿನ ನಿಟ್ರೆ ಗ್ರಾಮದ ನಿವಾಸಿಗಳಾದ ಮಹೇಶ್ ಮತ್ತು ಶ್ರೀಮತಿ ಪುಟ್ಟತಾಯಮ್ಮ ಇವರು ಕೂಲಿ ಮಾಡಿ ಜೀವನ ಸಾಗಿಸುತ್ತಿದ್ದು ಸದರಿ ದಂಪತಿಗಳ ಮಗಳಾದ ಕುಮಾರಿ ಮಹಾದೇವಿ ಬೇಗೂರಿನ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕಲಾ ವಿಭಾಗದಲ್ಲಿ 591 ಅಂಕಗಳಿಸಿ ಶೇಕಡಾ 98.00 ಫಲಿತಾಂಶ ಪಡೆದಿರುತ್ತಾರೆ. ಗೃಹಲಕ್ಷ್ಮಿ ಯೋಜನೆಯ ಧನಸಹಾಯದಿಂದ ವಿದ್ಯಾಭ್ಯಾಸಕ್ಕೆ ಸಹಕಾರಿಯಾಗಿರುವುದಾಗಿ ಮಹಾದೇವಿ ತಿಳಿಸಿರುತ್ತಾರೆ.




ಚಿತ್ರದುರ್ಗ ಜಿಲ್ಲೆಯ ಬೇಡರ ಶಿವನಕೆರೆ ಗ್ರಾಮ ಸುನಿತಾ, ಗೃಹಲಕ್ಷ್ಮಿ ಯೋಜನೆ ಫಲಾನುಭವಿಯಾಗಿದ್ದಾರೆ. 14 ತಿಂಗಳಿಂದ ಈ ಯೋಜನೆಯಡಿ ಪ್ರತಿ ತಿಂಗಳು 2000 ರೂಪಾಯಿ ಹಣ ಅವರ ಖಾತೆಗೆ ಜಮೆಯಾಗುತ್ತಿದೆ. ಮಕ್ಕಳ ಶಾಲೆ ಶುಲ್ಕ ಜೊತೆಗೆ ಟೈಲರ್ ವೃತ್ತಿಯನ್ನು ಆರಂಭಿಸಿ ದುಡಿಮೆಯ ಮಾರ್ಗ ಕಂಡುಕೊಳ್ಳಲು ಯೋಚಿಸಿದ ಸುನಿತಾ ಗೃಹಲಕ್ಷ್ಮಿ ಹಣದಲ್ಲಿ ಹೊಸ ಹೊಲಿಗೆ ಯಂತ್ರ ಖರೀದಿ ಮಾಡಿದ್ದಾರೆ.

ಪತಿಯ ಕಣ್ಣಿನ ಶಸ್ತ್ರಚಿಕಿತ್ಸೆಗೆ ನೆರವಾದ ಗೃಹಲಕ್ಷ್ಮಿ ಯೋಜನೆ

ಬೆಳಗಾವಿಯ ಅನಗೋಳದ ಚಂದ್ರಶೇಖರ ಬಡಿಗೇರ ಅವರು ಖಾಸಗಿ ಕಂಪನಿಯಲ್ಲಿ ಬಡಗಿ ಕೆಲಸ ಮಾಡುವ ಸಂದರ್ಭದಲ್ಲಿ ಕಣ್ಣಿನ ನರ ದೋಷ ಸರಿಪಡಿಸಲು ಶಸ್ತ್ರ ಚಿಕಿತ್ಸೆಗಾಗಿ ಆರ್ಥಿಕ ಸಮಸ್ಯೆಯಿಂದ ಇವರು ಪರದಾಡುತ್ತಿದ್ದರು. ಚಂದ್ರಶೇಖರ ಅವರ ಸೇವಾ ಅವಧಿಯ ಮೊತ್ತವನ್ನೆಲ್ಲ ಸೇರಿಸಿ ಈ ಮೊದಲು ಶಸ್ತ್ರ ಚಿಕಿತ್ಸೆ ಮಾಡಿಸಲಾಗಿತ್ತು. ಆ ಬಳಿಕವೂ ಅವರಿಗೆ ಕಣ್ಣಿನ ಸಮಸ್ಯೆ ಸಂಪೂರ್ಣವಾಗಿ ಬಗೆಹರಿದಿರಲಿಲ್ಲ.

ಇಂತಹ ಸನ್ನಿವೇಶದಲ್ಲಿ ಶ್ರೀ ಚಂದ್ರಶೇಖರ ಬಡಿಗೇರ ಇವರ ಪತ್ನಿಯ ಗೃಹಲಕ್ಷ್ಮಿ ಯೋಜನೆಯ ಧನಸಹಾಯದಿಂದ ಪತಿಗೆ ಶಸ್ತ್ರಚಿಕಿತ್ಸೆ ಮಾಡಿಸುವ ಮೂಲಕ ದೃಷ್ಟಿದೋಷವನ್ನು ನಿವಾರಿಸಿಕೊಂಡಿರುತ್ತಾರೆ.

ಬಳ್ಳಾರಿ ಜಿಲ್ಲೆಯ ಸಂಗನಕಲ್ಲು ಗ್ರಾಮದ ಶ್ರೀಮತಿ ಜೆ. ಅರುಣಾ ಹಾಗೂ ಶ್ರೀ ಬಸವರಾಜ್ ಬಡ ದಂಪತಿಗಳು ಗೃಹಲಕ್ಷ್ಮಿ ಯೋಜನೆಯ ಧನಸಹಾಯವನ್ನು ಕೂಡಿಟ್ಟು ಯುಗಾದಿ ಹಬ್ಬದ ಪ್ರಯುಕ್ತ ರೂ. 13,600/- ಮೊತ್ತದ ಹೊಸ ಟಿವಿಯನ್ನು ಖರೀದಿಸಿ ಸಂಭ್ರಮಿಸಿದ್ದಾರೆ.

ಗೃಹಲಕ್ಷ್ಮಿ ಯೋಜನೆ ಹಣದಿಂದ ಮೊಬೈಲ್ ಖರೀದಿಸಿ ವಾ???ಪೇಪ???ನಲ್ಲಿ ಸಿಎಂ ಫೋಟೋ ಹಾಕಿದ ಮಹಿಳೆ

ಹಾವೇರಿ ಜಿಲ್ಲೆಯ ನಿವಾಸಿ, ಗೃಹಲಕ್ಷ್ಮಿ ಯೋಜನೆಯ ಫಲಾನುಭವಿ ಮಹಿಳೆಯೊಬ್ಬರು ಯೋಜನೆಯ ಪ್ರತಿ ತಿಂಗಳ ಧನಸಹಾಯವನ್ನು ಕೂಡಿಟ್ಟು ತಮ್ಮ ಇಷ್ಟದ ಮೊಬೈಲ್ ಖರೀದಿಸಿ, ಮಾನ್ಯ ಮುಖ್ಯಮಂತ್ರಿಗಳ ಫೋಟೋವನ್ನು ವಾಲ್ ಪೇಪ???ನಲ್ಲಿರಿಸಿ ಸಂಭ್ರಮಿಸಿರುತ್ತಾರೆ. ಹಾವೇರಿಯಲ್ಲಿ ನಡೆದ ಸಮಾವೇಶಕ್ಕೆ ಹೊಸ ಮೊಬೈ???ನೊಂದಿಗೆ ಬಂದಾಗ ಅವರ ಖುಷಿ ಕ್ಯಾಮರಾದಲ್ಲಿ ಸೆರೆಯಾಗಿದೆ. ಗೃಹಲಕ್ಷ್ಮಿ ಹಣದಿಂದ ಮಹಿಳೆಯರು ತಮ್ಮ ಮನೆ ಮಂದಿಗೆ ಬೇಕಾಗುವ ಅಗತ್ಯ ವಸ್ತುಗಳನ್ನು ಖರೀದಿ ಮಾಡಿರುವ ಘಟನೆಗಳೂ ನಡೆದಿವೆ. ವಿವಿಧ ಆರ್ಥಿಕ ಸಮಸ್ಯೆಗಳಿಂದ ಬಳಲುತ್ತಿರುವ ಜನತೆಗೆ ರಾಜ್ಯ ಸರ್ಕಾರದ ಪಂಚ ಗ್ಯಾರೆಂಟಿ ಯೋಜನೆಗಳು ಆಸರೆಯಾಗಿವೆ. ಜೊತೆಗೆ ಕೆಲ ಮಹಿಳೆಯರು ಸ್ವಂತ ವ್ಯಾಪಾರ, ಹೊಲಿಗೆ ಯಂತ್ರ ಖರೀದಿ, ಹೈನುಗಾರಿಕೆ, ಮನೆಗೆ ಫ್ರಿಡ್ಜ್ ಖರೀದಿಸಿ ಗೃಹಲಕ್ಷ್ಮೀ ಯೋಜನೆಯ ಸದುಪಯೋಗ ಪಡೆದುಕೊಂಡಿದ್ದಾರೆ. ಮಹಿಳೆಯರ ಆರ್ಥಿಕ ಸ್ವಾವಲಂಬನೆಗೆ ವರದಾನವಾಗಿದೆ.

**-ಸ್ಮಿತಾ ಆರ್., ವಾರ್ತಾ ಸಹಾಯಕರು**

# ಭಗವಾನ್ ಬುದ್ಧ ಅವರ ಜಯಂತಿ ಅರ್ಥಪೂರ್ಣವಾಗಿ ಆಚರಣೆಗೆ ನಿರ್ಧಾರ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮೇ: 8: ಜಿಲ್ಲಾಡಳಿತದವತಿಯಿಂದಜಿಲ್ಲೆಯಲ್ಲಿ ಇದೇ ಮೇ.12ರಂದು ಭಗವಾನ್ ಬುದ್ಧ ಅವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ.

ಜಿಲ್ಲಾಧಿಕಾರಿ ಡಾ.ಸುಶೀಲ.ಬಿ ಅವರ ಅಧ್ಯಕ್ಷತೆಯಲ್ಲಿ ಇತ್ತೀಚೆಗೆ ಭಗವಾನ್ ಬುದ್ಧ ಅವರ ಜಯಂತಿ ಆಚರಣೆ ಕುರಿತು ನಡೆದ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಇದೇ ಮೇ 12 ರ ಬೆಳಿಗ್ಗೆ 11 ಗಂಟೆಗೆ ಭಗವಾನ್ ಬುದ್ಧ ಅವರ ಜಯಂತಿಯನ್ನು ನಗರದ ಸರಕಾರಿ ಪದವಿ ಮಹಾವಿದ್ಯಾಲಯದಸಭಾಂಗಣದಲ್ಲಿ ಆಚರಿಸಲು ನಿರ್ಧರಿಸಲಾಗಿದ್ದು, ಅವಶ್ಯಕ ಸಿದ್ಧತೆ ಮಾಡಿಕೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಅಂದು ವೇದಿಕೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು,ಶಿಷ್ಟಾಚಾರದಂತೆ ಅತಿಥಿ ಗಣ್ಯರನ್ನು ಆಹ್ವಾನಿಸಲು, ವೇದಿಕೆ, ಆಹ್ವಾನ ಪತ್ರಿಕೆ, ವೇದಿಕೆ ಸಿದ್ದತೆ ಮಾಡಿಕೊಳ್ಳುವಂತೆ ಹಾಗೂ ನುರಿತ ಉಪನ್ಯಾಸಕರನ್ನು ಆಹ್ವಾನಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಮೆರವಣಿಗೆಕುರಿತುಮುಂಚಿತವಾಗಿ ತಿಳಿಸಬೇಕು.

ಜಿಲ್ಲಾ ,ಗ್ರಾಮ ಪಂಚಾಯತ್, ತಾಲೂಕ ಮಟ್ಟ ಹಾಗೂ ಶಾಲಾ,ಕಾಲೇಜು,ಕಚೇರಿಯಲ್ಲಿ ಜಯಂತಿ ಆಚರಣೆಗೆ ಕ್ರಮ ಕೈಗೊಳ್ಳಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

.ಈ ಬಾರಿ ಕಾರ್ಯಕ್ರಮವು ಶಿಸ್ತುಬದ್ದವಾಗಿ ನಡೆಯಬೇಕೆಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

.ವಿವಿಧ ಇಲಾಖೆಯ ಅಧಿಕಾರಿಗಳು ಕಡ್ಡಾಯವಾಗಿ ಕಾರ್ಯಕ್ರಮದಲ್ಲಿ ಹಾಜರಿರಬೇಕು.ಜಯಂತಿಯಂದು ಸೂಕ್ತ ಪೋಲಿಸ್ ಬಂದೋಬಸ್ತ್, ಮಾಡಲು ಅವರು ಸೂಚಿಸಿದರು.

ಜಿ.ಪಂ.ಮುಖ್ಯಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ,ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಉತ್ತರಾದೇವಿ ಮಠಪತಿ

ರಾಹುಲ್ ಹುಲೆಮನಿ, ಮಲ್ಲಪ್ಪ ಹುಸೇನಪ್ಪ,ನೀಲಕಂಠಬಡಿಗೇರ್,ಬಂತೆ ಮೆತ್ತಪಾಲ್, ನಾಗಣ್ಣ ಕಲ್ಲ ದೇವನಹಳ್ಳಿ,ರಾಮಲಿಂಗಪ್ಪ, ಮಹಾದೇವಪ್ಪ ಬಿಜಾಸ್ಪುರ್, ಗಿರೀಶ್ ಚಟ್ಟರ್ಕರ್ ಹಾಗೂ

ಸಮಾಜದ ಮುಖಂಡರು, ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಪರಿಶಿಷ್ಟ ಜಾತಿಗಳ ಒಳಮಿಸಲಾತಿಗಾಗಿ ರಾಜ್ಯ ಸರ್ಕಾರ ಜನಗಣತಿ ಸಮಿಕ್ಷೇದಾರರು ನಿಮ್ಮ

# ಮನೆಗೆ ಬಂದಾಗ ಕ್ರಮ ಸಂಖ್ಯೆ: 61 ಮಾದಿಗ ಎಂದೇ ನೋಂದಾಯಿಸಲು : ವಾಡೇಕರ ಮನವಿ.

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.08 ಜಿಲ್ಲಾ ಮಾದಿಗ ಸಮಾಜ ಕಲಬುರಗಿಯ ಮುಖಂಡರಾದ ಶ್ರೀ ರಾಜು ಆರ್. ವಾಡೇಕರ್ ರವರು ಇಂದು ಕರೆದ ಪತ್ರಿಕಾಗೋಷ್ಠಿಗೆ ಮಾತನಾಡಿದರು




ಪರಿಶಿಷ್ಟಜಾತಿಒಳಮಿಸಲಾತಿಗಾಗಿ ಸುಮಾರು 30 ವರ್ಷಗಳಿಂದ ನಮ್ಮ ಮಾದಿಗ ಸಮಾಜದ ಸಂಘಟನೆಗಳುಮತ್ತುಸಮುದಾಯ ನಿರಂತರವಾಗಿ ವಿವಿಧ ರೀತಿಯ ಹೋರಾಟಗಳಾದ ಅರೆ ಬೆತ್ತಲೆ, ಸತ್ಯಾಗ್ರಹ, ಪ್ರತಿಭಟನೆ. ತಮಟೆ ಚಳುವಳಿ. ಇವ್ವ ಹೋರಾಟಗಳ ಫಲವಾಗಿ ಕೇಂದ್ರ ಸರ್ಕಾರ ನುಡಿದಂತೆ ನಡೆದಿದ್ದು, ಅಲ್ಲದೇ ಆಗಷ್ಟ–012024ರಂದುಸುಪ್ರೀಮ್ ಕೋರ್ಟ 7 ನ್ಯಾಯ ಮೂರ್ತಿಗಳ ಸಂವಿಧಾನ ಪೀಠವು ಆಯಾ ರಾಜ್ಯಗಳು ಒಳಮೀಸಲಾತಿ ನೀಡಬಹುದೆಂದು ನಿರ್ದೇಶನ ನೀಡಿದ ನಂತರ ಗೌರವಾನ್ವಿತ ನಿವೃತ್ತಿ ನ್ಯಾಯಮೂರ್ತಿ ಎಚ್. ಎನ್. ನಾಗಮೋಹನದಾಸ ಏಕ ಸದಸ್ಯ ಪಿಬ್ಬ ವಿಚಾರಣಾ ಆಯೋಗವು ರಾಜ್ಯ ಸರ್ಕಾರ ರಚಿಸಲಾಗಿದ್ದು,ಆಯೋಗದಿಂದ ಪರಿಶಿಷ್ಟ ಜಾತಿಗಳ ವಿವಿಧ ಅಂಶಗಳ ಬಗ್ಗೆ ದತ್ತಾಂಶಗಳನ್ನು ಸಂಗ್ರಹಿಸಲು ಸಮೀಕ್ಷೆ ನೀಡಲು ತಿರ್ಮಾನಿಸಿದ್ದು, ಸ್ವಾಗತಿಸುತ್ತೇವೆ. ಅಲ್ಲದೇ ಬಹುದಿನಗಳ ಕನಸು ನನಸಾಗುವ ನಿಟ್ಟಿನಲ್ಲಿ ರಾಜ್ಯದ ಜಿಲ್ಲಾ ಮಟ್ಟದ ನಗರ ಮತ್ತು ತಾಲೂಕಾ ಮಟ್ಟದ ಸಮನ್ವಯ ಸಮಿತಿಗಳನ್ನು ರಚಿಸಿ ಸರ್ಕಾರ ಆದೇಶ ನೀಡಿದ್ದು, ಈ ಸಮೀಕ್ಷೆಯ ಉದ್ದೇಶವು ಪರಿಶಿಷ್ಟ ಜಾತಿ ಪಟ್ಟಿಗೆ

ಸೇರಿರುವ ಜನರಿಗೆ ಸಾಮಾಜೀಕ, ಆರ್ಥಿಕ, ಪ್ರಾತಿನಿಧ್ಯತೆ ಇತ್ಯಾದಿ ಸ್ಥಿತಿಗಳ ಬಗ್ಗೆ ವೈಜ್ಞಾನಿಕವಾಗಿ ಮತ್ತು ವಾಸ್ತವಿಕ ಮಾಹಿತಿ ಪಡೆದುಕೊಳ್ಳುವ ಉದ್ದೇಶವಾಗಿದ್ದು.

ಇದು ನಮ್ಮ ಮಾದಿಗರ ಮನೆ: ಸಮೀಕ್ಷೆದಾರರು ನಿಮ್ಮ ಮನೆಗೆ ಆಗಮಿಸಿದಾಗ ತಮ್ಮ ಕುಟುಂಬದ ಎಲ್ಲಾ ಸದಸ್ಯರು ಮಾದಿಗ ಸಮುದಾಯಕ್ಕೆ ಸೇರಿದವರು ಕ್ರಮ ಸಂಖ್ಯೆ: 61 ರಲ್ಲಿ ಮಾದಿಗ ಎಂದೇ ನೋಂದಾಯಿಸುವ ಮೂಲಕ ಬಹುದಿನಗಳ ಕನಸು ಪರಿಶಿಷ್ಟ ಜಾತಿಗಳಒಳಮೀಸಲಾತಿಜಾರಿಗೆಗಾಗಿ ಎಲ್ಲರೂ ಸಹಕರಿಸಬೇಕು. ದಿನಾಂಕ: 05/05/2025ರಿಂದ17/05/2025 ರವರೆಗೆ ಮನೆ ಮನೆಗೆ ಭೇಟಿ ವಿಶೇಷ ಶಿಬಿರಗಳ ಸಮೀಕ್ಷೆ ದಿನಾಂಕ: 19/05/2025 ರಿಂದ 21/05/2025 ರ ಒಳಗೆ ಹಾಗು ಸ್ವಯಂ ಘೋಷನೆ ಆನ್‌ಲೈನ್ ಮೂಲಕ ದಿನಾಂಕ:19/05/2025 ರಿಂದ 23/05/2025 ರವರೆಗೆ ಕಡ್ಡಾಯವಾಗಿ ಜಾತಿಗಣತಿಗಾರರು ಸಮೀಕ್ಷೆದಾರರು ತಮ್ಮ ತಮ್ಮ ಬಡಾವಣೆಗೆ, ಗ್ರಾಮಗಳಿಗೆ ಆಗಮಿಸಲಿದ್ದು,ನಾನು ಈ ಮಾಧ್ಯಮ ಮೂಲಕವಾಗಿ ಎಲ್ಲಾ ನಮ್ಮ ಮಾದಿಗ ಸಮುದಾಯದ ಜನರಲ್ಲಿ ಮನವಿ ಮಾಡಿಕೊಳ್ಳುವುದೇನೆಂದರೆ, ತಮ್ಮ ತಮ್ಮ ಕುಟುಂಬದ ಎಲ್ಲಾ ಸದಸ್ಯರುಗಳು ಕ್ರಮ ಸಂಖ್ಯೆ: 61 ರಲ್ಲಿ ಮಾದಿಗ ಎಂದೇ ನೋಂದಾಯಿಸುವ ಮೂಲಕ ಪರಿಶಿಷ್ಟ ಜಾತಿ ಒಳಮೀಸಲಾತಿ ಜಾರಿಗೆಗಾಗಿ ಸಹಕರಿಸಬೇಕಾಗಿ ವಿನಂತಿಸಿಕೊಳ್ಳುತ್ತೇನೆ.ರಾಜುಆರ್. ವಾಡೇಕರ. ಅವರು ತಿಳಿಸಿದರು. ಮುಖಂಡರು ಮಾದಿಗ ಸಮಾಜ ಕಲಬುರಗಿ. ಈ ಸಂದರ್ಭದಲ್ಲಿ : ರಮೇಶ್ ವಡೆಕರ್ ರಂಜಿತ್ ಮೂಲಿಮನಿ ಮಂಜುನಾಥ್ ಶ್ರೀನಿವಾಸ್ ದಶರಥ ಇತರರೂ ಉಪಸ್ಥಿತರಿದ್ದರು.

# ಡಿಪ್ಲೋಮಾ ಕೋರ್ಸ್ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 08–ಕೈಮಗ್ಗ ಮತ್ತು ಜವಳಿ ತಂತ್ರಜ್ಞಾನದಲ್ಲಿ 2025–26ನೇ ಸಾಲಿಗೆ 03 ವರ್ಷಗಳ ಡಿಪ್ಲೋಮಾ ಕೋರ್ಸ ಪ್ರವೇಶಕ್ಕಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಕಲಿಕೆಗಾಗಿ 39 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ವ್ಯಾಸಂಗದ ಸಮಯದಲ್ಲಿ ಮಾರ್ಗಸೂಚಿಯ ಪ್ರಕಾರ ಪ್ರತಿ ವಿದ್ಯಾರ್ಥಿಗೆ ಪ್ರತಿ ತಿಂಗಳು 2,500 ರೂ.ಗಳಂತೆ ಶಿಷ್ಯವೇತನ ನೀಡಲಾಗುವುದು ಹಾಗೂ ಪುರುಷ ಅಭ್ಯರ್ಥಿಗಳಿಗೆ ವಸತಿ ನಿಲಯದ ಸೌಲಭ್ಯವನ್ನು ಹಣ ಪಾವತಿಸುವ ಆಧಾರದ ಮೇಲೆ ಕಲ್ಪಿಸಲಾಗುವುದು.

ಎಸ್.ಎಸ್.ಎಲ್.ಸಿ. ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀಷ್‌ನ್ನು ಒಂದು ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರುವ ಅಭ್ಯರ್ಥಿಗಳು 2025ರ ಜುಲೈ 01ಕ್ಕೆ ಅನ್ವಯಿಸುವಂತೆ ಸಾಮಾನ್ಯ ವರ್ಗದ ಅಭ್ಯರ್ಥಿಗಳು 15 ರಿಂದ 23ರ ವಯೋಮಿತಿಯಲ್ಲಿರಬೇಕು. ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು 15 ರಿಂದ 25ರ ವಯೋಮಿತಿಯಲ್ಲಿರಬೇಕು. ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಕ್ರೋಢೀಕೃತ ಅಂಶಗಳು ಮೆರಿಟ್ ಲೆಕ್ಕಾಚಾರಕ್ಕೆ ಆಧಾರವಾಗಿರುತ್ತವೆ.

ಕೋರ್ಸ ವಿವರ: ಕರ್ನಾಟಕದ ಗದದ–ಬೆಟಗೇರಿಯ ಸಂಸ್ಥೆಯಲ್ಲಿ 22 ಅಭ್ಯರ್ಥಿಗಳು, ತಮಿಳುನಾಡಿನ ಸೇಲಂ ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ 12 ಅಭ್ಯರ್ಥಿಗಳು, ಆಂಧ್ರಪ್ರದೇಶದ ನೆಲ್ಲೂರು ಜಿಲ್ಲೆಯ ವೆಂಕಟಗಿರಿಯ ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ 03 ಅಭ್ಯರ್ಥಿಗಳು, ಕೇರಳದ ಕಣ್ಣೂರು ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆಯಲ್ಲಿ 02 ಅಭ್ಯರ್ಥಿಗಳು ಸೇರಿದಂತೆ ಒಟ್ಟು 39 ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು.

ಆಸಕ್ತರು ಅರ್ಜಿಯನ್ನು ಆನ್‌ಲೈನ್‌ನಲ್ಲಿ ಡೌನ್‌ಲೊಡ್ ಮಾಡಿಕೊಳ್ಳಲು ಲಿಂಕ್ https://khtigadag.ac.in/Admissionform.pdf ಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ ದಾಖಲಾತಿಗಳೊಂದಿಗೆ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ–ಬೆಟಗೇರಿ–582102ಗೆ ಜೂನ್ 15ರೊಳಗಾಗಿ ಸಲ್ಲಿಸಬಹುದಾಗಿದೆ.

ಹೆಚ್ಚಿನಮಾಹಿತಿಗಾಗಿಅಥವಾಅರ್ಜಿ ಫಾರಂಗಳಿಗಾಗಿ ಪ್ರಾಂಶುಪಾಲರು, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ನರಸಾಪೂರ, ಗದಗ–ಬೆಟಗೇರಿ ಮೊಬೈಲ್ ಸಂಖ್ಯೆ:9449162822 ಅಥವಾ ಸಹಾಯಕ ನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾ ಪಂಚಾಯತ್, ರಾಯಚೂರು ದೂರವಾಣಿ ಸಂಖ್ಯೆ: 08532 233429, ಮೊ.ಸಂ:9964001488ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ : ಅತಿಥಿ ಉಪನ್ಯಾಸಕರು, ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮೇ 08, : 2025–26ನೇ ಸಾಲಿನಲ್ಲಿ ಯಾದಗಿರಿ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಉಪನ್ಯಾಸಕರು, ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರು, ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಭಾಗ್ಯಶ್ರೀ ಕುಂಬಾರ ಅವರು ತಿಳಿಸಿದ್ದಾರೆ.

ಬೆಂಗಳೂರು ಅಲ್ಪಸಂಖ್ಯಾತರ ನಿರ್ದೇಶನಾಲಯ ನಿರ್ದೇಶಕರ ಪತ್ರದನ್ವಯ 2025–26ನೇ ಸಾಲಿನ ಯಾದಗಿರಿ ಜಿಲ್ಲೆಯ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜು ಮತ್ತು ಮೌಲಾನಾ ಆಜಾದ್ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರು ಹಾಗೂ ಡಾ.ಎ.ಪಿ.ಜೆ. ಅಬ್ದುಲ್ ಕಲಾಂ ವಸತಿ ಶಾಲೆ, ಮೊರಾರ್ಜಿ ದೇಸಾಯಿ ವಸತಿ ಶಾಲೆ, ಮೌಲಾನಾ ಆಜಾದ್ ಮಾದರಿ ಶಾಲೆಯಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರು, ಶಿಕ್ಷಕರ ಹುದ್ದೆಗಳಿಗೆ ಅರ್ಜಿ ಆಹ್ವಾನಿಸಿದೆ. TET, NET ಆದ ಅಭ್ಯರ್ಥಿಗಳಿಗೆ ಪ್ರತಿನಿಧ್ಯ ನೀಡಲಾಗುವುದು, ಇಚ್ಛಿಸುವ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಗಳನ್ನು ವೆಬ್ ಸೈಟ್ dom.karnataka.gov.in ನಲ್ಲಿ ಜಿಲ್ಲಾ ಕಛೇರಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಲ್ಲಿ ಅರ್ಜಿ ಪಡೆದು ಭರ್ತಿ ಮಾಡಿ ಅಗತ್ಯ ದಾಖಲಾತಿಗಳನ್ನು ಲಗತ್ತಿಸಿ, ಸಂಬಂಧಪಟ್ಟ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಛೇರಿ ಸಮಯದಲ್ಲಿ 2025ರ ಮೇ 19ರ ಒಳಗೆ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ: ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣಾಧಿಕಾರಿಗಳ ಕಾರ್ಯಾಲಯ, ಕೋಠಡಿ ಸಂಖ್ಯೆ ಸಿ–7, ಮೊದಲನೇ ಮಹಡಿ, ಜಿಲ್ಲಾ ಕಛೇರಿಗಳ ಸಂಕೀರ್ಣ (ಮಿನಿ ವಿಧಾನ ಸೌಧ) ಚಿತ್ತಾಪುರ ರಸ್ತೆ, ಯಾದಗಿರಿ ಕಛೇರಿ ದೂ.ಸಂ.08473253235, ಶಹಾಪುರ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ದೂ.ಸಂ.8095971486, ಸುರಪುರ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ದೂ.ಸಂ.7795592068, ಯಾದಗಿರಿ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ದೂ.ಸಂ.9731090143ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿ.ಟಿ.ಟಿ.ಸಿ.: ವಿವಿಧ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.08. –ಕಲಬುರಗಿ ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರದಲ್ಲಿ 2025–26ನೇ ಸಾಲಿಗೆ ಡಿಪ್ಲೋಮಾ ಇನ್ ಟೂಲ್ ಅಂಡ್ ಡೈ ಮೇಕಿಂಗ್, ಡಿಪ್ಲೋಮಾ ಇನ್ ಪ್ರಿಶಿಷನ್ ಮ್ಯಾನುಪ್ಯಾಕ್ಚರಿಂಗ್, ಡಿಪ್ಲೋಮಾ ಇನ್ ಮೆಕಾಟ್ರಾನಿಕ್ಸ್ ಮತ್ತು ಡಿಪ್ಲೋಮಾ ಇನ್ ಇಲೆಕ್ಟ್ರಿಕಲ್ ಅಂಡ್ ಇಲೆಕ್ಟ್ರಾನಿಕ್ಸ್ ಇಂಜನಿಯರಿಂಗ್ ತರಬೇತಿಗಳಿಗೆ ಪ್ರವೇಶ ಪಡೆಯಲು ಎಸ್.ಎಸ್.ಎಲ್.ಸಿ (ಕರ್ನಾಟಕ ಪ್ರೌಢ ಶಿಕ್ಷಣ ಮಂಡಳಿ, ಸಿ.ಬಿ.ಎಸ್.ಸಿ, ಐ.ಸಿ.ಎಸ್.ಸಿ) ಪಾಸಾದ ಮತ್ತು ಪಿಯುಸಿ ಅನುತ್ತೀರ್ಣರಾದ (ಕಲೆ, ವಿಜ್ಞಾನ ಮತ್ತು ವಾಣಿಜ್ಯ ವಿಭಾಗ) ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಜಿ.ಟಿ.ಟಿ.ಸಿ. ಪ್ರಾಂಶುಪಾಲರು ತಿಳಿಸಿದ್ದಾರೆ.

ಅದೇರೀತಿ ವಿಜ್ಞಾನ ವಿಭಾಗದಿಂದ ಪಿಯುಸಿ ಮತ್ತು ಐ.ಟಿ.ಐ. ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಲ್ಯಾಟ್ರಲ್ ಎಂಟ್ರಿ ಮುಖಾಂತರ ಎರಡನೇ ವರ್ಷಕ್ಕೆ ಪ್ರವೇಶ ಪಡೆ–ಯುತ್ತಾರೆ. ಕೋರ್ಸ್‌ಗಳ ತರಬೇತಿ ಅವಧಿಯು 3+1 ವರ್ಷ ಇದ್ದು, ಈ ಮೂರು ವರ್ಷಗಳಿಗೆ ಎಲ್ಲಾ ವಿದ್ಯಾರ್ಥಿಗಳಿಗೆ ಪ್ರತಿ ವರ್ಷ ವಿದ್ಯಾರ್ಥಿ ವೇತನ ದೊರೆಯುತ್ತದೆ. ಸರಕಾರಿ ಉಪಕರಣಾಗಾರ ಮತ್ತು ತರಬೇತಿ ಕಲಬುರಗಿ ಕೇಂದ್ರದಲ್ಲಿ ತರಬೇತಿ ನೀಡಲಾಗುತ್ತದೆ. ಈ ತರಬೇತಿ ಪೂರ್ಣಗೊಳಿಸಿರುವ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಬಿ.ಇ ಮಾಡಲು ಅರ್ಹರಾಗಿರುತ್ತಾರೆ.

ಈಗಾಗಲೇ ಈ ಕೋರ್ಸ್‌ಗಳಿಗೆ ಪ್ರವೇಶಾತಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಮೊದಲು ಬಂದವರಿಗೆ ಮೊದಲ ಆದ್ಯತೆ” ನೀಡಲಾಗುತದೆ. ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಸಂತ್ರಾಸವಾಡಿ ಎಂ.ಜಿ. ರೋಡದಲ್ಲಿರುವ ಜಿ.ಟಿ.ಟಿ.ಸಿ ಕಲಬುರಗಿ ಕೇಂದ್ರಕ್ಕೆ ಸಂಪರ್ಕಿಸಲು ಅಥವಾ ಮೊಬೈಲ್ ಸಂಖ್ಯೆ 8431004091, 8296181289, 6360476824 ಗಳಿಗೆ, ಕಚೇರಿ ದೂರವಾಣಿ ಸಂಖ್ಯೆ 08472–295163.ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಸೇಡಂ: ವಿವಿಧ ಯೋಜನೆಗಳಡಿ ವೈಯಕ್ತಿಕ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.08 –ಸೇಡಂ ಪುರಸಭೆಯಿಂದ 2024–25ನೇ ಸಾಲಿನ ಎಸ್.ಎಫ್.ಸಿ.ಶೇ.7.25, ಶೇ. 5 ಮತ್ತು ಪುರಸಭೆಯ ನಿಧಿಯ ಶೇ. 24.10, ಶೇ. 7.25 ಮತ್ತು ಶೇ. 5 ರ ಅನುದಾನದಡಿ ಕೆಳಕಂಡ ವಿವಿಧ ವೈಯಕ್ತಿಕ ಸೌಲಭ್ಯಗಳನ್ನು ನೀಡಲು ಸೇಡಂ ಪಟ್ಟಣದ ವ್ಯಾಪ್ತಿಯ ಅರ್ಹ ಸಾರ್ವಜನಿಕರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ ಎಂದು ಸೇಡಂ ಪುರಸಭೆಯ ಮುಖ್ಯಾಧಿಕಾರಿಗಳು ತಿಳಿಸಿದ್ದಾರೆ.

ಪರಿಶಿಷ್ಟ ಜಾತಿಯ ಪಿ.ಯು.ಸಿ. ಮತ್ತು ಪದವಿ ಓದುತ್ತಿರುವ ವಿದ್ಯಾರ್ಥಿಗಳಿಗೆ ಸಹಾಯಧನ, ಪ.ಜಾತಿಯ ವೈದ್ಯಕೀಯ/ ಎಂ.ಬಿ.ಬಿ.ಎಸ್., ಬಿ.ಇ. ಓದುತ್ತಿರುವ ವಿದ್ಯಾರ್ಥಿಗಳಿಗೆ (ಸರ್ಕಾರಿ ಕೋಟಾದಡಿ ಸೀಟು ಪಡೆದಿರುವ ವಿದ್ಯಾರ್ಥಿಗಳಿಗೆ) ಸಹಾಯಧನ ನೀಡುವುದು ಹಾಗೂ ಪರಿಶಿಷ್ಟ ಜಾತಿ/ಪ.ಪಂಗಡದ ಮಹಿಳೆಯರಿಗಾಗಿ ಕೌಶಲ್ಯ ಅಭಿವೃದ್ಧಿ ತರಬೇತಿ (ಬ್ಯೂಟಿ ಪಾರ್ಲರ್), ಪರಿಶಿಷ್ಟ ಜಾತಿ/ಪ.ಪಂಗಡದ ಮಹಿಳೆಯರಿಗಾಗಿ ಕೌಶಲ್ಯ ಅಭಿವೃದ್ಧಿ ತರಬೇತಿ (ಬ್ಲೌಸ್ ಹ್ಯಾಂಡ್ವರ್ಕ್), ಇತರೆ ಹಿಂದುಗಳ ವರ್ಗದ ಪಿ.ಎಚ್.ಡಿ. . ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಹಾಯಧನ ಪಡೆಯಲು ಹಾಗೂ ಅಂಗವಿಕಲರಿಗೆ ಏಕ ಕಂತಿನ ಜೀವ ವಿಮೆ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಸಬಹುದಾಗಿದೆ.

ಆಸಕ್ತಿಯುಳ್ಳ ಅರ್ಹ ಫಲಾನುಭವಿಗಳು ಭರ್ತಿ ಮಾಡಿದ ಅರ್ಜಿಯೊಂದಿಗೆ ಅವಶ್ಯಕ ದಾಖಲೆಗಳನ್ನು ಲಗತ್ತಿಸಿ 2025ರ ಮೇ 23 ರೊಳಗಾಗಿ ಸೇಡಂ ಪುರಸಭೆ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು. ಅಪೂರ್ಣ ಅರ್ಜಿ ಹಾಗೂ ದಾಖಲೆ ಸಲ್ಲಿಸಿದ್ದಲ್ಲಿ ಅರ್ಜಿಯನ್ನು ತಿರಸ್ಕರಿಸಲಾಗುತ್ತದೆ.

ಅರ್ಹತೆ ಹಾಗೂ ಅರ್ಜಿಯೊಂದಿಗೆ ಸಲ್ಲಿಸಬೇಕಾದ ದಾಖಲೆಗಳು ಹಾಗೂ ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಸೇಡಂ ಪುರಸಭೆ ಕಚೇರಿಯನ್ನು ಸಂಪರ್ಕಿಸಲು ಕೋರಲಾಗಿದೆ.

# ತೆರವಾದ ಗ್ರಾಪಂ ಸದಸ್ಯ ಸ್ಥಾನಕ್ಕೆ ಉಪ ಚುನಾವಣೆ: ಜಿಲ್ಲಾ ಚುನಾವಣಾಧಿಕಾರಿ ನಿತೀಶ್ ಕೆ.

ಮಲ್ಲಮ್ಮ ನುಡಿ ವಾರ್ತೆ



ರಾಯಚೂರು ಮೇ 08– ಜಿಲ್ಲೆಯಲ್ಲಿ ಈಗಾಗಲೇ ವಿವಿಧ ಕಾರಣಗಳಿಂದ ತೆರವಾದ ಗ್ರಾಮ ಪಂಚಾಯತ್ ಸದಸ್ಯ ಸ್ಥಾನಗಳಿಗೆ ರಾಜ್ಯ ಚುನಾವಣಾ ಆಯೋಗದ ನಿರ್ದೇಶನದಂತೆ ಉಪ ಚುನಾವಣೆ ನಡೆಸಲು ಚುನಾವಣಾ ವೇಳಾ ಪಟ್ಟಿಯನ್ನು ಹೊರಡಿಸಲಾಗಿದೆ ಎಂದು ಜಿಲ್ಲಾ ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.

ಮಾದರಿ ನೀತಿ ಸಂಹಿತೆಯು ಚುನಾವಣೆ ನಡೆಯುವ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಸೀಮಿತವಾಗಿ ಜಾರಿಯಲ್ಲಿರುತ್ತದೆ. ಜಿಲ್ಲೆಯ ರಾಯಚೂರು, ಮಾನವಿ, ಸಿಂಧನೂರು, ಮಸ್ಕಿ ಹಾಗೂ ಲಿಂಗಸೂಗೂರು ತಾಲ್ಲೂಕಿನ ಗ್ರಾಮ ಪಂಚಾಯತಿಗಳಲ್ಲಿ ವಿವಿಧ ಕಾರಣಗಳಿಂದ ತೆರವಾದ ಸದಸ್ಯ ಸ್ಥಾನಕ್ಕೆ ಉಪಚುನಾವಣೆ ನಡೆಸಲು ನಿರ್ಧಾರಿಸಲಾಗಿದೆ.

ಉಪ ಚುನಾವಣೆ ನಡೆಯುವ ಕ್ಷೇತ್ರಗಳು; ರಾಯಚೂರು ತಾಲೂಕಿನ ತಲಮಾರಿ ಗ್ರಾಮ ಪಂಚಾಯತಿ ಹಾಗೂ ಜಂಬಲದಿನ್ನಿ ಗ್ರಾಮ ಪಂಚಾಯತಿಯ ಪು ಚ್ಚ ಲ ದಿ ನ್ನಿ ಕ್ಷೇತ್ರ., ಮಾನವಿ ತಾಲೂಕಿನ ಸಂಗಾಪೂರು ಗ್ರಾಮ ಪಂಚಾಯತಿಯ ಆರ್.ಜಿಕ್ಯಾಂಪ್–3, ಲಿಂಗಸೂಗೂರು ತಾಲೂಕಿನ ದೇವರಭೂಪೂರ–5 ಗ್ರಾಮ ಪಂಚಾಯತಿಯ ಐದಭಾವಿ–5 ಹಾಗೂ ರೋಡಲಬಂಡಾ (ಯು. ಕೆ.ಪಿ) ಗ್ರಾಮ ಪಂಚಾಯತಿಯ ತೋರಲಬೆಂಚಿ–01, ಸಿಂಧನೂರು ತಾಲೂಕಿನ ವಿರುಪಾಪುರ–04, ಮಸ್ಕಿ ತಾಲೂಕಿನ ಅಮೀನಗಡ ಗ್ರಾಮ ಪಂಚಾಯಿತಿಯ ಕೊಟೆಕಲ್ ಕ್ಷೇತ್ರಗಳಲ್ಲಿ ಉಪ ಚುನಾವಣೆ ನಡೆಯಲಿದೆ.

ಮೇ.08ರಿಂದ ಮೇ.28ರವರೆಗೆ ನೀತಿ ಸಂಹಿತೆ ಜಾರಿ: ವಿವಿಧ ಕಾರಣಗಳಿಂದ ತೆರವಾದ ಗ್ರಾಮ ಪಂಚಾಯತ್ ಸದಸ್ಯ ಸ್ಥಾನಕ್ಕೆ ಉಪ ಚುನಾವಣೆ ನಡೆಸಲು ಚುನಾವಣಾ ವೇಳಾ ಪಟ್ಟಿಯನ್ನು ಪ್ರಕಟಿಸಲಾಗಿದ್ದು, ಮೇ.08ರಿಂದ ಮೇ.28ರವರೆಗೆ ಮಾದರಿ ನೀತಿ ಸಂಹಿತೆಯು ಜಾರಿಯಲ್ಲಿದ್ದು, ನಾಮಪತ್ರಗಳನ್ನು ಸಲ್ಲಿಸಲು ಮೇ.14 ಕೊನೆಯ ದಿನಾಂಕವಾಗಿದೆ., ಮೇ.15ರಂದು ನಾಮಪತ್ರಗಳನ್ನು ಪರಿಶೀಲನೆ ಮಾಡಲಾಗುವುದು., ಮೇ.17ರಂದು ಉಮೇದುವಾರಿಕೆಗಳನ್ನು ಹಿಂತೆಗೆದುಕೊಳ್ಳುವ ಕೊನೆಯ ದಿನ., ಮೇ.25ರ ಬೆಳಿಗ್ಗೆ 7ರಿಂದ ಸಾಯಂಕಾಲ 5 ಗಂಟೆಗೆಯವರೆಗೆ ಮತದಾನ, ಅವಶ್ಯವಿದ್ದರೆ ಮೇ.27ರಂದು ಮರು ಮತದಾನ ನಡೆಯಲಿದೆ.

ಮೇ.28ರ ಬೆಳಿಗ್ಗೆ 8 ಗಂಟೆಯಿಂದ ತಾಲೂಕು ಕೇಂದ್ರಗಳಲ್ಲಿ ಮತ ಎಣಿಕೆ ಪ್ರಕ್ರಿಯೆ ನಡೆಸಲಾಗುವುದು. ತಾಲ್ಲೂಕು ಮಟ್ಟದಲ್ಲಿ ಅವಶ್ಯವಿರುವ ತಂಡಗಳ ರಚನೆ ಮಾಡಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿದ್ದು, ಚುನಾವಣೆಯು ಶಾಂತಿಯುತವಾಗಿ ಜರುಗಿಸುವ ನಿಟ್ಟಿನಲ್ಲಿ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲಾಗುವುದು. ಗ್ರಾಮ ಪಂಚಾಯತಿಗಳ ಉಪಚುನಾವಣೆಯಲ್ಲಿ ಬಾಲೆಟ್ ಪೇಪರ್ ಮೂಲಕ ಮತದಾನ ನಡೆಯಲಿದೆ ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬೇವಿನಹಳ್ಳಿ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ

# ಕಾಲೇಜು : ಪ್ರಥಮ ಪಿ.ಯು.ಸಿ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳ ಆಯ್ಕೆಗೆ ಅರ್ಜಿ ಆಹ್ವಾನ

ಯಾದಗಿರಿ:ಮೇ08–ಯಾದಗಿರಿ ಜಿಲ್ಲೆಯ ಶಹಾಪೂರ ತಾಲ್ಲೂಕಿನ ಬೇವಿನಹಳ್ಳಿ 2025–26ನೇ ಸಾಲಿಗೆ ಮೊರಾರ್ಜಿ ದೇಸಾಯಿ ವಸತಿ ಶಾಲೆ ಮತ್ತು ಪದವಿ ಪೂರ್ವ ಕಾಲೇಜುದಲ್ಲಿ ಪ್ರಥಮ ಪಿ.ಯು.ಸಿ ವಿಜ್ಞಾನ ವಿಭಾಗದ ವಿದ್ಯಾರ್ಥಿಗಳ ಆಯ್ಕೆಗಾಗಿ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರಾದ ಚನ್ನಬಸಪ್ಪ ಅವರು ತಿಳಿಸಿದ್ದಾರೆ.

ಜಿಲ್ಲೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಪದವಿ ಪೂರ್ವ ಕಾಲೇಜು ಬೇವಿನಹಳ್ಳಿ ಕ್ರಾಸ್ ಇಲ್ಲಿನ ಪ್ರಥಮ ಪಿ.ಯು.ಸಿ ವಿಜ್ಞಾನ ವಿಭಾಗಕ್ಕೆ ಪಿ.ಸಿ.ಎಂ.ಬಿ ಒಟ್ಟು 80 ವಿದ್ಯಾರ್ಥಿಗಳಿಗೆ ಆಯ್ಕೆ ನಡೆಯಲಿದೆ. ಕ್ರೈಸ್ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಮೊದಲ ಆದ್ಯತೆ ನೀಡಿ ಎಸ್.ಎಸ್.ಎಲ್.ಸಿ ಪಾಸಾದ ಮೆರಿಟ್ ಮತ್ತು ಮೀಸಲಾತಿ ಅನ್ವಯ ವಿದ್ಯಾರ್ಥಿಗಳ ಅರ್ಜಿ ಆಹ್ವಾನಿಸಿದೆ. ಬೆಂಗಳೂರು ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ ಕಾರ್ಯನಿರ್ವಾಹಕ ನಿರ್ದೇಶಕರು ಅವರು ಸೂಚಿಸಿದೆ.

ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಪದವಿ ಪೂರ್ವ ಕಾಲೇಜು ಬೇವಿನಹಳ್ಳಿ ಕ್ರಾಸ್ ಇಲ್ಲಿ ಪ್ರಥಮ ಪಿ.ಯು.ಸಿ ವಿಜ್ಞಾನ ವಿಭಾಗಕ್ಕೆ ಪಿ.ಸಿ.ಎಂ.ಬಿ ವಿಷಯಕ್ಕೆ ಆಹ್ವಾನಿಸಲಾಗಿರುತ್ತದೆ. ವಿದ್ಯಾರ್ಥಿಗಳು ಅಗತ್ಯ ದಾಖಲಾತಿಗಳೊಂದಿಗೆ 2025ರ ಮೇ 17 ರಂದು ಸಂಜೆ 5 ಗಂಟೆಯ ವರೆಗೆ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಪದವಿ ಪೂರ್ವ ಕಾಲೇಜು ಬೇವಿನಹಳ್ಳಿ ಕ್ರಾಸ್‌ದಲ್ಲಿ ನೇರವಾಗಿ ಮುದ್ದಾಂ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಬೇವಿನಹಳ್ಳಿ ಕ್ರಾಸ್ ಮೊರಾರ್ಜಿ ದೇಸಾಯಿ ವಸತಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲರು ದೂ.ಸಂ.9901939936, ದ್ವಿತೀಯ ದರ್ಜೆ ಸಹಾಯಕರು ದೂ.ಸಂ.9972530390ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ 9 ರಂದು 6ನೇ ತರಗತಿಗೆ ಪ್ರತಿಷ್ಠಿತ ಶಾಲೆಗಳಿಗೆ ವಿದ್ಯಾರ್ಥಿಗಳು ಅರ್ಹ ಪರೀಕ್ಷೆಗೆ ಹಾಜರಾಗಲು ಸೂಚನೆ

ಯಾದಗಿರಿ : ಮೇ 08– 2025–26ನೇ ಸಾಲಿನ 6ನೇ ತರಗತಿಗೆ ಜಿಲ್ಲೆಯಲ್ಲಿ ಪ್ರತಿಷ್ಠಿತ ಶಾಲೆಗಳಿಗೆ 2025ರ ಮೇ 9 ರಂದು ನಡೆಯುವ ಅರ್ಹ ಪರೀಕ್ಷೆಗೆ ವಿದ್ಯಾರ್ಥಿಗಳು ಹಾಜರಾಗಬೇಕು ಎಂದು ಯಾದಗಿರಿ ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕರಾದ ಚನ್ನಬಸಪ್ಪ ಅವರು ತಿಳಿಸಿದ್ದಾರೆ.

6ನೇ ತರಗತಿಗೆ ಜಿಲ್ಲಾ ವ್ಯಾಪ್ತಿಯಲ್ಲಿನ ಪ್ರತಿಷ್ಠಿತ ಶಾಲೆಗಳಿಗೆ ಪರಿಶಿಷ್ಟ ಜಾತಿ ವಿದ್ಯಾರ್ಥಿಗಳಿಗೆ ಅರ್ಹ ಪರೀಕ್ಷೆ ಮೂಲಕ ಆಯ್ಕೆ ಮಾಡಲು ನಿರ್ದೇಶನವಿರುತ್ತದೆ. ಪ್ರತಿಷ್ಠಿತ ಶಾಲೆ ಯೋಜನೆಯಡಿ ಪರಿಶಿಷ್ಟ ಜಾತಿಯ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವ ಅರ್ಹತಾ ಪರೀಕ್ಷೆಗೆ 2025ರ ಏಪ್ರಿಲ್ 15 ರಿಂದ ಮೇ 3ರ ವರೆಗೆ ಆನ್‌ಲೈನ್ ಮುಖಾಂತರ ನೊಂದಣಿ ಮಾಡಿಕೊಳ್ಳಲು ಸೂಚಿಸಿದೆ. 2025–26ನೇ ಸಾಲಿಗೆ ಪ್ರತಿಷ್ಠಿತ ಶಾಲೆ ಯೋಜನೆಯಡಿ ಪರಿಶಿಷ್ಟ ಜಾತಿಯ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಆಯ್ಕೆ ಮಾಡುವ ಅರ್ಹತಾ ಪರೀಕ್ಷೆಗೆ 2025ರ ಮೇ 9 ರಂದು ಬೆಳಿಗ್ಗೆ 10.30 ರಿಂದ ಮಧ್ಯಾಹ್ನ 1 ಗಂಟೆ–ಯ ವರೆಗೆ ಶ್ರೀ ಲಿಂಗೇರಿ ಕೋನಪ್ಪ ಆರ್.ನಾಡಗೌಡ (ನ್ಯೂ ಕನ್ನಡ) ಪ್ರೌಢ ಶಾಲೆ ಕನಕನಗರ ಯಾದಗಿರಿ ಇಲ್ಲಿ ಪರೀಕ್ಷೆ ನಡೆಸಲಾಗುತ್ತಿದ್ದು, ಸದರಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ದಾಖಲಾತಿಗಳು ಸಂಬಂಧಪಟ್ಟ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಯಾದಗಿರಿ, ಶಹಾಪೂರ, ಸುರಪುರ ಸಲ್ಲಿಸದೇ ಇರುವವರು ದಾಖಲಾತಿಗಳನ್ನು ಸಂಬಂಧಪಟ್ಟ ಸಹಾಯಕ ನಿರ್ದೇಶಕರು ಸಮಾಜ ಕಲ್ಯಾಣ ಇಲಾಖೆ ಯಾದಗಿರಿ, ಶಹಾಪೂರ, ಸುರಪುರ ಇಲ್ಲಿಗೆ ಸಲ್ಲಿಸಿ ಹಾಲ್ ಟಿಕೇಟ್ ಪಡೆದು ಪರೀಕ್ಷೆ ಹಾಜರಾಗಲು ಸೂಚಿಸಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕಲಬುರಗಿ ಸರ್ಕಾರಿ ಪಾಲಿಟೆಕ್ನಿಕ್:

# ವಿವಿಧ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.08–ಕಲಬುರಗಿ ಸರ್ಕಾರಿ ಪಾಲಿಟೆಕ್ನಿಕ್ (ನೋಡಲ್ ಕೇಂದ್ರದಲ್ಲಿ) 2025–26ನೇ ಶೈಕ್ಷಣಿಕ ಸಾಲಿಗೆ ವಿವಿಧ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಸರ್ಕಾರಿ ಪಾಲಿಟೆಕ್ನಿಕ್‌ನ ಪ್ರಾಚಾರ್ಯರು ತಿಳಿಸಿದ್ದಾರೆ.

ಪ್ರವೇಶದ ಅರ್ಜಿ ನಮೂನೆ ಹಾಗೂ ಮಾಹಿತಿ ಪುಸ್ತಕವನ್ನು ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ dtek.karnataka.gov.in ಅಥವಾ dtetech.karnataka.gov.in/kartechnical ವೆಬ್‌ಸೈಟ್ ಮೂಲಕ ಡೌನ್‌ಲೋಡ್ ಮಾಡಿಕೊಂಡು ಪುಸ್ತಕದಲ್ಲಿನ ಸೂಚನೆಗಳನ್ವಯ ಅಭ್ಯರ್ಥಿಗಳು ಅರ್ಜಿಗಳನ್ನು ಭರ್ತಿ ಮಾಡಿ ಅರ್ಜಿಯೊಂದಿಗೆ ಎಲ್ಲಾ ಶೈಕ್ಷಣಿಕ ದಾಖಲಾತಿಗಳ ಝೆರಾಕ್ಸ್ ಪ್ರತಿಗಳನ್ನು ಲಗತ್ತಿಸಿ ಖುದ್ದಾಗಿ 2025ರ ಮೇ 15 ರೊಳಗಾಗಿ ಪಾಲಿಟೆಕ್ನಿಕ ಕೇಂದ್ರಗಳಲ್ಲಿ ಸಿಬ್ಬಂದಿಗಳ ಸಹಕಾರದೊಂದಿಗೆ ಅರ್ಜಿಗಳನ್ನು ಸಲ್ಲಿಸಬೇಕು. ಅಭ್ಯರ್ಥಿಗಳು ತಮ್ಮ ಸ್ವ–ಇಚ್ಛೆಗನುಗುಣವಾಗಿ ಕೋರ್ಸ್‌ಗಳು ಆಯ್ಕೆ ಮಾಡಿ ಆಪಷನ್ ಎಂಟ್ರಿ (ಔಠಿಣಿಠಿ ಇಟಿಣಡಿಥಿ) ಮಾಡಬಹುದಾಗಿದೆ.

ಅರ್ಜಿಗಳನ್ನು ಸಲ್ಲಿಸುವಾಗ ಯಾವುದೇ ತರಹದ ಶುಲ್ಕವನ್ನು ಪಾವತಿಸಬೇಕಾಗಿರುವುದಿಲ್ಲ. ಅಭ್ಯರ್ಥಿಗಳು ಸೀಟುಗಳನ್ನು ಆಯ್ಕೆ ಮಾಡಿಕೊಂಡ ನಂತರ ಪ್ರವೇಶ ಪಡೆಯುವ ಸಮಯದಲ್ಲಿ ಅರ್ಜಿ ಶುಲ್ಕವನ್ನು ಸಹ ಪಾವತಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಪ್ರಾಚಾರ್ಯ ಭರತ–9483614450, ಉಪನ್ಯಾಸಕ ಉತ್ತಮಕುಮಾರ–9742452011, ಕುಲಸಚಿವ ಅಬ್ದುಲ್ ಜಮೀಲ್ ಖತೀಬ–9945871125 ಹಾಗೂ ಪ್ರ.ದ.ಸ. ಗಿರಿಮಲ್ಲಪ್ಪ ಬುಳ್ಳಾ–9343201655 ಇವರನ್ನು ಸಂಪರ್ಕಿಸಲು ಕೋರಲಾಗಿದೆ.

# ಎಸ್ಸೆಸ್ಸೆಲ್ಸಿ ಪರೀಕ್ಷೆಯಲ್ಲಿ ಆಶಾಪುರ ಶಾಲೆಯ ವಿದ್ಯಾರ್ಥಿಗಳ ಸಾಧನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮೇ 08–ನಗರದ ಆಶಾಪೂರ ರಸ್ತೆಯ ಪರಿಶಿಷ್ಟ ಜಾತಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ವಿದ್ಯಾರ್ಥಿಗಳು 2024–25 ನೇ ಸಾಲಿನ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಉತ್ತಮ ಸಾಧನೆ ತೋರಿದ್ದಾರೆ ಎಂದು ಶಾಲೆಯ ಪಾಂಶುಪಾಲರು ತಿಳಿಸಿದ್ದಾರೆ.

ವಸತಿ ಶಾಲೆ ವಿದ್ಯಾರ್ಥಿ ಯಮನೂರು 625 ಅಂಕಗಳಿಗೆ 599 ಅಂಕಗಳನ್ನು ಗಳಿಸುವ ಮೂಲಕ ಶೇ.95.84 ರಷ್ಟು, ರವಿಕುಮಾರ್ 625 ಅಂಕಗಳಿಗೆ 577 ಗಳಿಸುವ ಮೂಲಕ ಶೇ.92.32 ರಷ್ಟು, ಅಂಜಲಿ 625 ಅಂಕಗಳಿಗೆ 571 ಗಳಿಸುವ ಮೂಲಕ ಶೇ.91.36 ರಷ್ಟು ಉತ್ತಮ ಫಲಿತಾಂಶ ಗಿಟ್ಟಿಸಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು, ವಸತಿ ಶಾಲೆಯ ಪ್ರಾಂಶುಪಾಲರು ಹಾಗೂ ಬೋಧಕ, ಬೋಧ–ಕೇತರ ಸಿಬ್ಬಂದಿ ಅಭಿನಂದನೆ ತಿಳಿಸಿದ್ದಾರೆ.

# ಬಳ್ಳಾರಿ; ಜಿಲ್ಲೆಯ ಪ್ರಗತಿಯ ಪೂರಕ ಮಾಹಿತಿ ಒದಗಿಸಿ: ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 08–ಇದೇ ಮೇ 21,22 ರಂದು ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಬೆಂಗಳೂರಿನಲ್ಲಿ ರಾಜ್ಯದ ಮಟ್ಟದ ಪ್ರಗತಿ ಪರಿಶೀಲನಾ ಸಭೆ ನಡೆಯಲಿದ್ದು, ಇಲ್ಲಿಯವರೆಗೆ ಜಿಲ್ಲೆಯಲ್ಲಿ ವಿವಿಧ ಇಲಾಖೆಗಳಿಂದ ನಾನಾ ಯೋಜನೆಗಳಡಿ ಸಾಧಿಸಲಾದ ಪ್ರಗತಿಯ ಪೂರಕ ಮಾಹಿತಿಯನ್ನು ಒದಗಿಸಬೇಕು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಮಾನ್ಯ ಮುಖ್ಯಮಂತ್ರಿಗಳು ಇದೇ ಮೇ 21 ಹಾಗೂ 22 ರಂದು ರಾಜ್ಯದ ಎಲ್ಲ ಜಿಲ್ಲಾಧಿಕಾರಿಗಳು ಹಾಗೂ ಜಿಪಂ ಮುಖ್ಯ ಕಾರ್ಯನಿರ್ವಾಹಕಾಧಿರಿಗಳೊಂದಿಗೆ ಸಭೆ ನಡೆಸಲಿದ್ದು, ಈ ಕುರಿತು ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಏರ್ಪಡಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಬಾರದಂತೆ ನೋಡಿಕೊಳ್ಳಬೇಕು. ಸರಬರಾಜಾಗುವ ಕುಡಿಯುವ ನೀರಿನ ನಿಯಮಿತ ಪರೀಕ್ಷೆ, ಕ್ಲೋರಿನೇಷನ್ ತಪಾಸಣೆ ಹಾಗೂ ಇತರೆ ಕೈಗೊಳ್ಳುವ ಕಾರ್ಯದ ಕುರಿತು ಸಂಪೂರ್ಣ ಮಾಹಿತಿ ನೀಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಬಿತ್ತನೆ ಕ್ಷೇತ್ರ, ರಸಗೊಬ್ಬರ ವಿತರಣೆ ಮತ್ತು ಬಾಕಿ ಇರುವ ದಾಸ್ತಾನು, ಬೆಳೆ ವಿಮೆಗೆ ರೈತರ ನೋಂದಣಿ ಸೇರಿದಂತೆ ಎಲ್ಲಾ ಸಂಪೂರ್ಣ ಮಾಹಿತಿ ಒದಗಿಸಿ ಎಂದು ಕೃಷಿ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

ವಿವಿಧ ನಿಗಮಗಳ ಗಂಗಕಲ್ಯಾಣ ಯೋಜನೆಗಳ ಪ್ರಗತಿ ಬಗ್ಗೆ ಮಾಹಿತಿ ಪಡೆದು ಮಾತನಾಡಿದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು, ಆಯ್ಕೆಗೊಂಡ ಫಲಾನುಭವಿಗಳಿಗೆ ಯಾವುದೇ ಕಾರಣಕ್ಕೂ ವಿಳಂಬ ಆಗದ ರೀತಿಯಲ್ಲಿ ಯೋಜನೆ ತಲುಪಿಸಬೇಕು. ವಿದ್ಯುತ್ ಸರಬರಾಜು ಹಾಗೂ ಇತರೆ ಸಮಸ್ಯೆ ಇದ್ದಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಸಮನ್ವಯತೆಯಿಂದ ಪರಿಹಾರವಾಗಬೇಕು ಎಂದು ಸೂಚನೆ ನೀಡಿದರು.

ಮುಖ್ಯಮಂತ್ರಿಗಳ ಕನಸಿನ ಯೋಜನೆಯಾದ ಇಂದಿರಾ ಕ್ಯಾಂಟೀನ್ ಗಳ ಬಗ್ಗೆ ಹೆಚ್ಚಿನ ಕಾಳಜಿ ತೋರಿಸಲಾಗುತ್ತಿದ್ದು, ಜಿಲ್ಲೆಯಲ್ಲಿ ವಿವಿಧೆಡೆ ಬಾಕಿ ಇರುವ ಇಂದಿರಾ ಕ್ಯಾಂಟೀನ್ ಗಳ ನಿರ್ಮಾಣ ಕಾಮಗಾರಿಯನ್ನು ಸ್ಥಳೀಯ ಶಾಸಕರ ಸಹಕಾರದಲ್ಲಿ ಪೂರ್ಣಗೊಳಿಸಬೇಕು. ಎಲ್ಲಾ ತಾಲ್ಲೂಕುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಇಂದಿರಾ ಕ್ಯಾಂಟೀನ್ ಗಳಲ್ಲಿ ಸಿಸಿಟಿವಿ ಅಳವಡಿಕೆ ಮತ್ತು ನಿರ್ವಹಣೆ ಕುರಿತು ಸಂಪೂರ್ಣ ಮಾಹಿತಿ ನೀಡಬೇಕು ಎಂದು ಡಿಯುಡಿಸಿ ಅಧಿಕಾರಿಗಳಿಗೆ ಸೂಚಿಸಿದರು.

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಗಳಾದ ಶಕ್ತಿ, ಅನ್ನಭಾಗ್ಯ, ಗೃಹಲಕ್ಷ್ಮೀ, ಗೃಹಜ್ಯೋತಿ ಮತ್ತು ಯುವನಿಧಿ ಯೋಜನೆಗಳ ಪ್ರಗತಿವಾರು ವರದಿ ಸಲ್ಲಿಸಬೇಕು. ಅರ್ಹ ಸಾರ್ವಜನಿಕರಿಗೆ ಯೋಜನೆಗಳು ತಲುಪಿಸುವಲ್ಲಿ ಆಗುವ ಸಮಸ್ಯೆ ಅಥವಾ ವಿಳಂಬ ಕುರಿತು ಪೂರಕ ಮಾಹಿತಿ ನೀಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲೆಯಲ್ಲಿ ಬಿ–ಖಾತಾ ವಿತರಣೆಯಲ್ಲಿ ಪ್ರಗತಿ ಹೊಂದಬೇಕು, ಬಿ–ಖಾತಾ ಅಭಿಯಾನ ಹೆಚ್ಚಾಗಿ ಆಯೋಜಿಸಬೇಕು. ತೆರಿಗೆ ಸಂಗ್ರಹಣ ವಿವರ ನೀಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ತಿಳಿಸಿದರು.

ಜಿಲ್ಲೆಯಲ್ಲಿ ಈವರೆಗೆ ನಡೆದ ಜನತಾ ದರ್ಶನ ಕಾರ್ಯಕ್ರಮಗಳಲ್ಲಿ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಿಂದ ಸಲ್ಲಿಕೆಯಾದ ಅಹವಾಲು ವಿಲೇವಾರಿ ಬಗ್ಗೆ ವಿಚಾರಿಸಿದ ಜಿಲ್ಲಾಧಿಕಾರಿಗಳು, ಬಾಕಿಯಿರುವ ಎಲ್ಲಾ ಅರ್ಜಿಗಳನ್ನು ನಿಯಾಮಾನುಸಾರವಾಗಿ ಇಲಾಖೆಗಳು ವಿಲೇವಾರಿ ಮಾಡಬೇಕು, ಕೇವಲ ಹಿಂಬರಹ ನೀಡುವಂತಹದ್ದಲ್ಲ, ಯಾವುದೇ ಅರ್ಜಿಗಳನ್ನು ತಮ್ಮಲ್ಲಿ ಇಟ್ಟುಕೊಳ್ಳಬಾರದು. ಬಾಕಿಯಿರುವ ಪ್ರಕರಣಗಳನ್ನು ವಿಲೇ ಮಾಡುವ ಕಾರ್ಯವಾಗಬೇಕು. ಈ ಕುರಿತು ಪೂರಕ ಮಾಹಿತಿ ನೀಡಬೇಕು ಎಂದು ಎಲ್ಲಾ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ದೌರ್ಜನ್ಯ ಪ್ರಕರಣಗಳ ವಿಲೇವಾರಿ ಮಾಹಿತಿ, ಎಸ್ಸಿ–ಎಸ್ಪಿ ಮತ್ತು ಟಿಎಸ್ಪಿ ಯೋಜನೆ ಅನುದಾನ ಬಳಕೆ, ಅರಣ್ಯ ಹಕ್ಕು ಕಾಯ್ದೆಯಡಿ ಬಾಕಿಯಿರುವ ಅರ್ಜಿಗಳ ಮಾಹಿತಿ ನೀಡಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದರು.

ಸರ್ಕಾರಿ ಕಾಲೇಜುಗಳ ಜಮೀನು, ವಸತಿ ನಿಲಯ, ಅಂಗನವಾಡಿ, ಸ್ಮಶಾನ ಭೂಮಿ ಖರೀದಿ ಯಾವುದೇ ಬಾಕಿ ಇದ್ದರೂ ಗಮನಕ್ಕೆ ತರಬೇಕು. ಸಭೆಯಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಭಾಗಿಯಾಗುವುದರಿಂದ ತಮ್ಮ ಇಲಾಖೆಗಳಿಗೆ ಬೇಕಾದ ಪ್ರಸ್ತಾವನೆ, ಬೇಡಿಕೆಗಳಿದ್ದಲ್ಲಿ ಮಾಹಿತಿ ನೀಡಿ ಎಂದರು.

ಎಲ್ಲಾ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಮಾಹಿತಿ ಪಡೆದುಕೊಂಡ ಅವರು, ಜಿಲ್ಲೆಯ ಎಲ್ಲಾ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ವಾರದೊಳಗಾಗಿ ಸಂಪೂರ್ಣ ಮಾಹಿತಿಯನ್ನು ಸೂಕ್ತ ನಮೂನೆಯಲ್ಲಿ ತಪ್ಪಿಲ್ಲದಂತೆ ಅಧಿಕಾರಿಗಳೇ ಖುದ್ದಾಗಿ ನಮೂದಿಸಬೇಕು. ಕಡ್ಡಾಯವಾಗಿ ಪ್ರಗತಿ ವರದಿಯನ್ನು ನಿಗದಿತ ಅವಧಿಯೊಳಗೆ ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು ಎಂದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಲ್ಲಿಕಾರ್ಜುನ, ಕೃಷಿ ಜಂಟಿ ನಿರ್ದೇಶಕ ಸೋಮ್ ಸುಂದರ್, ಜಿಪಂ ಯೋಜನಾಧಿಕಾರಿ ವಿನೋದ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾಧಿಕಾರಿ ರಾಘವೇಂದ್ರ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ವ್ಯಕ್ತಿ ನಾಪತ್ತೆ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ08–ತೋರಣಗಲ್ಲು ಪಟ್ಟಣದ ನಿವಾಸಿಯಾದ ಸಂತೋಷಕುಮಾರ್ ಎನ್ನುವ 40 ವರ್ಷದ ವ್ಯಕ್ತಿಯು ಏ.25 ರಂದು ಕಾಣೆಯಾಗಿದ್ದು, ಈ ಕುರಿತು ತೋರಣಗಲ್ಲು ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪತ್ತೆಗೆ ಸಹಕರಿಸಬೇಕು ಎಂದು ಠಾಣಾಧಿಕಾರಿ ಮನವಿ ಮಾಡಿದ್ದಾರೆ.

ಚಹರೆ ಗುರುತು:

ಅಂದಾಜು 5.3 ಅಡಿ ಎತ್ತರ, ಸಾಧಾರಣ ಗೋದಿ ಮೈಬಣ್ಣ, ದುಂಡು ಮುಖ ಹೊಂದಿರುತ್ತಾನೆ. ಕಾಣೆಯಾದ ಸಂದರ್ಭದಲ್ಲಿ ಬಾದಮಿ ಬಣ್ಣದ ಅಂಗಿ ಮತ್ತು ಕಪ್ಪು ಬಣ್ಣದ ಪ್ಯಾಂಟ್ ಧರಿಸಿರುತ್ತಾನೆ. ಕನ್ನಡ, ಇಂಗ್ಲೀಷ್, ಹಿಂದಿ ಭಾಷೆ ಮಾತನಾಡುತ್ತಾನೆ.

ಕಾಣೆಯಾದ ವ್ಯಕ್ತಿ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100 ಬಳ್ಳಾರಿ ಎಸ್.ಪಿ ಅವರ ಕಚೇರಿ ದೂ.08392–258300, ತೋರಣಗಲ್ಲು ಡಿವೈಎಸ್‌ಪಿ ದೂ.9480803010, ಸಂಡೂರು ವೃತ್ತ ಸಿ.ಪಿ.ಐ ದೂ.08395–260100, 9480803036, ತೋರಣಗಲ್ಲು ಪೊಲೀಸ್ ಠಾಣೆ ದೂ.08395–250100, ಮೊ.9480803062 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

# ಕೊಪ್ಪಳ: ಹಳ್ಳಿ ಹೈದನಿಗೆ ರಾಜ್ಯಪಾಲರಿಂದ ಚಿನ್ನದ ಪದಕ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ತಾಲೂಕಿನ ಮುದ್ದಾಬಳ್ಳಿ ಗ್ರಾಮದ ಸುದರ್ಶನ್ ಹನುಮಗೌಡ ಪೊಲೀಸ್ ಪಾಟೀಲ್ ಗೆ,ಎಂ ಎಸ್ಸಿ ಸ್ನಾತಕೋತ್ತರ ಪದವಿಯಲ್ಲಿ ಅತಿಹೆಚ್ಚು ಅಂಕ ಪಡೆದ ಪ್ರಯುಕ್ತ ಚಿನ್ನದ ಪದಕ ಲಭಿಸಿದೆ.

ದಿನಾಂಕ 6 ರಂದು ಬೆಂಗಳೂರಿನಲ್ಲಿ ಜರುಗಿದ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯದ 27ನೇ ಘಟಿಕೋತ್ಸವ ಕಾರ್ಯಕ್ರಮದಲ್ಲಿ,ಚಿನ್ನದ ಪದಕ ಹಾಗು ಪ್ರಮಾಣ ಪತ್ರವನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪ್ರದಾನ ಮಾಡಿದರು.

ಹುಬ್ಬಳ್ಳಿಯ ಕರ್ನಾಟಕ ವೈದ್ಯಕೀಯ ವಿಜ್ಞಾನ ಸಂಸ್ಥೆಯ ಎಂ ಎಸ್ಸಿ ನರ್ಸಿಂಗ್ ಕಾಲೇಜಿನಲ್ಲಿ, *ಸಮುದಾಯ ಆರೋಗ್ಯ& ಶುಶ್ರೂಷೆ* ಎಂಬ ವಿಷಯದಲ್ಲಿ ಅತಿ ಹೆಚ್ಚು ಅಂಕಗಳಿಸಿದ ಪ್ರಯುಕ್ತ ಚಿನ್ನದ ಪದಕ ಪಡೆದಿದ್ದಾರೆ.

ಪ್ರಶಸ್ತಿ ವಿತರಣಾ ಕಾರ್ಯಕ್ರಮದಲ್ಲಿ ಸಚಿವ ಡಾ.ಶರಣಪ್ರಕಾಶ್ ಪಾಟೀಲ್, ಉಪಕುಲಪತಿ ಡಾ.ಭಗವಾನ್ ಮತ್ತು ಅಜೀಂ ಪ್ರೇಮ್ ಜೀ ಫೌಂಡೇಶನ್ ಅದ್ಯಕ್ಷ ಅಜೀಂ ಪ್ರೇಮ್ ಜೀ ಮತ್ತಿತರಿದ್ದರು.

ಸುದರ್ಶನ್ ಗೆ ಚಿನ್ನದ ಪದಕ ಲಭಿಸಿದ್ದಕ್ಕೆ ಆತನ ತಂದೆ ತಾಯಿ,ಕುಟುಂಬ ವರ್ಗ ಮತ್ತು ಕಾಲೇಜಿನ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿದ್ದಾರೆ.

# ಇಂದು ವಿದ್ಯುತ್ ವ್ಯತಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 08–ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ–2 ರ 220/110/11ಕೆವಿ ಅಲ್ಲೀಪುರ ವಿದ್ಯುತ್ ಉಪ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುರಿಂದ ಮೇ 09 ರಂದು ಬೆಳಿಗ್ಗೆ 09 ಗಂಟೆಯಿಂದ ಸಂಜೆ 05 ಗಂಟೆಯವರೆಗೆ ಎಫ್–33 ಮತ್ತು ಎಫ್–73 ವ್ಯಾಪ್ತಿಯಲ್ಲಿ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

**ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:**

ಎಫ್–33 ವ್ಯಾಪ್ತಿಯ ಕೆ.ಚ್.ಬಿ.ಕಾಲೋನಿ, ನೇತಾಜಿ ನಗರ, ಇನ್ನಾರೆಡ್ಡಿ ಲೇಔಟ್, ಇನ್ ಫ್ಯಾಂಟರಿ ರೋಡ್, ವಾಸವಿ ಸ್ಕೂಲ್, ಕೊಳಗಲ್ ರೋಡ್, ವಿದ್ಯಾನಗರ, ಕಲ್ಯಾಣಿ ಕಾಲೋನಿ, ಭತ್ರಿ ರೋಡ್, ಭತ್ರಿ, ಗುರು ಕಾಲೋನಿ, ಸತ್ಯವಾಣಿ ನಗರ, ಸಿದ್ಧಾರ್ಥ ನಗರ, ವಿಯಾನಿ ಶಾಲೆ.

ಎಫ್–73 ವ್ಯಾಪ್ತಿಯ ಬಸವನಕುಂಟೆ, ಕೋಟೆ ಪ್ರದೇಶ, 1 ನೇ ಗೇಟ್, 2 ನೇ ಗೇಟ್, ಸಿದ್ದಾರ್ಥ ನಗರ, ಸುಧಾಕ್ರಾಸ್, ಒ.ಪಿ.ಡಿ ಸೇರಿದಂತೆ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದ್ದು, ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೃತ ವ್ಯಕ್ತಿ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 08–ನಗರದ ಅಲ್ಲೀಪುರ ನೀರು ಸಂಗ್ರಹಗಾರ ಹತ್ತಿರ ಸುಮಾರು 25 ರಿಂದ 30 ವರ್ಷದ ಅನಾಮಧೇಯ ವ್ಯಕ್ತಿಯು ಆಕಸ್ಮಿಕವಾಗಿ ಕಾಲುಜಾರಿ ನೀರಿನಲ್ಲಿ ಬಿದ್ದು ಮುಳುಗಿ ಮೇ 07 ರಂದು ಮೃತಪಟ್ಟಿದ್ದು, ಮೃತನ ವಾರಸುದಾರರು ತಿಳಿದಿರುವುದಿಲ್ಲ. ಈ ಕುರಿತು ಬಳ್ಳಾರಿ ಗ್ರಾಮೀಣ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್ ಇನ್ಸ್‌ಪೇಕ್ಟರ್ ಮನವಿ ಮಾಡಿದ್ದಾರೆ.

ಚಹರೆ ಗುರುತು:

ಎತ್ತರ 5.6 ಅಡಿ, ಗೋಧಿ ಮೈಬಣ್ಣ, ಸಾಧಾರಣ ಮೈಕಟ್ಟು ಹೊಂದಿದ್ದು, ಕಪ್ಪು ಕೂದಲು, ಗಡ್ಡ ಬಿಟ್ಟಿರುತ್ತಾನೆ. ಕಪ್ಪು ಬಣ್ಣದ ಹಾಫ್ ಟೀ–ಶರ್ಟ್ ಮತ್ತು ತಿಳಿ ಪಿಂಕ್ ಬಣ್ಣದ ಫಾರ್ಮಲ್ ಪ್ಯಾಂಟ್ ಧರಿಸಿದ್ದು, ಪ್ಯಾಂಟ್‌ಗೆ ಬೆಲ್ಟ್ ಇರುತ್ತದೆ.

ಈ ಮೇಲ್ಕಂಡ ಚಹರೆ ಗುರುತುಗಳುಳ್ಳ ಮೃತ ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392–258100, 258102 ಅಥವಾ ಬಳ್ಳಾರಿ ಗ್ರಾಮೀಣ ಪೊಲೀಸ್ ಠಾಣೆಯ ದೂ.08392–276461, ಪಿ.ಐ ಮೊ.9480803049 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಎಸ್‌ಎಸ್‌ಎಲ್‌ಸಿ ಪರೀಕ್ಷೆ–2: ನೋಂದಣಿಗೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 08–2025ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆ–1 ರಲ್ಲಿ ಉತ್ತೀರ್ಣರಾಗದ ವಿದ್ಯಾರ್ಥಿಗಳು ಮೇ 26 ರಿಂದ ಜೂನ್ 02 ರವರೆಗೆ ನಡೆಯಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ರ ಪರೀಕ್ಷೆಗೆ ನೋಂದಾಯಿಸಿಕೊಳ್ಳಬಹುದು.

ಜಿಲ್ಲೆಯ 04 ತಾಲ್ಲೂಕುಗಳಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆ–2 ನಡೆಯಲಿವೆ. ಪ್ರಥಮ ಬಾರಿಗೆ ಪರೀಕ್ಷೆಗೆ ನೋಂದಣಿಯಾಗುವ ವಿದ್ಯಾರ್ಥಿಗಳಿಗೆ ಶುಲ್ಕ ಪಾವತಿಯಿಂದ ವಿನಾಯಿತಿ ಇದ್ದು, ವಿದ್ಯಾರ್ಥಿಗಳು ಮೇ 10 ರೊಳಗಾಗಿ ನೋಂದಾಯಿಸಿಕೊಳ್ಳಬಹುದು ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಬಿ.ಉಮಾದೇವಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಳ್ಳಾರಿ: ವಿವಿಧ ಗ್ರಾಮ ಪಂಚಾಯಿತಿ ತೆರವಾದ ಸ್ಥಾನಗಳಿಗೆ ಉಪ ಚುನಾವಣಾ ವೇಳಾಪಟ್ಟಿ ಪ್ರಕಟ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 08–ಬಳ್ಳಾರಿ ಜಿಲ್ಲೆಯ ವಿವಿಧ ತಾಲ್ಲೂಕುಗಳ ಗ್ರಾಮ ಪಂಚಾಯಿತಿಯಲ್ಲಿ ವಿವಿಧ ಕಾರಣಗಳಿಂದ ತೆರವಾದ ಸ್ಥಾನಗಳಿಗೆ ಉಪ ಚುನಾವಣೆ ನಡೆಸಲು ಚುನಾವಣಾ ವೇಳಾಪಟ್ಟಿ ಪ್ರಕಟಿಸಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಆದೇಶಿಸಿದ್ದಾರೆ.

ನಾಮಪತ್ರಗಳನ್ನು ಸಲ್ಲಿಸಲು ಮೇ 14 ರಂದು ಕೊನೆಯ ದಿನವಾಗಿರುತ್ತದೆ. ಮೇ 15 ರಂದು ನಾಮ ಪತ್ರಗಳನ್ನು ಪರಿಶೀಲಿಸುವ ದಿನವಾಗಿರುತ್ತದೆ. ಉಮೇದುವಾರಿಕೆಯನ್ನು ಹಿಂತೆಗೆದುಕೊಳ್ಳಲು ಮೇ 17 ಕೊನೆಯ ದಿನವಾಗಿರುತ್ತದೆ. ಮತದಾನವು ಮೇ 25 ರಂದು ನಡೆಯಲಿದೆ. ಮೇ 28 ರಂದು ಉಪಚುನಾವಣೆ ಪ್ರಕ್ರಿಯೆ ಮುಕ್ತಾಯಗೊಳ್ಳಲಿದೆ.

*ಖಾಲಿ ಇರುವ ಗ್ರಾಪಂ ವಿವರ ಮತ್ತು ಸ್ಥಾನ:*

ಕಂಪ್ಲಿ ತಾಲ್ಲೂಕಿನ ದೇವಸಮುದ್ರ–1(ಸಾಮಾನ್ಯ ಮಹಿಳೆ), ದೇವಲಾಪುರ–1(ಸಾಮಾನ್ಯ). ಸಿರುಗುಪ್ಪ ತಾಲ್ಲೂಕಿನ ರಾವಿಹಾಳು–1(ಅನುಸೂಚಿತಪಂಗಡಮಹಿಳೆ) ಬಿ.ಎಂ.ಸೂಗೂರು–2(ಸಾಮಾನ್ಯ ಮತ್ತು ಸಾಮಾನ್ಯ ಮಹಿಳೆ) ಮತ್ತು ಸಂಡೂರು ತಾಲ್ಲೂಕಿನ ಮೆಟ್ರಿಕಿ–1(ಅನುಸೂಚಿತಪಂಗಡ ಮಹಿಳೆ) ಸೇರಿ ಒಟ್ಟು 6 ಗ್ರಾಮಪಂಚಾಯತಿಗಳಿಗೆ ಉಪ ಚುನಾವಣೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಅವರು ತಿಳಿಸಿದ್ದಾರೆ.

ಎಲ್ಲಾ ಯೋಜನೆಗಳು ಜನರಿಗೆ ತಲುಪುವಂತೆ ಕಾರ್ಯನಿರ್ವಹಿಸಿರಿ: ಸಂಸದ ಕೆ.ರಾಜಶೇಖರ ಹಿಟ್ನಾಳ

# ಅಳವಂಡಿ ಹೋಬಳಿ ಮಟ್ಟದ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನಾ ಸಭೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:–ಇಲಾಖೆಗಳಲ್ಲಿರುವ ವಿವಿಧ ಯೋಜನೆಗಳು ಜನರಿಗೆ ತಲುಪುವಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕೆಂದು ಕೊಪ್ಪಳ ಸಂಸದರಾದ ಕೆ.ರಾಜಶೇಖರ ಹಿಟ್ನಾಳ್ ಕರೆ ನೀಡಿದರು.

ಕೊಪ್ಪಳ ತಾಲೂಕಿನ ಅಳವಂಡಿ ಗ್ರಾಮದ ಡಾ.ಬಿ.ಆರ್ ಅಂಬೇಡ್ಕರ್ ಸಮುದಾಯ ಭವನದಲ್ಲಿ ಅಳವಂಡಿ ಹೋಬಳಿ ಮಟ್ಟದ ಕೇಂದ್ರ ಮತ್ತು ರಾಜ್ಯ ಪುರಸ್ಕೃತ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದರು. ಇಲಾಖೆಯ ಯೋಜನೆಗಳನ್ನು ಅರ್ಹರಿಗೆ ತಲುಪಿಸುವಲ್ಲಿ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ನಿರಂತರವಾಗಿ ಶ್ರಮಿಸಬೇಕು.

ವಿವಿಧ ಯೋಜನೆಗಳ ಅನುದಾನ ಬಳಕೆ ಮಾಡಿಕೊಂಡು ನಿಗದಿತ ಅವಧಿಯಲ್ಲಿ ಅಭಿವೃದ್ಧಿ ಕಾರ್ಯಗಳು ಮುಕ್ತಾಯವಾಗಬೇಕೆಂದರು. ಗ್ರಾಮದ ಸರ್ವಾಂಗೀಣ ಅಭಿವೃದ್ಧಿಗೆ ಸಾಕಷ್ಟು ಅವಕಾಶಗಳಿವೆ ಎಂದರು. ಮಹಾತ್ಮಾ ಗಾಂಧಿ ನರೇಗಾ, ಪ್ರಧಾನ ಮಂತ್ರಿ ಆವಾಸ್ ಯೋಜನೆ,ಸ್ವಚ್ಛ ಭಾರತ ಮಿಷನ್, ಎನ್.ಆರ್.ಎಲ್ ಎಂ ಸಂಜೀವಿನಿ ಯೋಜನೆಗಳು ಬಹು ದೊಡ್ಡ ಯೋಜನೆಗಳಾಗಿದ್ದು ಎಲ್ಲರೂ ಯೋಜನೆಯಲ್ಲಿ ಭಾಗವಹಿಸುವಂತೆ ಕ್ರಮವಹಿಸುವದರ ಜೊತೆಗೆ ಕೃಷಿ, ತೋಟಗಾರಿಕೆ ಇಲಾಖೆಯಿಂದ ಸಿಗುವ ಸೌಲಭ್ಯಗಳನ್ನು ಎಲ್ಲಾ ರೈತರಿಗೆ ದೊರೆಯಲು ಹೆಚ್ಚು ಮಾಹಿತಿ ನೀಡಲು ಪ್ರಚಾರ ಕೈಗೊಳ್ಳುವಂತೆ ಸಭೆಯಲ್ಲಿ ಅಧಿಕಾರಿಗಳಿಗೆ ಸೂಚಿಸಿದರು. ಪ್ರಸಕ್ತ ವರ್ಷದ ನರೇಗಾ ಯೋಜನೆಯ, ಪ್ರಧಾನಮಂತ್ರಿ ಆವಾಸ್ ಯೋಜನೆ, ಎನ್. ಆರ್. ಎಲ್ ಎಂ ಸಂಜಿವಿನಿ ಯೋಜನೆಯ ಮತ್ತು ಕೃಷಿ, ತೋಟಗಾರಿಕೆ,ಜೆಜೆಎಂ ಗ್ರಾಮೀಣ ಕುಡಿಯುವ ನೀರು ಇಲಾಖೆ ಅಧಿಕಾರಿಗಳು ಪ್ರಗತಿ ವರದಿಯನ್ನು ಸಭೆಯಲ್ಲಿ ಮಂಡಿಸಿದರು.

ಗ್ರಾಮದಲ್ಲಿ ಮೂಲಭೂತ ಸೌಕರ್ಯಗಳು ಕಾಮಗಾರಿಗಳು ನರೇಗಾ ಯೋಜನೆಯ ಮಾರ್ಗಸೂಚಿಯ ಪ್ರಕಾರ ಅನುಷ್ಠಾನಿಸಲು ಅವಕಾಶವಿದ್ದಲ್ಲಿ ಮಾತ್ರ ಕೈಗೊಳ್ಳಬೇಕಾಗುತ್ತದೆಂದರು. ಜೆಜೆಎಂ ಬಾಕಿ ಉಳಿದ ಕಾಮಗಾರಿಯನ್ನು ಪೂರ್ಣಗೊಳಿಸಲು ಸಂಬಂಧಿಸಿದ ಗುತ್ತಿಗೆದಾರರಿಗೆ ನೋಟಿಸ್ ನೀಡುವಂಥೆ ಸೂಚಿಸಿದರು. ಇದೇ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಸದಸ್ಯರಿಂದ ಗ್ರಾಮಕ್ಕೆ ಅವಶ್ಯವಿರುವ ಸೌಲಭ್ಯ, ಕಾಮಗಾರಿ ಕುರಿತು ಮನವಿ ಪತ್ರದ ಮೂಲಕ ಅರ್ಜಿ ಸಲ್ಲಿಸಿದರು.

ಪ್ರಗತಿ ಪರಿಶೀಲನಾ ಸಭೆಯಲ್ಲಿ ಅಳವಂಡಿ ಗ್ರಾಮ ಪಂಚಾಯತಿ ಅಧ್ಯಕ್ಷೆ ಶಂಕ್ರಮ್ಮ ಜೋಗಿನ, ತಾಲೂಕ ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ತಹಶೀಲ್ದಾರ್ ವಿಠಲ್ ಚೌಗಲಾ, ತಾಲೂಕ ಗ್ಯಾರಂಟಿ ಯೋಜನೆಗಳ ಸಮಿತಿ ಅಧ್ಯಕ್ಷರಾದ ಬಾಲಚಂದ್ರನ್, ಗ್ರಾಮ ಪಂಚಾಯತಿ ಉಪಾಧ್ಯಕ್ಷೆ ಶಾರದಮ್ಮ ಈಳಿಗೇರ, ತಾಲೂಕ ಮಟ್ಟದ ಅಧಿಕಾರಿಗಳು, ತಾಲೂಕ ಪಂಚಾಯತ ಅಧಿಕಾರಿಗಳು & ಸಿಬ್ಬಂದಿಗಳು, ಅಳವಂಡಿ ಹೋಬಳಿ ವ್ಯಾಪ್ತಿಯ ಗ್ರಾಮ ಪಂಚಾಯತಿಗಳು ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ತಾಂತ್ರಿಕ ಸಹಾಯಕರುಗಳು, ಕಂದಾಯ ಇಲಾಖೆಯ ಎಲ್ಲಾ ಅಧಿಕಾರಿಗಳು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು, ಗ್ರಾಮ ಪಂಚಾಯತ ಸಿಬ್ಬಂದಿಗಳು ಹಾಜರಿದ್ದರು.

# ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಸಮೀಕ್ಷೆ: ಕಂಟ್ರೋಲ್ ರೂಮ್ ಸ್ಥಾಪನೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಕುರಿತಂತೆ ಗೌರವಾನ್ವಿತ ನ್ಯಾಯಮೂರ್ತಿ ಹೆಚ್. ಎನ್ ನಾಗಮೋಹನ ದಾಸ್ ರವರ ಏಕಸದಸ್ಯ ವಿಚಾರಣಾ ಆಯೋಗದ ವತಿಯಿಂದ ಕೈಗೊಳ್ಳಲು ಉದ್ದೇಶಿಸಿರುವ ಪರಿಶಿಷ್ಟ ಜಾತಿಯ ಒಳಮೀಸಲಾತಿ ವರ್ಗೀಕರಣ ಸಂಬಂಧ ಸಮೀಕ್ಷೆ ಕುರಿತು ಕಂಟ್ರೋಲ್ ರೂಮ್ ಸ್ಥಾಪಿಸಲಾಗಿದೆ.

ಹೆಚ್.ಎನ್.ನಾಗಮೋಹನ್ ದಾಸ್ ಏಕಸದಸ್ಯ ವಿಚಾರಣಾ ಆಯೋಗದ ರವರು 2025ರ ಮಾರ್ಚ್ 27 ರಂದು ಸರ್ಕಾರ–ಕ್ಕೆ ಮಧ್ಯಂತರ ವರದಿ ಸಲ್ಲಿಸಿ ಕರ್ನಾಟಕ ರಾಜ್ಯದ ಪರಿಶಿಷ್ಟ ಜಾತಿಯಲ್ಲಿ ಇರುವ ಉಪ ಜಾತಿಗಳ ವೈಜ್ಞಾನಿಕ ವರ್ಗೀಕರಣ ಮಾಡಲು ಹೊಸದಾದ ಸಮೀಕ್ಷೆ ನಡೆಸಿ ದತ್ತಾಂಶವನ್ನು ಸಂಗ್ರಹಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ. ಈ ಶಿಫಾರಸ್ಸಿನಂತೆ ಸರ್ಕಾರದ ಆದೇಶದಲ್ಲಿ ಈ ಶಿಫಾರಸ್ಸುಗಳನ್ನು ಜಾರಿಗೊಳಿಸಲು ರಾಜ್ಯ ಮಟ್ಟದ ಸಮನ್ವಯ ಸಮಿತಿ, ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಹಾಗೂ ತಾಲೂಕು ಮಟ್ಟದ ಸಮನ್ವಯ ಸಮಿತಿ ರಚಿಸಿ ಈ ಎಲ್ಲಾ ಸಮಿತಿಗಳಿಗೂ ಕಾಲಮಿತಿ ನಿಗಧಿಗೊಳಿಸಿ ಕೈಗೊಳ್ಳಬೇಕಾದ ಕಾರ್ಯಗಳ ಬಗ್ಗೆ ಮಾರ್ಗಸೂಚಿ ನೀಡಿರುತ್ತಾರೆ. ಈ ಸಮೀಕ್ಷೆಯ ಸಮಯದಲ್ಲಿ ಸಾರ್ವಜನಿಕರಿಗೆ ಏನಾದರು ಸಮಸ್ಯೆಯಾದಲ್ಲಿ ಕಂಟ್ರೋಲ್ ರೂಮ್ ದೂರವಾಣಿ ಸಂ–ಖ್ಯೆ: 9480843039 ಗೆ ಸಂಪರ್ಕಿಸುವಂತೆ ಕೊಪ್ಪಳ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮುದ್ರಾ ಯೋಜನೆ:ನೇಕಾರರಿಗೆ ಸಾಲ ಸೌಲಭ್ಯ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.8-ಪ್ರಸಕ್ತ ಸಾಲಿಗೆ ಪ್ರಧಾನಮಂತ್ರಿ ಮುದ್ರಾ ಯೋಜನೆಯಡಿ ಜಿಲ್ಲೆಯ ಕೈಮಗ್ಗ ನೇಕಾರರಿಗೆರಾಷ್ಟ್ರೀಕೃತಬ್ಯಾಂಕುಗಳಿಂದ ಸಾಲಸೌಲಭ್ಯ ಒದಗಿಸಲು ಅರ್ಹ ಕೈಮಗ್ಗ ನೇಕಾರರಿಂದ ಅರ್ಜಿ ಆಹ್ವಾನಿಸಲಾಗಿದೆ.

ಈ ಯೋಜನೆಯಡಿ ಶೇ.6ರ ಬಡ್ಡಿದರದಲ್ಲಿ ಕೈಮಗ್ಗ ನೇಕಾರರಿಗೆ ರಾಷ್ಟ್ರೀಕೃತ ಬ್ಯಾಂಕ್‌ಗಳಿಂದ ಸಾಲವನ್ನು ಒದಗಿಸಲಾಗುತ್ತದೆ. ಬ್ಯಾಂಕ್‌ನವರು ವಿಧಿಸುವ ಸಾಲದ ಮೇಲಿನ ಗರಿಷ್ಟ ಬಡ್ಡಿ ದರ ಶೇ.7ನ್ನು ಸಾಲ ಮಂಜೂರಾದ ದಿನಾಂಕದಿಂದ ಮೂರು ವರ್ಷಗಳ ಅವಧಿಗೆ ಕೇಂದ್ರ ಸರ್ಕಾರವು ಬಡ್ಡಿ ಸಹಾಯಧನವಾಗಿ ನೀಡಲಿದೆ.

ಸಾಲದ ಮೊಬಲಗಿನ ಶೇ.20 ಗರಿಷ್ಟ10 ಸಾವಿರ ರೂ.ಗಳ ಮಾರ್ಜಿನ ಮನಿ ಹಣವನ್ನು ಸಾಲ ವಿತರಿಸಿದ ಬ್ಯಾಂಕಿನ ವ್ಯವಸ್ಥಾಪಕರು ಜಿಲ್ಲೆಯ ನೋಡಲ್ ಕಚೇರಿ ಪಂಜಾಬ ನ್ಯಾಷನಲ್ ಬ್ಯಾಂಕಿನ ಮೂಲಕ ಪಡೆಯಬಹುದಾಗಿದೆ.

ನೇಕಾರರ ಕೈಮಗ್ಗ ನೇಕಾರಿಕೆ ವ್ಯವಹಾರವನ್ನು ಆಧರಿಸಿ ಈ ಯೋಜನೆಯಡಿ ಗರಿಷ್ಟ 50 ಸಾವಿರ ರೂ.ಗಳ ಸಾಲವನ್ನು ಒದಗಿಸಲಾಗುತ್ತದೆ.

ಈ ಸೌಲಭ್ಯಕ್ಕಾಗಿ ಅರ್ಜಿ ನಮೂನೆಯನ್ನು ಉಪನಿರ್ದೇಶಕರು, ಕೈಮಗ್ಗ ಮತ್ತು ಜವಳಿ ಇಲಾಖೆ, ಜಿಲ್ಲಾಡಳಿತ ಭವನ, ನವನಗರ, ಬಾಗಲಕೋಟೆ ಕಚೇರಿಯಿಂದ ಪಡೆದುಕೊಂಡು ಮೇ 31 ರೊಳಗಾಗಿ ಸಲ್ಲಿಸುವಂತೆ ಕೈಮಗ್ಗ ಮತ್ತು ಜವಳಿ ಇಲಾಖೆ ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08354-235463ಗೆ ಸಂಪರ್ಕಿಸಬಹುದಾಗಿದೆ.

# ಮೇ.12 ಜಿ.ಪಂ ಮಾಸಿಕ ಕೆಡಿಪಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.8-ಆಡಳಿತಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕರ್ನಾಟಕ ಅಭಿವೃದ್ದಿ ಕಾರ್ಯಕ್ರಮಗಳ (ಕೆಡಿಪಿ) ಎಪ್ರೀಲ್ ಮಾಹೆಯ ಮಾಸಿಕ ಪ್ರಗತಿ ಪರಿಶೀಲನಾ ಸಭೆ ಹಾಗೂ ಪ್ರಸಕ್ತ ಸಾಲಿನ 1ನೇ ಸಾಮಾನ್ಯ ಸಭೆ ಇದೇ ಮೇ 12 ರಂದು ಜರುಗಲಿದೆ.

ಜಿ.ಪಂ ನೂತನ ಸಭಾಭವನದಲ್ಲಿ ಬೆಳಿಗ್ಗೆ 9 ಗಂಟೆಗೆ ಕೆಡಿಪಿ ಪ್ರಗತಿ ಪರಿಶೀಲನಾ ಸಭೆ ಹಾಗೂ ಬೆಳಿಗ್ಗೆ 11 ಗಂಟೆಗೆ 1ನೇ ಸಾಮಾನ್ಯ ಸಭೆ ಜರುಗಲಿದೆ ಎಂದು ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೇ.12 ಬುದ್ದ ಜಯಂತಿ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.8-ಜಿಲ್ಲೆಯಾದ್ಯಂತ ಮೇ 12 ರಂದು ಇದೇ ಪ್ರಥಮ ಬಾರಿಗೆ ಭಗವಾನ್ ಬುದ್ಧ ಜಯಂತಿಯನ್ನು ಆಚರಿಸಲಾಗುತ್ತಿದೆ ಎಂದು ಅಪರ ಜಿಲ್ಲಾಧಿಕಾರಿ ಅಶೋಕ ತೇಲಿ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಭಗವಾನ್ ಬುದ್ಧ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಮಹನೀಯರ ಜಯಂತಿ ಆಚರಣೆಗಳು ಅದ್ದೂರಿತನಕಷ್ಟೇ ಸೀಮಿತಿಗೊಳಿಸದೇ ವೈಚಾರಿಕ ಮನೋಭಾವದಿಂದ ಆಚರಿಸುವಂತಿರಬೇಕು. ಬುದ್ಧ ಜಯಂತಿ ಮೂಲಕ ಅವರ ವಿಚಾರಧಾರೆಗಳ ವಿನಿಮಯ ಕಾರ್ಯ ನಡೆಯಬೇಕು ಎಂದರು.

ಮೇ.12ರಂದು ಬೆಳಿಗ್ಗೆ 9 ಗಂಟೆಗೆ ಜಿಲ್ಲಾ ಪಂಚಾಯತಿ ಹಳೆ ಸಭಾಭವನದಲ್ಲಿ ಸುಗಮ ಸಂಗೀತ,ನುರಿತ ಉಪನ್ಯಾಸಕರಿಂದ ಉಪನ್ಯಾಸ ಕಾರ್ಯಕ್ರಮಗಳ ಮೂಲಕ ಭಗವಾನ ಬುದ್ಧ ಜಯಂತಿ ಆಚರಣೆಯನ್ನು ಅರ್ಥಪೂರ್ಣವಾಗಿ ನಡೆಸಲಾಗುವುದು. ಶಿಷ್ಟಾಚಾರದಂತೆ ಆಮಂತ್ರಣ ಪತ್ರಿಕೆಯನ್ನು ಮುದ್ರಿಸಬೇಕು. ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಮತ್ತು ಸಮುದಾಯ ಬಾಂಧವರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಆಗಬೇಕು ಎಂದರು.

ಸಭೆಯಲ್ಲಿ ಸಮುದಾಯದ ಹಿರಿಯರು ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಕುಮಾರೇಶ್ವರ ಆಸ್ಪತ್ರೆಗೆ ಇನ್‌ಕ್ಯೂಬೇಟರ್ ದೇಣಿಗೆ




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.8-ನಗರದ ಬಿ.ವಿ.ವಿ.ಸಂಘದ ಹಾನಗಲ್ಲ ಶ್ರೀ ಕುಮಾರೇಶ್ವರ ಆಸ್ಪತ್ರೆಗೆ ಸಾಂಸ್ಥಿಕ (ಕಾರ್ಪೊರೇಟ್) ಸಾಮಾಜಿಕ ಜವಾಬ್ದಾರಿಯಡಿ ಉಜ್ಜೀವನ ಬ್ಯಾಂಕ್‌ನ ಬಾಗಲಕೋಟೆ ಶಾಖೆಯಿಂದ ಸುಮಾರು 6 ಲಕ್ಷ ರೂಪಾಯಿಗಳ ಮೌಲ್ಯದ ಅತ್ಯಾಧುನಿಕ ತಂತ್ರಜ್ಞಾನದ ಫಾನೆಮ್ 1186 ಸಿ ಮಾದರಿಯ "ಇನ್‌ಫ್ಯಾಂಟ್ ಇನ್‌ಕ್ಯೂಬೇಟರ್" ಯಂತ್ರವನ್ನು ದೇಣಿಗೆಯಾಗಿ ನೀಡಲಾಯಿತು.

ಈ ಇನ್‌ಕ್ಯೂಬೇಟರ್ ಯಂತ್ರ ನವಜಾತಶಿಶುಗಳ ತೀವ್ರನಿಗಾ ಘಟಕದಲ್ಲಿ ಬಳಕೆಯಾಗುತ್ತದೆ. ಅವಧಿಪೂರ್ವ ಜನಿಸಿದ ನವಜಾತ ಶಿಶುಗಳ ಅಂಗಾಂಗಗಳು ಬೆಳವಣಿಗೆ ಹೊಂದಲು ಶಿಶುಗಳನ್ನು ಈ ಇನ್‌ಕ್ಯೂಬೇಟರ್ ಯಂತ್ರದಲ್ಲಿ ಇಡಲಾಗುತ್ತದೆ. ಫಾನೆಮ್ 1186 ಸಿ ಮಾದರಿಯ ಈ ಇನ್‌ಫ್ಯಾಂಟ್ ಇನ್‌ಕ್ಯೂಬೇಟರ್ ಯಂತ್ರವು ನಿರ್ವಹಿಸಲು ಸರಳವಾಗಿದ್ದು ನಿಯಂತ್ರಿತ ಆಕ್ಸಿಜನ್ ವ್ಯವಸ್ಥೆಯನ್ನು ಹೊಂದಿದೆ. ಶಿಶುವಿನ ಹೃದಯ ಬಡಿತ, ನಾಡಿ ಬಡಿತ, ರಕ್ತದೊತ್ತಡ, ಇ.ಸಿ.ಜಿ, ದೇಹದ ಉಷ್ಣತೆ ಇತ್ಯಾದಿ ಮಾಹಿತಿಯನ್ನು ಪ್ರದರ್ಶಿಸಲು ಎಲ್.ಇ.ಡಿ ವ್ಯವಸ್ಥೆ ಇದೆ. ಅಗತ್ಯದ ಪ್ರಮಾಣದಷ್ಟು ಶಾಖ ಮತ್ತು ತೇವಾಂಶವನ್ನು ಒದಗಿಸುವ ಅನುಕೂಲವಿದೆ.

ಉಜ್ಜೀವನ ಬ್ಯಾಂಕ್‌ನ ಬೆಂಗಳೂರು ಕೇಂದ್ರ ಕಚೇರಿಯ ಸಿ.ಎಸ್.ಆರ್ ಹೆಡ್ ಕೆ.ಎಮ್.ತೌಫಿಕ್, ಸ್ಟೇಟ್ ಹೆಡ್ ರಾಘವೇಂದ್ರ ವಿ, ಉತ್ತರ ಕರ್ನಾಟಕ ಮತ್ತು ಗೋವಾ ಕ್ಷೇತ್ರದ ಏರಿಯಾ ಹೆಡ್ ಪ್ರವೀಣ ಮಟ್ಟಿಕಲ್ಲಿ ಮತ್ತು ಬಾಗಲಕೋಟೆ ಶಾಖಾ ವ್ಯವಸ್ಥಾಪಕ ತಿಮ್ಮಣ್ಣ ಮೇರಾಕರ್ ಅವರು ಹಾನಗಲ್ಲ ಶ್ರೀ ಕುಮಾರೇಶ್ವರ ಆಸ್ಪತ್ರೆಗೆ ಭೇಟಿ ನೀಡಿ ಈ ಯಂತ್ರವನ್ನು ಬಿ.ವಿ.ವಿ.ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಅವರಿಗೆ ಹಸ್ತಾಂತರಿಸಿದರು. ದೇಣಿಗೆ ಸ್ವೀಕರಿಸಿ ಮಾತನಾಡಿದ ಡಾ.ವೀರಣ್ಣ ಸಿ.ಚರಂತಿಮಠ,ಕಾರ್ಪೊರೇಟ್ ಸಂಸ್ಥೆಗಳು ಸಾಮಾಜಿಕ ಹೊಣೆಗಾರಿಕೆಗೆ ಆದ್ಯತೆ ನೀಡುತ್ತಿರುವುದು ಅಭಿನಂದನೀಯ. ಸಮಾಜದ ಪ್ರಗತಿ ಎನ್ನುವುದು ಹೊಣೆಗಾರಿಕೆಯಾದಾಗ ಅಲ್ಲಿ ಅಭಿವೃದ್ಧಿ ಸಾಧ್ಯವಾಗುತ್ತದೆ. ಉಜ್ಜೀವನ ಬ್ಯಾಂಕ್ ಕುಮಾರೇಶ್ವರ ಆಸ್ಪತ್ರೆಗೆ ಈ ಅತ್ಯಾಧುನಿಕ ವೈದ್ಯಕೀಯ ಉಪಕರಣವನ್ನು ದೇಣಿಯಾಗಿ ನೀಡಿ ತನ್ನ ಸಾಮಾಜಿಕ ಜವಾಬ್ದಾರಿ ಮತ್ತು ಕಾಳಜಿಯನ್ನು ಅರ್ಥಪೂರ್ಣವಾಗಿ ಅನಾವರಣಗೊಳಿಸಿದೆ. ಬ್ಯಾಂಕ್‌ನ ಈ ನೆರವನ್ನು ಸದ್ಬಳಕೆ ಮಾಡಿಕೊಳ್ಳಲಾಗುವುದು ಮತ್ತು ಸಹಕಾರವನ್ನು ಕೃತಜ್ಞತೆಯಿಂದ ಸ್ಮರಿಸುತ್ತೇವೆ ಎಂದು ಹೇಳಿದರು.

ಬಿ.ವಿ.ವಿ.ಸಂಘದ ಗೌರವ ಕಾರ್ಯದರ್ಶಿಗ ಮಹೇಶ ಎನ್. ಅಥಣಿ, ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಎಮ್.ಸಜ್ಜನ(ಬೇವೂರ),ಮೆಡಿಕಲ್ ಕಾಲೇಜಿನ ಪ್ರಾಚಾರ್ಯರಾದ ಡಾ.ಭುವನೇಶ್ವರಿ ಯಳಮಲಿ, ವೈದ್ಯಕೀಯ ಅಧೀಕ್ಷಕ ಡಾ.ಶ್ರೀರಾಮ ಕೋರಾ, ಬಿ.ವಿ.ವಿ ಸಂಘದ ಹಣಕಾಸು ಅಧಿಕಾರಿ ಅನಂತ ಓಂಕಾರ ಮತ್ತು ಆಸ್ಪತ್ರೆ ಹಾಗೂ ಬ್ಯಾಂಕ್ ಸಿಬ್ಬಂದಿ ಉಪಸ್ಥಿತರಿದ್ದರು.

# ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.8-ಎಸ್.ಎಸ್.ಎಲ್,ಸಿ ಮುಗಿಸಿದ ವಿದ್ಯಾರ್ಥಿಗಳಿಗೆ ಶ್ರೀಮತಿ. ಎಸ್. ಆರ್. ನಿರಾಣಿ ಸರಕಾರಿ ಪಾಲಿಟೆಕ್ನಿಕ್ ಬೀಳಗಿಯಲ್ಲಿ 2025-26 ನೇ ಸಾಲಿನ ಪ್ರಥಮ ಡಿಪ್ಲೋಮಾ ಕೋರ್ಸುಗಳಿಗೆ ಮೆರಿಟ್ ಹಾಗೂ ರೋಷ್ಟರ್ ಅನುಗುಣವಾಗಿ ಆಫ್‌ಲೈನ್ ಪ್ರವೇಶ ಅವಧಿಯನ್ನು ವಿಸ್ತರಿಸಿ ಪ್ರವೇಶಕ್ಕೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಕೆ ಏಪ್ರಿಲ್. 11 ರಿಂದ ಆರಂಭವಾಗಿದ್ದು, ಮೇ. 9 ಕೊನೆಯ ದಿನವಾಗಿದೆ. ಎಸ್.ಎಸ್.ಎಲ್,ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಕನಿಷ್ಠ 35% ಅಂಕ ಪಡೆದು ಉತ್ತೀರ್ಣರಾದವರು ಸಿವಿಲ್ ಇಂಜಿನಿಯರಿಂಗ್, ಕಂಪ್ಯೂಟರ್ ಸೈನ್ಸ್ ಇಂಜಿನಿಯರಿಂಗ್, ಎಲೆಕ್ಟ್ರಾನಿಕ್ಸ್ & ಕಮ್ಯೂನಿಕೇಶನ್, ಮೆಕ್ಯಾನಿಕಲ್ ಇಂಜಿನಿಯರಿಂಗ್ ಹೀಗೆ 4 ವಿಭಾಗಗಳಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ನಂ:8425200054,9980230949, 8123326842, 7795489203 ಸಂಪರ್ಕಿಸುವಂತೆ ಪಾಲಿಟೆಕ್ನಿಕ್ ಪ್ರಾಚಾರ್ಯ ಆರ್.ಪಿ.ರಜಪೂತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂದು (ಮೇ. 9) ಮಹಾರಾಣಾ ಪ್ರತಾಪ ಸಿಂಹ ಮೂರ್ತಿ ಪ್ರತಿಷ್ಠಾಪನೆ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದ ರಾಣಾ ಪ್ರತಾಪ ಸಿಂಹ ವೃತ್ತದಲ್ಲಿ ರಜಪೂತ ಸಮಾಜದವತಿಯಿಂದ ಶ್ರೀ ಮಹಾರಾಣಾ ಪ್ರತಾಪ ಸಿಂಹರ ಭವ್ಯ ಮೂರ್ತಿಯ ಪ್ರತಿಷ್ಠಾಪನೆ ಇಂದು ನಡೆಯಲಿದೆ. ಇದರ ಅಂಗವಾಗಿ ಮುಂಜಾನೆ 9:00 ಘಂಟೆಗೆ ಪಟ್ಟಣದ ರಜಪೂತ ಬಡಾವಣೆಯಲ್ಲಿರುವ ಶ್ರೀ ಅಂಬಾಭವಾನಿ ಮಂದಿರದಿಂದ ಮೂರ್ತಿಯ ಭವ್ಯ ಶೋಭಾಯಾತ್ರೆ ಸಕಲ ವಾದ್ಯ ಮೇಳಗಳೊಂದಿಗೆ ನಡೆಯುವುದು, ಈ ಕಾರ್ಯಕ್ರಮಕ್ಕೆ ಖಾಸ್ಗತೇಶ್ವರ ಮಠದ ಪರಮ ಪೂಜ್ಯ ಶ್ರೀ ಸಿದ್ಧಲಿಂಗದೇವರು,ಗುಂಡಕನಾಳದ ಗುರುಲಿಂಗ ಶಿವಾಚಾರ್ಯರು ಹಾಗೂ ಕೆಸರಟ್ಟಿಯ ಪೂಜ್ಯ ಶ್ರೀ ಸೋಮಲಿಂಗಮಹಾಸ್ವಾಮಿಗಳು ಚಾಲನೆ ನೀಡುವರು. ಅಲ್ಲಿಂದ ಶೋಭಾಯಾತ್ರೆ ಆರಂಭವಾಗಿ ಕತ್ರಿ ಬಜಾರ್, ಶಿವಾಜಿ ಸರ್ಕಲ್ ಮಾರ್ಗವಾಗಿ ಶ್ರೀ ಮಹಾರಾಣಾ ಪ್ರತಾಪ ಸಿಂಹ ವೃತ್ತಕ್ಕೆ ತಲುಪುವುದು ಅಲ್ಲಿ ಶ್ರೀ ಭೀಮಾಶಂಕರ ಗುರೂಜಿಯವರ ನೇತೃತ್ವದಲ್ಲಿ ಸಕಲ ಪೂಜಾ ವಿಧಿ ವಿಧಾನಗಳನ್ನು ನೆರವೇರಿಸಿದ ನಂತರ ಮೂರ್ತಿಯ ಪ್ರತಿಷ್ಠಾಪನೆ ಮಾಡಲಾಗುವುದು, ಈ ಕಾರ್ಯಕ್ರಮದಲ್ಲಿ ಎಲ್ಲ ಸಮಾಜದ ಗಣ್ಯರು ಹಿರಿಯರು ಭಾಗವಹಿಸಿ ಯಶಸ್ವಿಗೆ ಸಹಕರಿಸಬೇಕೆಂದು ರಜಪೂತ ಸಮಾಜದ ಅಧ್ಯಕ್ಷ ಹರಿಸಿಂಗ್ ಮೂಲಿಮನಿ,ಉಪಾಧ್ಯಕ್ಷ ರತನಸಿಂಗ್ ಕೊಕಟನೂರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಥಲಸ್ಸೇಮಿಯಾ ಸೊಸೈಟಿಯಿಂದ ರಕ್ತದಾನ ಶಿಬಿರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮೇ.8-ಬಿ.ವಿ.ವಿ ಸಂಘದ ಹಾನಗಲ್ಲ ಕುಮಾರೇಶ್ವರ ಆಸ್ಪತ್ರೆಯ ಥಲಸ್ಸೇಮಿಯಾ ಮತ್ತು ಹೆಮೋಫಿಲಿಯಾ ಸೊಸೈಟಿಯಿಂದ 'ವಿಶ್ವ ಥಲಸ್ಸೇಮಿಯಾ ದಿನ'ದ ಪ್ರಯುಕ್ತ ಗುರುವಾರ ರಕ್ತದಾನ ಶಿಬಿರವನ್ನು ಆಯೋಜಿಸಲಾಗಿತ್ತು.

ಬಿ.ವಿ.ವಿ ಸಂಘದ ಹೊಮಿಯೋಪತಿ ಕಾಲೇಜಿನಲ್ಲಿ ಆಯೋಜಿಸಲಾದ ರಕ್ತದಾನ ಶಿಬಿರದಲ್ಲಿ ಸುಮಾರು 250 ವಿದ್ಯಾರ್ಥಿಗಳು ರಕ್ತದಾನ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಎಸ್.ನಿಜಲಿಂಗಪ್ಪ ವೈದ್ಯಕೀಯ ಕಾಲೇಜಿನ ಚಿಕ್ಕಮಕ್ಕಳ ವಿಭಾಗದ ಮುಖ್ಯಸ್ಥ ಡಾ.ಅಶೋಕ ಬಡಕಲಿ, 'ಥಲಸ್ಸೇಮಿಯಾ ಕಾಯಿಲೆಯಿಂದ ಬಳಲುತ್ತಿರುವ ಮಕ್ಕಳಿಗೆ ನಿಯಮಿತವಾಗಿ ರಕ್ತದ ಅವಶ್ಯಕತೆ ಇರುತ್ತದೆ. ಬಡಕುಟುಂಬಗಳಿಗೆ ಚಿಕಿತ್ಸೆ ಮತ್ತು ರಕ್ತದ ವೆಚ್ಚ ಭರಿಸಲು ಆರ್ಥಿಕವಾಗಿ ತೊಂದರೆಯಾಗುತ್ತದೆ. ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ನೆರವಾಗುವ ಉದ್ದೇಶದಿಂದ ಹಾನಗಲ್ಲ ಶ್ರೀ ಕುಮಾರೇಶ್ವರ ಆಸ್ಪತ್ರೆಯಲ್ಲಿ ಥಲಸ್ಸೇಮಿಯಾ ಮತ್ತು ಹೆಮೋಫಿಲಿಯಾ ಸೊಸೈಟಿಯನ್ನು ಸ್ಥಾಪಿಸಿ ಉಚಿತವಾಗಿ ರಕ್ತ ಹಾಗೂ ಚಿಕಿತ್ಸೆಯನ್ನು ನೀಡಲಾಗುತ್ತಿದೆ ಎಂದರು.

ವಿಶ್ವ ಥಲಸ್ಸೇಮಿಯಾ ದಿನದ ಅಂಗವಾಗಿ ಆಯೋಜಿಸಿರುವ ಈ ರಕ್ತದಾನ ಶಿಬಿರದಲ್ಲಿ ಹೊಮಿಯೋಪತಿ ಕಾಲೇಜಿನ ವಿದ್ಯಾರ್ಥಿಗಳು ಸ್ವಯಂ ಪ್ರೇರಿತರಾಗಿ ಬಂದು ರಕ್ತದಾನ ಮಾಡಿರುವುದು ಅಭಿನಂದನಾರ್ಹವಾಗಿದೆ. ಸಾರ್ವಜನಿಕರು ಸ್ವಯಂಪ್ರೇರಿತರಾಗಿ ಮುಂದೆ ಬಂದು ರಕ್ತದಾನ ಮಾಡಿದರೆ ಥಲಸ್ಸೇಮಿಯಾ ಕಾಯಿಲೆಯಿಂದ ಬಳಲುತ್ತಿರುವ ಮಕ್ಕಳ ರಕ್ತದ ಅವಶ್ಯಕತೆಯನ್ನು ಪೂರೈಸುವುದು ಸುಲಭ ಸಾಧ್ಯವಾಗುತ್ತದೆ ಎಂದು ಅವರು ಹೇಳಿದರು.

ರಕ್ತದಾನ ಶಿಬಿರದಲ್ಲಿ ಹೊಮಿಯೋಪತಿ ಕಾಲೇಜಿನ ಪ್ರಾಚಾರ್ಯ ಡಾ.ಅರುಣ ಹೂಲಿ, ಪ್ರಾಧ್ಯಾಪಕ ಡಾ.ರವಿ ಕೊಟೆಣ್ಣವರ, ಹಾನಗಲ್ಲ ಶ್ರೀ ಕುಮಾರೇಶ್ವರ ಆಸ್ಪತ್ರೆಯ ಚಿಕ್ಕಮಕ್ಕಳ ವಿಭಾಗದ ಡಾ.ಅರುಣ ಕಟ್ಟಿ, ಕುಮಾರೇಶ್ವರ ಆಸ್ಪತ್ರೆಯ ರಕ್ತಭಂಡಾರದ ವೈದ್ಯಾಧಿಕಾರಿ ಡಾ.ಕೇಶವ ಕುಲಕರ್ಣಿ ಮತ್ತು ಸಿಬ್ಬಂದಿ ಭಾಗವಹಿಸಿದ್ದರು.

# ಶಾಂಭವಿ ದೇವಿ ಜಾತ್ರೆ ಉತ್ತರೋತ್ತರವಾಗಿ ಬೆಳೆಯಲಿ: ಅಭಿನವ ಶ್ರೀ ಗವಿಸಿದ್ದೇಶ್ವರ ಸ್ವಾಮೀಜಿ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ರಥೋತ್ಸವಕ್ಕೆ ಬಂದ ಜನ ನೋಡಿದರೇ ನಿಮ್ಮ ಜಾತ್ರೆ ದೊಡ್ಡದು, ನಮ್ಮದೇ ಸಣ್ಣದು ಅನಿಸುತ್ತೆ. ಇಲ್ಲಿಯ ಜನರ ಭಕ್ತಿ, ಶ್ರದ್ಧೆ ಮತ್ತು ಉತ್ಸಾಹ ಯಾವ ಮಟ್ಟದಲ್ಲಿ ಇರುತ್ತದೆ ಎಂಬುದಕ್ಕೆ ಶಾಂಭವಿ ದೇವಿಯ ಮಹಾ ರಥೋತ್ಸವವೇ ಸಾಕ್ಷಿ ಎಂದು ಕೊಪ್ಪಳದ ಗವಿಮಠದ ಅಭಿನವ ಶ್ರೀ ಗವಿಸಿದ್ಧೇಶ್ವರ ಸ್ವಾಮೀಜಿ ಆರ್ಶೀವಚನ ನೀಡಿದರು.

ತಾಲೂಕಿನ ಹಲಗೇರಿ ಗ್ರಾಮದ ಶ್ರೀ ಶಾಂಭವಿ ದೇವಿ ಮಹಾರೋತ್ಸವಕ್ಕೆ ಗುರುವಾರ ಚಾಲನೆ ನೀಡಿ, ಮಾತನಾಡಿದರು.

ಒಂದು ಊರಾಗ ಬಹಳ ಜನ ಶ್ರೀಮಂತರು ಇದ್ದಾರೆ ಅಂದರೇ ಅದು ನಿಜವಾದ ವೈಭವ ಅಲ್ಲ. ಯಾವ ಊರಲ್ಲಿ ಜಾತಿ-ಪಕ್ಷ ಎಲ್ಲವನ್ನೂ ಮರೆತು ಹಿರಿಯರು-ಯುವಕರು ಊರಿನ ಹಿತಕ್ಕಾಗಿ ಹೆಗಲಿಗೆ ಹೆಗಲು ಕೊಟ್ಟು ದುಡಿಯುತ್ತಾರೋ ಅವರೇ ನಿಜವಾದ ಶ್ರೀಮಂತರು. ಹಿರಿಯರ ಮಾರ್ಗದರ್ಶನದಲ್ಲಿ ಯುವಕರು ಅತ್ಯಂತ ಉತ್ಸಾಹ ಮತ್ತು ಭಕ್ತಿಯಿಂದ ಜಾತ್ರೆ ಯಶಸ್ಸಿಗೆ ದುಡಿಯುತ್ತಾ ಇದ್ದಾರೆ. ಹೀಗೆ ಶಾಂಭವಿ ದೇವಿ ಜಾತ್ರೆ ಉತ್ತರೋತ್ತರವಾಗಿ ಬೆಳೆಯಲಿ ಎಂದರು.



ಹಿರೇಸಿಂದೋಗಿಯ ಕಪ್ಪತ್ತೇಶ್ವರ ಮಠದ ಜಗದ್ಗುರು ಚಿದಾನಂದ ಸ್ವಾಮೀಜಿ, ಬಿಕನಳ್ಳಿ-ಮೈನಳ್ಳಿಯ ಉಜ್ಜನಿಯ ಶಾಖಾಮಠದ ಸಿದ್ದೇಶ್ವರ ಶಿವಾಚಾರ್ಯ ಸ್ವಾಮೀಜಿ, ಬೆದವಟ್ಟಿ ಪಟ್ಟಾಧ್ಯಕ್ಷ ಶಿವಸಂಗಮೇಶ್ವರ ಶಿವಾಚಾರ್ಯ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಿದ್ದರು.

ಈ ವೇಳೆ ಶಾಂಭವಿ ದೇವಿ ಸೇವಾ ಸಮಿತಿ ಉಪಾಧ್ಯಕ್ಷರಾದ ಕುಬೇರಪ್ಪ ಗೊರವರ್, ಬಿಜೆಪಿ ಮುಖಂಡರಾದ ಬಸವರಾಜ ಕ್ಯಾವಟರ್, ಮಹಾಂತೇಶ ಮೈನಳ್ಳಿ, ಸೇವಾ ಸಮಿತಿ ನಿರ್ದೇಶಕರಾದ ಗವಿಸಿದ್ದನಗೌಡ ಪಾಟೀಲ್, ಬಸನಗೌಡ ಪಾಟೀಲ್, ಶಂಭುಲಿಂಗನೌಡ ಪಾಟೀಲ್, ಮಂಜುನಾಥ ಮ್ಯಾಗಳಮನಿ, ಶರಣಪ್ಪ ಬಿನ್ನಾಳ, ಹನುಮಂತ ಹಳ್ಳಿಕೇರಿ, ರಾಜುಗೌಡ ಪಾಟೀಲ್, ದೇವೇಂದ್ರಪ್ಪ ಅಬ್ಬಿಗೇರಿ, ದೇವಪ್ಪ ಓಜನಹಳ್ಳಿ, ನಾಗರಾಜ ಪಾಲಂಕರ, ಗ್ರಾಪಂ ಅಧ್ಯಕ್ಷ ಯಲ್ಲಪ್ಪ ಓಜನಹಳ್ಳಿ, ಹಲಗೇರಿ ಗ್ರಾಪಂ ಪಿಡಿಓ ಅಶೋಕ ರಾಂಪುರ, ದೇವೇಂದ್ರಪ್ಪ ಬಡಿಗೇರ, ಮುಖಂಡರಾದ ವರುಣಕುಮಾರ ನಿಟ್ಟಾಲಿ ಸೇರಿದಂತೆ ಇತರರಿದ್ದರು.

# ಗರ್ಭಿಣಿಯರಲ್ಲಿ ಪಾದಗಳ ಬಾವು ಅಪಾಯಕಾರಿ, ನಿರ್ಲಕ್ಷಿಸದೇ ಚಿಕಿತ್ಸೆ ನೀಡಲು ವೈದ್ಯರು ಕ್ರಮವಹಿಸಿ: ಡಿಹೆಚ್‌ಓ ಡಾ.ಯಲ್ಲಾ ರಮೇಶಬಾಬು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮೇ 08-ಗರ್ಭಿಣಿ ಮಹಿಳೆಯರಲ್ಲಿ ಪಾದಗಳ ಬಾವು ಅಪಾಯಕಾರಿಯಾಗಿದ್ದು,ಸಕಾಲಕ್ಕೆ ಅವರಿಗೆ ಮಾಡಿಸಬೇಕಾದ ತಪಾಸಣೆ ಹಾಗೂ ಚಿಕಿತ್ಸೆಯನ್ನು ತಡಮಾಡದಂತೆ ವೈದ್ಯರು ಕ್ರಮವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶಬಾಬು ಅವರು ಹೇಳಿದರು.

ಕುರುಗೋಡು ತಾಲ್ಲೂಕಿನ ಕೊಳಗಲ್ಲು ಗ್ರಾಮದ ಆಯುಷ್ಮಾನ್ ಆರೋಗ್ಯ ಮಂದಿರದಲ್ಲಿ ಜರುಗಿದ ಸಾರ್ವತ್ರಿಕ ಲಸಿಕಾ ಕಾರ್ಯಕ್ರಮದಡಿ ಮಕ್ಕಳಿಗೆ ಲಸಿಕೆ ಹಾಕಿಸಲು ಆಗಮಿಸಿದ ತಾಯಂದಿರು ಹಾಗೂ ಟಿಡಿ ಚುಚ್ಚುಮದ್ದು ಪಡೆಯಲು ಆಗಮಿಸಿದ ಗರ್ಭಿಣಿಯರೊಂದಿಗೆ ಆರೋಗ್ಯ ವಿಚಾರಿಸಿ ಮಾತನಾಡಿದರು.

ಗಂಡಾಂತರ ಗರ್ಭಿಣಿಯರು ಎಂದು ಗುರ್ತಿಸಿದ ನಂತರ ಅವರ ನಿರಂತರ ನಿಗಾವಣೆಯಲ್ಲಿರಿಸಬೇಕು. ಒಂದು ವೇಳೆ ರಕ್ತದೊತ್ತಡ ಪರೀಕ್ಷೆ ಕೈಗೊಂಡ ನಂತರ ಕಂಡು ಬರುವ ವ್ಯತ್ಯಾಸವನ್ನು ಉಪಕೇಂದ್ರ, ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಪರಿಶೀಲಿಸಬೇಕು ಎಂದರು.

ರಕ್ತಹೀನತೆ ಕಂಡುಬಂದಲ್ಲಿ ಸ್ಥಳೀಯವಾಗಿ ನೀಡುವ ಚಿಕಿತ್ಸೆಯಿಂದ ( ಐಎಫ್‌ಎ ಮಾತ್ರೆ, ಐರನ್ ಸುಕ್ರೋಸ್, ರಕ್ತ ಹಾಕಿಸುವಿಕೆ) ಸುಧಾರಣೆಯಾಗದಿದ್ದಲ್ಲಿ ತಜ್ಞರ ಬಳಿ ತಪ್ಪದೆ ಕಳುಹಿಸಬೇಕು. ಅಗತ್ಯವಿದ್ದಲ್ಲಿ ಸ್ಕ್ಯಾನ್ ಮಾಡಿಸಬೇಕು ಎಂದು ಸೂಚಿಸಿದರು.

ಮೊದಲ ಹೆರಿಗೆ ಶಸ್ತ್ರಚಿಕಿತ್ಸೆ ಮೂಲಕವಾದಲ್ಲಿ ಪುನಃ ಗರ್ಭಿಣಿಯಾಗುವ ಅವಧಿಯನ್ನು ಕನಿಷ್ಟ 3 ವರ್ಷಕ್ಕೆ ಕಡ್ಡಾಯವಾಗಿ ಮುಂದೂಡಬೇಕು. ಇದಕ್ಕಾಗಿ ಅಂತರ ಚುಚ್ಚುಮದ್ದು, ಕಾಪರ-ಟಿ, ನೀರೊಧ ಕುರಿತು ಆರೋಗ್ಯ ಶಿಕ್ಷಣ ನೀಡಲು ಮರೆಯಬಾರದು. ಅತಿ ಮುಖ್ಯವಾಗಿ ಗರ್ಭಿಣಿಗೆ ಮೇಲ್ಮಟ್ಟದ ಆಸ್ಪತ್ರೆಗೆ ರೇಫರ್ ಮಾಡುವಾಗ 108 ಆರೋಗ್ಯ ಕವಚ ಬರುವ ಸಮಯ ತಡವಾಗುವ ಸಾಧ್ಯತೆ ಇದ್ದಲ್ಲಿ ತಕ್ಷಣೇ ವೈದ್ಯಾಧಿಕಾರಿಗಳು ಪರ್ಯಾಯ ಸಾರಿಗೆ ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದರು.

ರಕ್ತಹೀನತೆ ಎಂದು ಕಂಡು ಬಂದಲ್ಲಿ ಐರನ್ ಸುಕ್ರೋಸ್ 200 ಮಿಲಿ ಗ್ರಾಂ ಪ್ರತಿ ಮೂರು ದಿನಕ್ಕೊಮ್ಮೆ 05 ಇಂಜಕ್ಷನ್ ಕೊಡಿಸಬೇಕು. ವೈದ್ಯಾಧಿಕಾರಿಗಳು ತಮ್ಮ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯರಿಗೆ ಗಂಡಾಂತರ ಗರ್ಭಿಣಿಯರ ಮನೆ ಭೇಟಿ ಹಾಗೂ ಆರೋಗ್ಯದ ಸ್ಥಿತಿ ಕುರಿತು ಪ್ರತಿವಾರ ಚರ್ಚಿಸಬೇಕು ಎಂದರು.

ಹೆರಿಗೆ ವಿಷಯವನ್ನು ಆದ್ಯತೆ ಇಟ್ಟುಕೊಂಡು ಸ್ಥಳೀಯ ಗ್ರಾಮ ಪಂಚಾಯತ ಅಧ್ಯಕ್ಷರು ಹಾಗೂ ಸದಸ್ಯರೊಂದಿಗೆ ಸಮನ್ವಯ ಸಭೆ ಕೈಗೊಳ್ಳಬೇಕು. ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಹೆರಿಗೆಗೆ ಗರ್ಭಿಣಿ ಬಂದಾಗ ಅಗತ್ಯ ಪರೀಕ್ಷೆ ಮೂಲಕ ಹೆರಿಗೆ ನಿರ್ವಹಿಸಬೇಕು ಎಂದು ಹೇಳಿದರು.

ಗಂಭೀರತೆ ಕಂಡುಬಂದರೆ ತಡ ಮಾಡದೆ ಸಿಬ್ಬಂದಿ ಸಹಿತ ರೇಫರ್ ಮಾಡುವುದನ್ನು ಮರೆಯಬಾರದು. ಧಾರ್ಮಿಕ ಸ್ಥಳಗಳಿಗೆ ಗರ್ಭಿಣಿಯರು ತಮ್ಮ ಆರೋಗ್ಯ ಸಮಸ್ಯೆಗಳಿಗೆ ಪದೇ ಪದೇ ಭೇಟಿ ನೀಡುತ್ತಿದ್ದರೆ, ಅಂತ ಧಾರ್ಮಿಕ ಕೇಂದ್ರಗಳಿಗೆ ಭೇಟಿ ಮಾಡಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯಲು ಸೂಚಿಸುವಂತೆ ತಪ್ಪದೇ ವಿನಂತಿಸಬೇಕು ಎಂದು ಜಿಲ್ಲಾ ಆರೋಗ್ಯಾಧಿಕಾರಿಗಳು ಹೇಳಿದರು.

ಆಕಸ್ಮಿಕ ಘಟನೆಗಳಲ್ಲಿ ಗರ್ಭಿಣಿಯರ ಆರೈಕೆಗೆ ಯಾರು ಇಲ್ಲದಿದ್ದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಗೆ ಮಾಹಿತಿ ತಿಳಿಸಿ ಆರೈಕೆ ಕೇಂದ್ರಕ್ಕೆ ಕಳುಹಿಸಬೇಕು. ಹಬ್ಬ, ಜಾತ್ರೆ, ಊರ ದೇವರ ಪೂಜೆ, ಮುಂತಾದ ಆಚರಣೆ-ಯ ಮಾಡುವಾಗ ಗರ್ಭಿಣಿಯ ಸಕಾಲದಲ್ಲಿ ಆಗಬೇಕಾದ ತಪಾಸಣೆಗೆ ಅಡಚಣೆಯಾಗದಂತೆ ಪಾಲಕರ ಮನವೊಲಿಸಲು ಮೊದಲ ಆದ್ಯತೆ ನೀಡಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಿದ್ದಮ್ಮನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ದಿವ್ಯಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಸಮುದಾಯ ಆರೋಗ್ಯ ಅಧಿಕಾರಿ ರ್ರಿಸ್ವಾಮಿ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ವಿಜಯ ಫ್ಲಾರೆನ್ಸ್, ಆರೋಗ್ಯ ನಿರೀಕ್ಷಣಾಧಿಕಾರಿ ಶ್ವೇತಾ ಸೇರಿದಂತೆ ಆಶಾ ಕಾರ್ಯಕರ್ತೆಯರು, ತಾಯಂದಿರು ಉಪಸ್ಥಿತರಿದ್ದರು.

# ಶೈಕ್ಷಣಿಕ ಕ್ಷೇತ್ರದ ಪ್ರಗತಿಗೆ ಪುಸ್ತಕ ಗೂಡು ಸಹಕಾರಿ:ಜಿಪಂ. ಸಿಇಒ ಡಾ. ಗಿರೀಶ ಬದೋಲೆ






ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಮೇ. 8: ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಶೈಕ್ಷಣಿಕ ಕ್ಷೇತ್ರದ ಪ್ರಗತಿಗೆ ಪುಸ್ತಕ ಗೂಡುಗ್ರಂಥಾಲಯಸಹಕಾರಿಯಾಗಿದೆ ಎಂದು ಜಿಪಂ. ಸಿಇಒ ಡಾ. ಗಿರೀಶ ಬದೋಲೆ ಹೇಳಿದರು.

ತಾಲೂಕಿನಧುಮ್ಮನಸೂರಗ್ರಾಮದ ಬಸವೇಶ್ವರ ವೃತ್ತದ ಹತ್ತಿರ ಗ್ರಾಮ ಪಂಚಾಯತ್‌ವತಿಯಿಂದಗುರುವಾರ ನಡೆದ ನೂತನ ಪುಸ್ತಕ ಗೂಡು ಉದ್ಘಾಟಿಸಿ ಮಾತನಾಡಿದರು

ಗ್ರಾಮೀಣಜನರಲ್ಲಿಓದುವಹವ್ಯಾಸ ಬೆಳೆಸುವ ಮೂಲಕ ಅಕ್ಷರ ಕ್ರಾಂತಿಗೆ ನಾಂದಿ ಹಾಡಿರುವ ಪಂಚಾಯತ್ ರಾಜ್ ಇಲಾಖೆಯು ಪುಸ್ತಕಗೂಡು ಸ್ಥಾಪನೆಯ ಮೂಲಕ ಗ್ರಾಮೀಣ ಪ್ರದೇಶಗಳಲ್ಲಿ ಓದುವ ಅಭಿರುಚಿ ಬೆಳೆಸುತ್ತಿದೆ ಎಂದರು.

ಧುಮ್ಮನಸೂರಗ್ರಾಮಪಂಚಾಯತ್ ವ್ಯಾಪ್ತಿಯಲ್ಲಿಗ್ರಾಪಂ.ಅಧ್ಯಕ್ಷವೀರಪ್ಪ ಅವರ ನೇತೃತ್ವದಲ್ಲಿ ನೂತನ ಪುಸ್ತಕ ಗೂಡು ತೆರೆಯಲಾಗಿದೆ. ಹೀಗಾಗಿ ಸ್ಥಳೀಯ ವಿದ್ಯಾರ್ಥಿಗಳು ಇದರ ಸದುಪಯೋಗ ಪಡೆದುಕೊಂಡು ಉತ್ತಮ ಭವಿಷ್ಯ ಕಟ್ಟಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಗ್ರಾಪಂ.ಅಧ್ಯಕ್ಷವೀರಪ್ಪಧುಮ್ಮನಸೂರ ಮಾತನಾಡಿ,ಧುಮ್ಮನಸೂರಗ್ರಾಮದ ಕೆರೆನಿರ್ಮಾಣ ಕಾರ್ಯ ಅರ್ಧದಷ್ಟು ಕಾರ್ಯ ಮುಗಿದಿದೆ. ಇನ್ನೂಳಿದ ಅಭಿವೃದ್ಧಿ ಕಾರ್ಯಕ್ಕೆಜಿಪಂ.ಹಾಗೂ ತಾಪಂ. ವತಿಯಿಂದ ಸಹಕಾರ ನೀಡಬೇಕು ಎಂದು ಮನವಿ ಮಾಡಿದರು.

ಬಳಿಕ ಜಿಪಂ. ಸಿಇಒ ಡಾ. ಗಿರೀಶ ಬದೋಲೆ ಮತ್ತು ತಾಪಂ. ಇಒ ದೀಪಿಕಾ ನಾಯ್ಕರ್ ಧುಮ್ಮನಸೂರ ಕೆರೆ ವೀಕ್ಷಿಸಿ ಕೆರೆಯ ಸಮಗ್ರ ಅಭಿವೃದ್ಧಿಗೆ ಪೂರಕವಾಗಿಸಹಕಾರನೀಡಲಾಗುವುದು ಎಂದು ಭರವಸೆ ನೀಡಿದರು. ನಂತರ ಧುಮ್ಮನಸೂರ ಗ್ರಾಮದ ಹೊರ ವಲಯದಲ್ಲಿ ನಡೆಯುತ್ತಿರುವ ಸ್ಥಳಕ್ಕೆ ಭೇಟಿ ನೀಡಿ ನರೇಗಾ ಯೋಜನೆ ಕಾರ್ಮಿಕರಿಗೆ ಆರೋಗ್ಯ ಕಿಟ್ ವಿತರಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ತಾಪಂ. ಇಒ ದೀಪಿಕಾ ನಾಯ್ಕರ್, ಗ್ರಾಪಂ. ಪಿಡಿಒ ಮಲ್ಲಿಕಾರ್ಜುನ್ ಸಾಗರ್, ಪಿಡಿಒ ರಾಜಶೇಖರ ಬುಳ್ಳಾ, ಗ್ರಾಪಂ. ಉಪಾಧ್ಯಕ್ಷೆ ಲಕ್ಷ್ಮಿಬಾಯಿ ಸಂಗೋಳಗಿ, ಇಂದುಮತಿ ಮೇಟ್ಕರ್, ರುಕ್ಸಾರಬೇಗಂಮಸ್ತಾನ, ಶಾಂತಬಾಯಿ ಮಾಣಿಕ, ಅರುಣಕುಮಾರ ಭಮಶಟ್ಟಿ, ಬಸವಣಪ್ಪ ಶೇರಿಕಾರ, ಓಂಪ್ರಕಾಶ ಖಂಡ್ರೆ, ರಾಜಕುಮಾರ ಚವ್ಹಾಣ, ಸಾವನ ಜವಾನ, ಬ್ರಹ್ಮಾನಂದ, ಮಾಣಿಕ ಹುಚ್ಚೆನೋರ್, ವೈಜಿನಾಥ ಭಡಸಿಂಗಿ, ಗಂಗಶ್ರೀ ಮೇತ್ರಿ ಸೇರಿ ಅನೇಕರಿದ್ದರು.

# ನಾಡಿಗೆ ಅನ್ನ ಹಾಕುವ ರೈತರಿಗೆ ಮಳೆ ಬೆಳೆ ಸಮೃದ್ಧಿಯಾಗಲಿ :ಉಜ್ಜಯಿನಿ ಜಗದ್ಗುರುಗಳು



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಮೇ.8: ತಾಲ್ಲೂಕಿನ ಕವಲೂರು ಗ್ರಾಮದಲ್ಲಿ ಉಜ್ಜಯಿನಿ ಮಹಾಪೀಠದಸಿದ್ದಲಿಂಗರಾಜದೇಶೀಕೇಂದ್ರ ಶಿವಾಚಾರ್ಯ ಸ್ವಾಮೀಜಿಯವರ ಅಡ್ಡಪಲ್ಲಕ್ಕಿ ಮಹೋತ್ಸವ ಅದ್ದೂ–ರಿಯಾಗಿ ನೆರವೇರಿತು.

ವಿವಿಧ ಅಲಂಕಾರಿಕ ಹೂಗಳಿಂದ ಹಾಗೂ ವಸ್ತುಗಳಿಂದ ಸಿಂಗಾರಿಸಿ, ಅಲಂಕೃತಗೊಂಡ ಅಡ್ಡಪಲ್ಲಕ್ಕಿಯಲ್ಲಿ ಸಿದ್ದಲಿಂಗ ರಾಜದೇಶೀಕೇಂದ್ರ ಶಿವಾಚಾರ್ಯರ ಅಡ್ಡಪಲ್ಲಕ್ಕಿ ಉತ್ಸವ ಜರುಗಿತು. ಅಡ್ಡಪಲ್ಲಕ್ಕಿ ಮಹೋತ್ಸವದಲ್ಲಿ ಮಹಿಳೆಯರು ಕುಂಭ ಹಾಗೂ ಕಳಸ ಹೊತ್ತು ಸಾಗಿದರು. ನಂದಿಕೋಲು, ಡೊಳ್ಳಿನ ಮೇಳ ಹಾಗೂ ಭಜನಾ ಮಂಡಳಿ ಭಕ್ತಿ ಗೀತೆಗಳು ಅಡ್ಡಪಲ್ಲಕ್ಕಿ ಉತ್ಸವಕ್ಕೆ ಮೆರುಗು ನೀಡಿತು.

ಗ್ರಾಮದ ಮಾರುತೇಶ್ವರ ದೇವಸ್ಥಾನದಿಂದ ಪ್ರಾರಂಭವಾದ ಅಡ್ಡಪಲ್ಲಕ್ಕಿ ಮಹೋತ್ಸವ ಗ್ರಾಮದ ರಾಜ ಬೀದಿಗಳಲ್ಲಿ ಸಂಚರಿಸಿ ನಂತರ ದುರ್ಗಾದೇವಿ ದೇವಸ್ಥಾನಕ್ಕೆತಲುಪಿತು. ಗ್ರಾಮವನ್ನು ತಳಿರು ಹಾಗೂ ತೆ–ೂರಣ ಕಟ್ಟಿ ಸಿಂಗರಿಸಲಾಗಿತ್ತು.

ಭವ್ಯ ಮೆರವಣಿಗೆಯೊಂದಿಗೆ ಧರ್ಮಸಭೆಗೆ ಆಗಮಿಸಿದರು ಧರ್ಮ ಸಭೆ ಕುರಿತು ಪ್ರಾಸ್ತಾವಿಕವಾಗಿ ಮಾತನಾಡಿದ ಅಳವಂಡಿಯ ಮರುಳಾರಾಧ್ಯ ಶಿವಾಚಾರ್ಯ ಸ್ವಾಮೀಜಿಯವರು ಮಾತನಾಡಿ ಸರ್ವ ಧರ್ಮದವರು ಕೂಡಿ–ಕೊಂಡು ಧರ್ಮದ ಕಾರ್ಯವನ್ನು ಮಾಡುವುದರಿಂದ ಊರಿನ ಸಿರಿ ಸಂಪತ್ತು ಹೆಚ್ಚುತ್ತದೆ. ಉಜ್ಜಯಿನಿ ಜಗದ್ಗುರುಗಳು ಪಾದವಿಟ್ಟ ಕಡೆ ಆ ಪ್ರದೇಶ ವರ್ಷ ವೀಡಿ ಮಳೆಬೆಳೆಯು ಸಂಪನ್ನವಾಗಿ ಸಂಪತ್ತಭರಿತವಾಗುತ್ತದೆ. ಕವಲೂರು ಗ್ರಾಮವು ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಯಿತು.

ಗುರುವಿನ ಸೇವೆ ಮಾಡುವುದರಿಂದ ನಮ್ಮಲ್ಲಿರುವದುಶ್ಚಟಗಳುದೂರವಾಗುತ್ತವೆ ಎಂದರು.

ಕಾರ್ಯಕ್ರಮದದಿವ್ಯಸಾನಿಧ್ಯವಹಿಸಿದ್ದ ಉಜ್ಜಯಿನಿ ಮಹಾಪೀಠದ ಸಿದ್ದಲಿಂಗ ರಾಜದೇಶೀಕೇಂದ್ರ ಶಿವಾಚಾರ್ಯ ಸ್ವಾಮೀಜಿಯವರು ಮಾತನಾಡಿ ನಾವೆಲ್ಲಾ ಭಾರತ ಮಾತೆಯ ಮಕ್ಕಳು. ನಮ್ಮಲ್ಲಿ ಇಂದಿಗೂ ವಿಶೇಷ ಸಂಸ್ಕೃತಿ ಆಚರಣೆ ಪದ್ಧತಿಗಳು ರೂಢಿಯಲ್ಲಿವೆ. ಹೆಣ್ಣು ಮತ್ತು ಭೂಮಿಯನ್ನು ತಾಯಿಗೆ ಹೋಲಿಸಿ ಗೌರವಿಸುವ ಏಕೈಕ ರಾಷ್ಟ್ರ ನಮ್ಮ ಭಾರತ. ವಿಜ್ಞಾನ ತಂತ್ರಜ್ಞಾನ ಎಷ್ಟೇ ಬೆಳೆದರು ಈ ನಾಡಿಗೆ ಅನ್ನ ನೀಡುವ ಶಕ್ತಿ ರೈತರಿಗೆ ಮಾತ್ರ ಇರುವುದು. ಎಲ್ಲರೂ ದುಶ್ಚಟಗಳಿಂದ ದೂರವಿದ್ದು ಸಂಸ್ಕಾರಯುತ ಬದುಕು ಕಟ್ಟಿಕೊಂಡು ಹೆಣ್ಣುಮಕ್ಕಳನ್ನು ಗೌರವಿಸಿ ಮನೆಯಲ್ಲಿ ನೆಮ್ಮದಿ ಸಿರಿ ಸಂಪತ್ತು ನೆಲೆಸುತ್ತದೆ. ಮಂಗಳ ವಾದ್ಯ ಬಳಗದೊಂದಿಗಿನ ಭವ್ಯ ಮೆರವಣಿಗೆ ಹಾಗೂ ಉತ್ಸವ ನಮಗೆ ಸಂತಸ ತಂದಿದ್ದು ನಾಡಿಗೆ ಅನ್ನ ಹಾಕುವ ರೈತರಿಗೆ ಮಳೆ ಬೆಳೆ ಸಮೃದ್ಧಿಯಾಗಲೆಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಶ್ರೀ ದುರ್ಗಾದೇವಿ ಟ್ರಸ್ಟ ಕಮಿಟಿಯ ವತಿಯಿಂದ ಹಾಗೂ ಕವಲೂರು ಗ್ರಾಮದ ಹಿರಿಯರಿಂದ ಉಜ್ಜಯಿನಿ ಜಗದ್ಗುರುವಿಗೆ ವಿಶೇಷ ಉಡುಗೊರೆ ಗೌರವಗಳೊಂದಿಗೆ ಸನ್ಮಾನಿಸಲಾಯಿತು.

ಇದೇ ವೇಳೆ ಮೈನಹಳ್ಳಿ ಬಿಕನಳ್ಳಿಯ ಸಿದ್ದೇಶ್ವರ ಶಿವಾಚಾರ್ಯ

ಸ್ವಾಮೀಜಿ, ಕುಕನೂರಿನ ಮಹಾದೇವ ಸ್ವಾಮೀಜಿ, ಶ್ರೀಬಸವಲಿಂಗೇಶ್ವರ ಶಿವಾಚಾರ್ಯರು ಯಲಬುರ್ಗಾ, ಶ್ರೀ ಹಾಲಸೋಮೇಶ್ವರಪೂಜ್ಯರು, ಪ್ರಮುಖರಾದ ಪ್ರದೀಪ್ ಗೌಡ ಮಾಲಿಪಾಟೀಲ, ಬಸವನಗೌಡ, ಗುರುಮೂರ್ತಿಸ್ವಾಮಿ ಇನಾಮದಾರ,

ಮನೋಹರ ದೇಸಾಯಿ, ಸಿದ್ದಲಿಂಗಸ್ವಾಮಿ, ತಿಪ್ಪಣ್ಣ, ಹೊನ್ನಕೇರಪ್ಪ, ಮುತ್ತಣ್ಣ, ಮಹಾಂತೇಶ, ಶರಣಪ್ಪ, ಗವಿಸಿದ್ದಯ್ಯ, ವಿರೇಶ ಕೂಗು, ಸುರೇಶ್ ಬಾಬು ಹಾಗೂ ದುರ್ಗಾದೇವಿ ಸಮಿತಿಯವರು, ಗ್ರಾಮದ ಮುಖಂಡರು ಇದ್ದರು.

# ನಾಯಕತ್ವ ಬೆಳವಣಿಗೆಗೆ

## ಎನ್.ಎಸ್.ಎಸ್ ಸಹಕಾರಿ : ನಾಯ್ಕರ್



ಮಲ್ಲಮ್ಮ ನುಡಿ ವಾರ್ತೆ


ಹುಮನಾಬಾದ್ : ಇಂದಿನ ವಿದ್ಯಾರ್ಥಿಗಳ ನಾಯಕತ್ವಗುಣಗಳ ಬೆಳವಣಿಗೆಗೆ ರಾಷ್ಟ್ರೀಯ ಸೇವಾ ಯೋಜನೆ ಶಿಬಿರ ಸಹಕಾರಿಯಾಗಿದೆ ಎಂದು ತಾಲೂಕ ಪಂಚಾಯತ ಇಒ ದೀಪಿಕಾ ನಾಯ್ಕರ್ ಹೇಳಿದರು.

ತಾಲೂಕಿನ ಮಾಣಿಕನಗರ ಗ್ರಾಮದ ಮಾಣಿಕಪ್ರಭು ಕ್ರೀಡಾಂಗಣದಲ್ಲಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ವತಿಯಿಂದ ಗುರುವಾರ ನಡೆದ ರಾಷ್ಟ್ರೀಯ ಸೇವಾ ಯೋಜನೆಯ ಶ್ರಮ ದಾನ ಶಿಬಿರ ಉದ್ದೇಶಿಸಿ ಮಾತನಾಡಿದರು.

ಪ್ರಸ್ತುತ ನಾಗರಿಕ ಸಮಾಜದ ಎಲ್ಲ ಕ್ಷೇತ್ರಗಳ ಸಮಗ್ರ ಬೆಳವಣಿಗೆ ಕುರಿತು ಸಂಪೂರ್ಣ ಮಾಹಿತಿ ಪಡೆದು–ಕೊಂಡು ನಾಯಕತ್ವ ಗುಣಗಳ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದರು.

ಸರಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳಿಂದ ಮಾಣಿಕ ನಗರ ಗ್ರಾಮದ ಪ್ರಮುಖ ಬೀದಿಗಳಲ್ಲಿ ಕಾಲ್ನಡಿಗೆ ಜಾಥಾ ನಡೆಸಿ ಸ್ವಚ್ಛತೆ, ನೀರಿನ ಮಿತ ಬಳಕೆ, ಪರಿಸರ ಸಂರಕ್ಷಣೆ ಕುರಿತು ಜನಜಾಗೃತಿ ಮೂಡಿಸಲಾಯಿತು. ಈ ಸಂದರ್ಭದಲ್ಲಿ ಡಾ. ಸಂಜುಕುಮಾರ, ಅಶ್ವಿನಿ, ಡಾ. ರಾಜಾಬಾಯಿ, ಹಸೀನಾ ಬೇಗಂ, ಸಂದೀಪ ಕುರ್ನೆ, ಡಾ. ಪ್ರಹ್ಲಾದ್ ಚಂಗಟೆ, ಡಾ. ಶಾಂತಕುಮಾರ, ಶಿವಾಜಿ ರಾಠೋಡ ಸೇರಿ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ರಾಜ್ಯದ 17 ಅಣೆಕಟ್ಟುಗಳಲ್ಲಿ ಸೂಕ್ತ ಭದ್ರತೆ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಭಾರತ ಮತ್ತು ಪಾಕಿಸ್ತಾದ ಯುದ್ಧ ಭೀತಿ ಹಾಗೂ ರಾಷ್ಟದ ಪ್ರಸ್ತುತ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ರಾಜ್ಯದ 17 ಅಣೆಕಟ್ಟುಗಳಲ್ಲಿ ಅಲರ್ಟ್ ಘೋಷಿಸಲಾಗಿದ್ದು, ನಾರಾಯಣಪುರದ ಬಸವಸಾಗರ ಡ್ಯಾಂನಲ್ಲಿ 42 ಪೊಲೀಸ್ ಸಿಬ್ಬಂದಿ ನಿಯೋಜಿಸಲಾಗಿದೆ.

ಯಾದಗಿರಿ ಜಿಲ್ಲೆಯ ಹುಣಸಗಿ ತಾಲೂಕಿನ ನಾರಾಯಣಪುರದಲ್ಲಿರುವ ಬಸವಸಾಗರ ಜಲಾಶಯ ಯಾದಗಿರಿ, ರಾಯಚೂರು, ಕಲಬುರಗಿ, ವಿಜಯಪುರ ನಾಲ್ಕು ಜಿಲ್ಲೆಗಳ ರೈತರ ಜೀವನಾಡಿಯಾಗಿದೆ. ಸರ್ಕಾರ ರಾಜ್ಯದ 17 ಡ್ಯಾಂಗಳಿಗೆ ಭದ್ರತೆ ಕಲ್ಪಿಸುವಂತೆ ಸೂಚಿಸಿದ್ದು, ನಾರಾಯಣಪುರ ಡ್ಯಾಂನಲ್ಲಿ ಭದ್ರತೆ ವಹಿಸಲಾಗಿದೆ. ಡ್ಯಾಂನ 4 ಗೇಟ್‌ಗಳಲ್ಲಿ ಪೊಲೀಸರು ನಿಗಾವಹಿಸಿದ್ದು, ಯಾದಗಿರಿ, ರಾಯಚೂರು, ವಿಜಯಪುರ ಸೇರಿ 42 ಪೊಲೀಸರನ್ನು ನಿಯೋಜಿಸಲಾಗಿದೆ.

ಸದ್ಯ ಡ್ಯಾಂಗಳ ಸುರಕ್ಷತೆ ದೃಷ್ಟಿಯಿಂದ ಭದ್ರತೆ ಹೆಚ್ಚಿಸಲಾಗಿದ್ದು, ಡ್ಯಾಂ ಸಿಬ್ಬಂದಿ, ಪೊಲೀಸ್ ಸಿಬ್ಬಂದಿ ಹೊರತು ಪಡಿಸಿ ಡ್ಯಾಂ ಒಳಗೆ ಯಾರಿಗೂ ಪ್ರವೇಶವಿಲ್ಲದಂತೆ ನೋಡಿಕೊಳ್ಳಲಾಗುತ್ತಿದೆ. ಈಗಾಗಲೇ ರಾಜ್ಯ ಪೊಲೀಸ್ ಇಲಾಖೆಯೊಂದಿಗೆ ಸಮನ್ವಯ ಮಾಡಿಕೊಂಡು ಹೆಚ್ಚಿನ ಭದ್ರತೆ ಒದಗಿಸಲು ಸರ್ಕಾರ ಆದೇಶಿಸಿದೆ. ತಮ್ಮ ನಿಗಮ ಮತ್ತು ವಲಯ ವ್ಯಾಪ್ತಿಯಲ್ಲಿ ಬರುವ ಅಣೆಕಟ್ಟೆಗಳಿಗೆ ಭದ್ರತೆ ನೀಡಲು ಸೂಚನೆ ನೀಡಿದೆ.

ಒಂದು ವೇಳೆ ಭದ್ರತೆಯಲ್ಲಿ ಯಾವುದೇ ಚ್ಯುತಿಯಾದಲ್ಲಿ ಸಂಬಂಧಪಟ್ಟ ಯೋಜನಾಧಿಕಾರಿ ಅಥವಾ ಅಣೆಕಟ್ಟು ಅಧಿಕಾರಿಗಳೇ ಹೊಣೆಗಾರರು ಎಂದು ಆದೇಶದಲ್ಲಿ ಉಲ್ಲೇಖಿಸಿದೆ. ಯಾವ್ಯಾವ ಅಣೆಕಟ್ಟೆಗಳು?

ಕಾವೇರಿ ನೀರಾವರಿ ನಿಗಮ ನಿಯಮಿತ– ಬೆಂಗಳೂರು, ಕರ್ನಾಟಕ ನೀರಾವರಿ ನಿಗಮ ನಿಯಮಿತ– ಬೆಂಗಳೂರು, ಕೃಷ್ಣ ಭಾಗ್ಯ ಜಲನಿಗಮ ನಿಯಮಿತ– ಬೆಂಗಳೂರು, ವಿಶ್ವೇಶ್ವರಯ್ಯ ಜಲನಿಗಮ ನಿಯಮಿತ–ಬೆಂಗಳೂರು, ಮುಖ್ಯ ಎಂಜಿನಿಯರ್ ನೀರಾವರಿ ದಕ್ಷಿಣ– ಮೈಸೂರು, ಹೇಮಾವತಿ ನಾಲಾವಲಯ– ತುಮಕೂರು, ಹೇಮಾವತಿ ಯೋಜನೆ–ಗೊರೂರು, ನೀರಾವರಿ ಉತ್ತರ– ಬೆಳಗಾವಿ, ತುಂಗಾ ಮೇಲ್ದಂಡೆ– ಶಿವಮೊಗ್ಗ, ಮಲಪ್ರಭಾ ಯೋಜನಾ ವಲಯ– ಧಾರವಾಡ, ಮುನಿರಾಬಾದ್ ನೀರಾವರಿ ಕೇಂದ್ರ ವಲಯ, ನೀರಾವರಿ ಯೋಜನಾ ವಲಯ– ಕಲಬುರಗಿ, ಭದ್ರಾ ಮೇಲ್ದಂಡೆ ಯೋಜನೆ–ಚಿತ್ರದುರ್ಗ, ಆಲಮಟ್ಟಿ ಅಣೆಕಟ್ಟು ವಲಯ, ಕಾಲುವೆ 1 ಭೀಮರಾಯನಗುಡಿ, ಕಾಲುವೆ 2– ರಾಂಪುರ, ನಾರಾಯಣಪುರ ಅಣೆಕಟ್ಟು.

# ಮೂರು ವರ್ಷದೊಳಗೆ ಅತ್ಯುತ್ತಮ ಕಲಬುರ್ಗಿ ನಗರ ನಿರ್ಮಾಣಕ್ಕೆ ಯೋಜನೆ: ಸಚಿವ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮೇ.8: ನಗರವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಿ ಸೌಲಭ್ಯಗಳನ್ನು ಹೆಚ್ಚಿಸುವದರೊಂದಿಗೆ 'ಸ್ಮಾರ್ಟ್ ಸಿಟಿ' ರೂಪಿಸುವ ಸಲುವಾಗಿ ತಜ್ಞರೊಂದಿಗೆ ಜಿಲ್ಲಾ ಉಸ್ತುವಾರಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅವರು ಗುರುವಾರ ಚರ್ಚಿಸಿ, ಮುಂದಿನ ಮೂರು ವರ್ಷದ ಒಳಗೆ ಕಲಬುರಗಿ ನಗರವನ್ನು ಅತ್ಯುತ್ತಮ ನಗರವಾಗಿ ರೂಪಿಸಲು ಯೋಜನೆಗಳನ್ನು ರೂಪಿಸುವುದಾಗಿ ಹೇಳಿದರು.

ಗುಣಮಟ್ಟದ ಕುಡಿಯುವ ನೀರು ಸರಬರಾಜು, ಸುಸ್ಥಿರ ಒಳಚರಂಡಿ ವ್ಯವಸ್ಥೆ, ತ್ಯಾಜ್ಯ ನೀರು ಮರುಬಳಕೆ, ಘನತ್ಯಾಜ್ಯ ಬೇರ್ಪಡಿಸುವಿಕೆ ಹಾಗೂ ವಿಲೇವಾರಿ, ಉತ್ತಮ ಸಂಚಾರಿ ವ್ಯವಸ್ಥೆ, ಹಸಿರೀಕರಣ ಮುಂತಾದ ಮೂಲಭೂತ ಸೌಲಭ್ಯಗಳನ್ನು ಕಲಬುರಗಿ ನಗರಕ್ಕೆ ಒದಗಿಸಲು ಯೋಜಿಸಲಾಗಿದೆ ಎಂದು ಈ ಸಂದರ್ಭದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರು ತಿಳಿಸಿದರು.

ನಗರವನ್ನು ಅತ್ಯುತ್ತಮ ಮೂಲಭೂತ ಸೌಲಭ್ಯಗಳ ನಗರವಾಗಿಸುವ ಮೂಲಕ ಹೆಚ್ಚು ಉದ್ದಿಮೆಗಳನ್ನು ಆಕರ್ಷಿಸುವದರೊಂದಿಗೆ ಹೆಚ್ಚು ಹೆಚ್ಚು ಮಂದಿ ಯುವಕ ಯವತಿಯರಿಗೆ ಉದ್ಯೋಗಸೃಷ್ಟಿಸಲು ಸಾಧ್ಯವಾಗುತ್ತದೆಂದು ಈ ಸಂದರ್ಭದಲ್ಲಿ ಸಚಿವರು ಅಭಿಪ್ರಾಯಪಟ್ಟರು.

ನಗರದ ನೈರ್ಮಲ್ಯ ವ್ಯವಸ್ಥೆಯನ್ನು ಸುಧಾರಿಸುವ ಅವಶ್ಯಕತೆ ಇದೆ ಎಂದು ಹೇಳಿದ ಸಚಿವರು, ಈಗಿನ ಶೇಕಡಾ 50ರಷ್ಟಿರುವ ನೈರ್ಮಲ್ಯ ವ್ಯವಸ್ಥೆಯನ್ನು ನೂರಕ್ಕೆ ನೂರರಷ್ಟು ಬಲಪಡಿಸುವ ಗುರಿಯನ್ನು ಇರಿಸಿಕೊಳ್ಳಲಾಗಿದೆ, ಈ ಸಲುವಾಗಿ ನೈರ್ಮಲ್ಯ ನೌಕರರ ಸಂಖ್ಯೆಯನ್ನು ಹೆಚ್ಚಿಸಲಾಗುವುದು ಎಂಬ ಅಂಶವನ್ನು ವಿವರಿಸಿದರಲ್ಲದೆ, ನಗರದ ನೂರು ಲಕ್ಷ ಚದರ ಅಡಿ ಪ್ರದೇಶದಲ್ಲಿ ಉದ್ಯಾನ ಹಾಗೂ ಮರಗಳನ್ನು ಪೋಷಿಸುವುದರೊಂದಿಗೆ ಕಲಬುರಗಿ ನಗರವನ್ನು ಹಸಿರೀಕರಣಗೊಳಿಸುವ ಯೋಜನೆಯನ್ನು ರೂಪಿಸಲಾಗುವುದು ಎಂದು ಪ್ರಕಟಿಸಿದರು.

ಸಚಿವರ ಯೋಜನೆಗಳಿಗೆ ಅನುಗುಣವಾಗಿ ಕಾರ್ಯಕ್ರಮ ರೂಪಿಸಲು ಇಂಡಿಯನ್ ಇನ್ಸಿಟ್ಯೂಟ್ ಫಾರ್ ಹ್ಯೂಮನ್ ಸೆಟಲ್ಮೆಂಟ್ ಸಂಸ್ಥೆಯು ಸಿದ್ಧಪಡಿಸಿದ್ದ ತಜ್ಞರನ್ನು ಒಳಗೊಂಡ ವರದಿಯನ್ನು ಸಚಿವರು ಹಾಗೂ ಸಭೆಯಲ್ಲಿ ಭಾಗವಹಿಸಿದ್ದ ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳ ಗಮನಕ್ಕೆ ತಂದಿತು.

ಸಭೆಯಲ್ಲಿ ಶಾಸಕರಾದ ಅಲ್ಲಮಪ್ರಭು ಪಾಟೀಲ್,

ಶ್ರೀಮತಿ ಕನೀಜ್ ಫಾತೀಮಾ, ಮಹಾಪೌರ ಯಲ್ಲಪ್ಪ ನಾಯ್ಕೋಡಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಮಜರ್ ಆಲಂಖಾನ್, ಮಹಾನಗರಪಾಲಿಕೆ ಆಯುಕ್ತ ಅವಿನಾಶ್ ಸಿಂಧೆ ಮುಂತಾದವರು ಭಾಗವಹಿಸಿದ್ದರು.

# ಬಸ್ ನಿಲ್ದಾಣದಲ್ಲಿ ಕಳ್ಳತನ: ಇಬ್ಬರು ಕಳ್ಳಿಯರ ಬಂಧನ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.8:ಆಳಂದ ಬಸ್ ನಿಲ್ದಾಣದಲ್ಲಿ ಬುರ್ಕಾ ಧರಿಸಿಕೊಂಡು ಪ್ರಯಾಣಿಕರ ಬಳಿ ಇದ್ದ ಚಿನ್ನಾಭರಣ, ಹಣ ಕಳ್ಳತನ ಮಾಡುತ್ತಿದ್ದ ಪ್ರಕರಣ–ಕ್ಕೆ ಸಂಬಂಧಿಸಿದಂತೆ ಇಬ್ಬರು ಕಳ್ಳಿಯರನ್ನು ಬಂಧಿಸಿರುವ ಆಳಂದ ಪೊಲೀಸರು 1.18 ಲಕ್ಷ ರೂ.ಮೌಲ್ಯದ ನಗನಾಣ್ಯ ಜಪ್ತಿ ಮಾಡಿದ್ದಾರೆ.

ಕಲಬುರಗಿಯ ಬಾಪು ನಗರದ ಸರಿತಾ ಕಾಶಿನಾಥ ಸಕ್ಕಟ ಹಾಗೂ ನಾಗನಳ್ಳಿ ಕ್ರಾಸ್ ಹತ್ತಿರದ ಕರುಣಾನಿಧಿ ಸಿದ್ದರಾಜ ಜೀನಕೇರಿ ಎಂಬುವವರನ್ನು ಬಂಧಿಸಿ 1.18 ಲಕ್ಷ ರೂ.ಮೌಲ್ಯದ ನಗನಾಣ್ಯ ಜಪ್ತಿ ಮಾಡಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಆಳಂದ ಬಸ್ ನಿಲ್ದಾಣದಲ್ಲಿ ಚಿನ್ನಾಭರಣ, ಹಣ ಕಳವಾದ ಹಿನ್ನೆಲೆಯಲ್ಲಿ ಮೋಘಾ (ಬಿ) ಗ್ರಾಮದ ಮಲ್ಲಿನಾಥ ನಡಗೇರಿ, ಪಡಸಾವಳಿ ಗ್ರಾಮದ ವೀರಭದ್ರಪ್ಪ ಪಾರಶೆಟ್ಟಿ ಹಾಗೂ ಚಿಂಚೋಳಿ (ಬಿ) ಗ್ರಾಮದ ಮಹಾದೇವಯ್ಯ ಸ್ವಾಮಿ ಅವರು ಆಳಂದ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು.

ಈ ದೂರಿನ ಅನ್ವಯ ಎಪಿ ಅಡ್ಡೂರು ಶ್ರೀನಿವಾಸಲು, ಹೆಚ್ಚುವರಿ ಎಪಿ ಮಹೇಶ ಮೇಘಣ್ಣನವರ್, ಆಳಂದ ಡಿಎಪಿ ಅವರ ಮಾರ್ಗದರ್ಶನದಲ್ಲಿ ಆಳಂದ ಪೊಲೀಸ್ ಠಾಣೆ ಪಿಐ ಶರಣಬಸಪ್ಪ ಕೋಡ್ಲಾ, ಪಿಎಐಗಳಾದ ಭೀಮರಾಯ ಬಂಕ್ಲಿ, ಸಂಜೀವರೆಡ್ಡಿ, ಸಿಬ್ಬಂದಿಗಳಾದ ಮಹೆಬೂಬ್‌ಶೇಖ್, ಚಂದ್ರಶೇಖರ, ಗಣಪತರಾವ, ಸಚಿನ್, ಜಾಕೀರ್, ವೆಂಕಟರಾವ, ಸಿದ್ದರಾಮ ಮತ್ತು ಮೌಲಾಲಿ ಅವರು ತನಿಖೆ ನಡೆಸಿ ಆಳಂದ ಬಸ್ ನಿಲ್ದಾಣದಲ್ಲಿ ಇಬ್ಬರು ಕಳ್ಳಿಯರನ್ನು ಬಂಧಿಸಿ 7 ಗ್ರಾಂ.ಬಂಗಾರದ ಒಡವೆ ಮತ್ತು 73 ಸಾವಿರ ರೂ.ನಗದು ಸೇರಿ 1.18 ಲಕ್ಷ ರೂ.ಮೌಲ್ಯದ ನಗನಾಣ್ಯ ಜಪ್ತಿ ಮಾಡಿದ್ದಾರೆ. ಬಸ್ ನಿಲ್ದಾಣದಲ್ಲಿ ಕಳ್ಳತನ ಮಾಡುತ್ತಿದ್ದ ಇಬ್ಬರು ಮಹಿಳೆಯರನ್ನು ಬಂಧಿಸುವಲ್ಲಿ ಯಶಸ್ವಿಯಾಗಿರುವ ಆಳಂದ ಪೊಲೀಸ್ ಠಾಣೆ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ಎಪಿ ಅಡ್ಡೂರು ಶ್ರೀನಿವಾಸಲು ಅವರು ಶ್ಲಾಘಿಸಿದ್ದಾರೆ.

# ಕೇಂದ್ರ ಕಾರಾಗೃಹದಿಂದ ಪರಾರಿಯಾಗಿದ್ದ ಕೈದಿಗೆ ಶಿಕ್ಷೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮೇ.8: ಕೇಂದ್ರ ಕಾರಾಗೃಹದಿಂದ ಪರಾರಿಯಾಗಿದ್ದ ಕೈದಿಗೆ 2 ನೇ ಕೆ.ಎಂ.ಎಫ್.ಸಿ. ನ್ಯಾಯಾಲಯ 1 ವರ್ಷ 5 ತಿಂಗಳು ಕಾರಾಗೃಹ ಶಿಕ್ಷೆ ಮತ್ತು 500ರೂ.ದಂಡ, ವಿಧಿಸಿದೆ. ರಮೇಶ ಅಲಿಯಾಸ್ ರಾಮ್ಯಾ ಶಿಕ್ಷೆಗೆ ಒಳಗಾದ ವ್ಯಕ್ತಿಪರಹತಾಬಾದ ಪೊಲೀಸ ಠಾಣೆಯ ವ್ಯಾಪ್ತಿಯ ಕೇಂದ್ರ ಕಾರಾಗೃಹದ ಹೊರ ತೋಟದಲ್ಲಿ 2021 ರ ಜನವರಿ 4 ರಂದು ಬೆಳಿಗ್ಗೆ ಬೆಂಗಾವಲಿನಲ್ಲಿ ಕೆಲಸಕ್ಕೆಂದು ಕರೆದುಕೊಂಡು ಹೋದಾಗ ಬಹಿರ್ದೆಸೆಗೆ ಹೋಗುವುದಾಗಿ ಹೇಳಿ ಆತ ಪರಾರಿಯಾಗಿದ್ದನು. ಈ ಕುರಿತು ಫರಹತಾಬಾದ ಪೊಲೀಸ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ತನಿಖಾಧಿಕಾರಿ ಥಾವರು ಚವ್ಹಾಣ ನ್ಯಾಯಾಲಯಕ್ಕೆ ಆರೋಪ ಪಟ್ಟಿ ಸಲ್ಲಿಸಿದ್ದರುಪ್ರಕರಣದ ವಿಚಾರಣೆಯನ್ನು ನಡೆಸಿದ ಕಲಬುರಗಿಯ 2 ನೇ ಕೆ.ಎಂ. ಎಫ್.ಸಿ. ನ್ಯಾಯಾಲಯದ ನ್ಯಾಯಾಧೀಶರಾದ ಸ್ಮೀತಾ ನಗಲಾಪೂರ ಅವರು ತೀರ್ಪು ನೀಡಿದ್ದಾರೆ. ಸರ್ಕಾರದ ಪರವಾಗಿ ಸಹಾಯಕ ಸರ್ಕಾರಿ ಅಭಿಯೋಜಕ ಬಾಬಾಸಾಬ

ಕೆ ಅವರು ವಾದ ಮಂಡಿಸಿದ್ದರು.

# ಮೇ 9 ಶುಕ್ರವಾರ ರಾಜ್ಯದ ಎಲ್ಲಾ ಮಸೀದಿಗಳಲ್ಲಿ ವಿಶೇಷ ಪ್ರಾರ್ಥನೆ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಮೇ,8:ಭಾರತೀಯ ಸೇನೆಯ ಆಪರೇಷನ್ ಸಿಂಧೂರ ಕಾರ್ಯಾಚರಣೆಗೆ ಎಲ್ಲೆಡೆ ಪ್ರಶಂಸೆ ವ್ಯಕ್ತವಾಗುತ್ತಿದೆ. ಈ ನಿಟ್ಟಿನಲ್ಲಿ ನಮ್ಮ ದೇಶದ ಮೂರು ಸಶಸ್ತ್ರ ಪಡೆಗಳ ಸೈನಿಕರಿಗೆ ಕೃತಜ್ಞತೆ ಸಲ್ಲಿಸಲು ರಾಜ್ಯಾದ್ಯಂತ ಎಲ್ಲಾ ಮಸೀದಿಗಳಲ್ಲಿ ನಾಳೆ ಶುಕ್ರವಾರ ವಿಶೇಷ ಪ್ರಾರ್ಥನೆ ಸಲ್ಲಿಸಲಾಗುವುದು ಎಂದು ಅಲ್ಪಸಂಖ್ಯಾತ ವ್ಯವಹಾರಗಳ ಇಲಾಖೆ ಸಚಿವ ಬಿ ಝಡ್ ಜಮೀರ್ ಅಹ್ಮದ್ ತಿಳಿಸಿದ್ದಾರೆ.

ನಾಳೆ ಶುಕ್ರವಾರ ಮಸೀದಿಗಳಲ್ಲಿ ಮುಸಲ್ಮಾನರೆಲ್ಲರೂ ಸೇರಿ ವಿಶೇಷ ಪ್ರಾರ್ಥನೆ ಸಲ್ಲಿಸಿ ಭಾರತೀಯ ಸೈನಿಕರಿಗೆ ಕೃತಜ್ಞತೆ, ಧೈರ್ಯ ಹಾಗೂ ಶಕ್ತಿ ತುಂಬಲು ಮಸೀದಿಗಳಿಗೆ ಸೂಚನೆ ನೀಡಲಾಗಿದೆ ಎಂದು ಸಚಿವರು ತಿಳಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.